Bruhat Bengaluru
Mahanagara Palike

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಕನ್ನಡ ದಿನಪತ್ರಿಕೆಗಳ ತುಣಕು

## 04-12-2020



# ಪರಿವಿಡಿ

1. ಪ್ರಜಾ ವಾಣಿ
2. ಕನ್ನಡ ಪ್ರಭ
3. ವಿಜಯ ಕರ್ನಾಟಕ
4. ವಿಜಯ ವಾಣಿ
5. ವಿಶ್ವ ವಾಣಿ
6. ಉದಯ ವಾಣಿ
7. ಸಂಯುಕ್ತ ಕರ್ನಾಟಕ
8. ಹೊಸ ದಿಗಂತ
9. ವಾರ್ತಾ ಭಾರತಿ
10. ಜಯಕಿರಣ
11. ಸಂಜೆ ವಾಣಿ
12. ಈ ಸಂಜೆ

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ



| Date | 04-12-2020 |
| --- | --- |
| Page No | 3 |



# ನಗರದಲ್ಲಿ ತಂಪಾದ ವಾತಾವರಣ, ಹೆಚ್ಚಿದ ಚಳಿ

ಬೆಂಗಳೂರು: ಆಗಾಗ ಬೀಸುತ್ತಿದ್ದ ತಂಗಾಳಿ, ಆಗೊಮ್ಮೆ ಈಗೊಮ್ಮೆ ಸುರಿದ ತುಂತುರು ಮಳೆ, ಹೆಚ್ಚಾದ ಚಳಿ. ನಗರದಲ್ಲಿ ಗುರುವಾರ ಇಡೀ ದಿನ ತಂಪಾದ ವಾತಾವರಣ ಇತ್ತು. ಎಳೆ ಬಿಸಿಲು ಕೂಡ ಬೀಳಲಿಲ್ಲ. ಸೂರ್ಯನ ಕಿರಣಗಳು ಪ್ರಖರವಾಗಲೇ ಇಲ್ಲ.

ಸಾಮಾನ್ಯ ದಿನಗಳಲ್ಲಿ 28 ಡಿಗ್ರಿ ಸೆಲ್ಸಿಯಸ್‌ನಷ್ಟು ಇರುತ್ತಿದ್ದ ಗರಿಷ್ಠ ಉಷ್ಣಾಂಶ ಗುರುವಾರ 22 ಡಿಗ್ರಿ ಸೆಲ್ಸಿಯಸ್‌ಗೆ ಇಳಿಕೆಯಾಗಿತ್ತು. ಕನಿಷ್ಠ ಉಷ್ಣಾಂಶ 18 ಡಿಗ್ರಿ ಸೆಲ್ಸಿಯಸ್‌ನಷ್ಟಿತ್ತು. ಶುಕ್ರವಾರವೂ ಇದೇ ರೀತಿಯ ವಾತಾವರಣ ಇರಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ‘ಶುಕ್ರವಾರ, ಶನಿವಾರ ಮತ್ತು ಭಾನುವಾರ ಮಳೆಯಾಗಲಿದ್ದು, ಆದರ ಮುಂದಿನ ಮೂರು ದಿನಗಳಲ್ಲಿ ಇಬ್ಬನಿ ಬೀಳಲಿದೆ’ ಎಂದು ಇಲಾಖೆ ಹೇಳಿದೆ.

ಹೆಚ್ಚು ಬಿಸಿಲು ಬೀಳದ ಕಾರಣ, ಜನರು ಹಾಸಿಗೆಯಿಂದ ಮೇಲೇಳುವುದು ತಡವಾಯಿತು. ವಾಹನ ದಟ್ಟಣೆ, ಜನರ ಓಡಾಟ ಕಡಿಮೆಯಾಗಿ ಬಹುತೇಕ ಲಾಕ್‌ಡೌನ್ ವಾತಾವರಣ ಕಂಡು ಬಂತು. ಬದಲಾದ ವಾತಾವರಣದಿಂದ ಉದ್ಯಾನ ಮತ್ತು ರಸ್ತೆಗಳಲ್ಲಿ ವಾಯು ವಿಹಾರಿಗಳ ಸಂಖ್ಯೆಯೂ ಕಡಿಮೆ ಇತ್ತು.

‘ಚಂಡಮಾರುತದ ಪ್ರಭಾವದಿಂದ ನಗರದಲ್ಲಿ ಈ ರೀತಿಯ ವಾತಾವರಣ ಇದೆ. ರಾಜ್ಯದ ದಕ್ಷಿಣ ಒಳನಾಡಿನಲ್ಲಿ ಮಳೆಯಾಗುವ ಸಾಧ್ಯತೆ ಇದೆ’ ಎಂದು ಹವಾಮಾನ ಇಲಾಖೆಯ ನಿರ್ದೇಶಕ ಸಿ.ಎಸ್. ಪಾಟೀಲ ತಿಳಿಸಿದರು.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 04-12-2020 |
| --- | --- |
| Page No | 3B |


ಹದಗೆಟ್ಟ ರಸ್ತೆಯಿಂದಾಗಿ ಸಂಭವಿಸುವ ಅಪಘಾತ • ಪರಿಹಾರ ವಿತರಣೆಗೆ ಸಿದ್ಧವಾಗಿದೆ ಬಿಬಿಎಂಪಿ ಮಾರ್ಗಸೂಚಿ

# ಮೃತರಿಗೆ ₹ 3 ಲಕ್ಷ, ಗಾಯಾಳುವಿಗೆ ₹ 15 ಸಾವಿರ

• ಪ್ರವೀಣ್ ಕುಮಾರ್ ಪಿ.ವಿ.

**ಬೆಂಗಳೂರು:** ರಸ್ತೆ ಹದಗೆಡುವುದರಿಂದ ಅಥವಾ ಗುಂಡಿಗಳಿಂದಾಗಿ ಸಂಭವಿಸುವ ಅಪಘಾತದಲ್ಲಿ ಗಾಯಗೊಂಡವರಿಗೆ ಅಥವಾ ಸಾವಿಗೀಡಾಗುವವರ ಕುಟುಂಬಕ್ಕೆ ಪರಿಹಾರ ನೀಡುವುದಕ್ಕೆ ಬಿಬಿಎಂಪಿ ಮಾರ್ಗಸೂಚಿ ಸಿದ್ಧಪಡಿಸಿದೆ.

ಹದಗೆಟ್ಟ ರಸ್ತೆಯಲ್ಲಿ ಸಂಭವಿಸುವ ಅಪಘಾತದಲ್ಲಿ ಗಾಯಗೊಂಡವರಿಗೆ ಅಥವಾ ಮೃತಪಟ್ಟವರ ಕುಟುಂಬಕ್ಕೆ ಬಿಬಿಎಂಪಿಯೇ ಪರಿಹಾರ ನೀಡಬೇಕು ಎಂದು ಹೈಕೋರ್ಟ್ ಆದೇಶ ಮಾಡಿತ್ತು. ಮೃತರ ಕುಟುಂಬಕ್ಕೆ ₹ 3 ಲಕ್ಷ ಹಾಗೂ ಗಂಭೀರ ಗಾಯಗೊಂಡವರಿಗೆ ₹ 15 ಸಾವಿರದವರೆಗೆ ಪರಿಹಾರವನ್ನು ಬಿಬಿಎಂಪಿ ನಿಗದಿಪಡಿಸಿದೆ.

ಸಣ್ಣ ಪ್ರಮಾಣದ ಗಾಯಕ್ಕೆ ₹ 5000 ಹಾಗೂ ಇತರ ಹೆಚ್ಚುವರಿ ಗಾಯಗಳಿಗೆ ತಲಾ ₹ 500ರಂತೆ ಪರಿಹಾರ ನೀಡಬಹುದು. ವೈದ್ಯಕೀಯ ವೆಚ್ಚದ ರೂಪದಲ್ಲಿ ₹ 10 ಸಾವಿರದವರೆಗೆ ಮಧ್ಯಂತರ ಪರಿಹಾರ ನೀಡಲು ಮಾರ್ಗಸೂಚಿಯಲ್ಲಿ ಅವಕಾಶ ಕಲ್ಪಿಸಲಾಗಿದೆ. ಗಾಯದ ನೋವು ಉಳಿದುಕೊಂಡು ಮೂರ್ನಾಲ್ಕು ದಿನಗಳ ಕಾಲ ಚಿಕಿತ್ಸೆ ಪಡೆದರೆ ₹ 10 ಸಾವಿರದವರೆಗೆ ಪರಿಹಾರ ನೀಡಬಹುದು. ಗಾಯಕ್ಕೆ ಪರಿಹಾರ ಪಡೆದ ಬಳಿಕ ಚಿಕಿತ್ಸೆಗೆ ಪ್ರತ್ಯೇಕವಾಗಿ ಪರಿಹಾರ ನೀಡಲು ಬರುವುದಿಲ್ಲ. ಎಕ್ಸ್‌-ರೇ ಮತ್ತಿತರ ಪರೀಕ್ಷೆಗಳನ್ನು ನಡೆಸಿದ್ದರೆ ಅದರ ವೆಚ್ಚ ಮರುಪಾವತಿ ಮಾಡಬಹುದು ಎಂದು ಮಾರ್ಗಸೂಚಿಯಲ್ಲಿ ಹೇಳಲಾಗಿದೆ.

ಪ್ರಜಾವಾಣಿ ವಿಶೇಷ

ಬಿಬಿಎಂಪಿಯ ಕಂದಾಯ ವಿಭಾಗದ ವಿಶೇಷ ಆಯುಕ್ತರು ಅಥವಾ ಈ ಸಲುವಾಗಿಯೇ ನೇಮಕಗೊಳ್ಳಲಿರುವ ಅಧಿಕಾರಿ ಈ ಪರಿಹಾರ ವಿತರಣೆಯ ಹೊಣೆ ವಹಿಸಲಿದ್ದಾರೆ. ಬಿಬಿಎಂಪಿ ವ್ಯಾಪ್ತಿಯ ರಸ್ತೆ ಅಪಘಾತದಲ್ಲಿ ಮೃತಪಟ್ಟವರ ಕುಟುಂಬದವರು ಅಥವಾ ಗಾಯಾಳುಗಳು ಪರಿಹಾರ ಕೋರಿ ಈ ಅಧಿಕಾರಿಗೆ ಅರ್ಜಿ ಸಲ್ಲಿಸಬಹುದು.

ಪರಿಹಾರ ಕೋರುವವರು ಅಪಘಾತ ಸಂಭವಿಸಿದ ಒಂದು ತಿಂಗಳ ಒಳಗೆ ಬಿಬಿಎಂಪಿಯ ವಿಶೇಷ ಆಯುಕ್ತರು (ಕಂದಾಯ) ಅಥವಾ ಸಂಬಂಧ ಪಟ್ಟ ಅಧಿಕಾರಿಗೆ ಪರಿಹಾರ ಕೋರಿ ಅರ್ಜಿ ಸಲ್ಲಿಸಬೇಕು. ರಸ್ತೆ ಅಪಘಾತಕ್ಕೆ ಕಾರಣವಾದ ಅಂಶಗಳನ್ನು ಉಲ್ಲೇಖಿಸಿ ಪ್ರಮಾಣಪತ್ರವನ್ನು ಹಾಗೂ ಪೂರಕ ದಾಖಲೆಗಳನ್ನು ಒದಗಿಸಬೇಕು. ಸಕಾರಣಗಳಿದ್ದರೆ ಒಂದು ತಿಂಗಳ ನಂತರ ಸಲ್ಲಿಕೆಯಾಗುವ ಅರ್ಜಿಯನ್ನು ಪುರಸ್ಕರಿಸುವ ಅಧಿಕಾರ ವಿಶೇಷ ಆಯುಕ್ತರಿಗೆ ಇರುತ್ತದೆ.

ಅರ್ಜಿ ಹಾಗೂ ಸಲ್ಲಿಸಿದ ದಾಖಲೆಗಳು ಸಮಂಜಸವಾಗಿವೆ ಎಂದು ಮೇಲ್ನೋಟಕ್ಕೆ ಕಂಡುಬಂದರೆ ವಿಶೇಷ ಆಯುಕ್ತರು ಅರ್ಜಿ ಸಲ್ಲಿಕೆಯಾದ ವಾರದೊಳಗೆ ಲಿಖಿತವಾಗಿ ಈ ಬಗ್ಗೆ ಉಲ್ಲೇಖಿಸಬೇಕು. ಒಂದು ವೇಳೆ ಅರ್ಜಿ ತಮ್ಮ ವ್ಯಾಪ್ತಿಗೆ ಬರುವುದಿಲ್ಲ ಎಂದು ಕಂಡುಬಂದರೆ ಅದನ್ನು ಘಟನೆ ನಡೆದ ಸ್ಥಳದ ಸಂಬಂಧಪಟ್ಟ ಅಧಿಕಾರಿಗೆ ವರ್ಗಾಯಿಸಬಹುದು. ಅರ್ಜಿಯು ಸಮಂಜಸವಾಗಿದ್ದರೆ, ಅದು ಸಲ್ಲಿಕೆಯಾದ 14 ದಿನಗಳ ಒಳಗೆ ಪರಿಹಾರ ವಿತರಿಸಲು ಕ್ರಮಕೈಗೊಳ್ಳಬೇಕು. ಪರಿಹಾರ ವಿತರಣೆಗೆ ಆದೇಶವಾದ 15 ದಿನಗಳ ಒಳಗೆ ಮೊತ್ತವನ್ನು ಸಂಬಂಧಪಟ್ಟವರಿಗೆ ತಲುಪಿಸಬೇಕು.

ಅರ್ಜಿಯನ್ನು ತಿರಸ್ಕರಿಸುವುದೇ ಆದರೆ ಯಾವ ಕಾರಣಕ್ಕಾಗಿ ತಿರಸ್ಕರಿಸಲಾಗುತ್ತಿದೆ ಎಂದು ಅಭಿಪ್ರಾಯವನ್ನೂ ಅಧಿಕಾರಿ ತನ್ನ ಆದೇಶದಲ್ಲಿ ಉಲ್ಲೇಖಿಸಬೇಕು.

ಈ ಮಾರ್ಗಸೂಚಿಯಲ್ಲಿರುವ ಯಾವುದೇ ಅಂಶಗಳು ಅನುಷ್ಠಾನ ಕಷ್ಟಸಾಧ್ಯ ಎಂಬ ಪರಿಸ್ಥಿತಿ ಎದುರಾದರೆ ಈ ವಿಚಾರವನ್ನು ವಿಶೇಷ ಆಯುಕ್ತರು ಬಿಬಿಎಂಪಿ ಆಯುಕ್ತರ ಗಮನಕ್ಕೆ ತರಬೇಕು. ಈ ಮಾರ್ಗ ಸೂಚಿಗಳು ಪರಿಹಾರ ವಿತರಣೆಗೆ ಸಂಬಂಧಿಸಿದಂತೆ ನ್ಯಾಯಮಂಡಳಿ ಅಥವಾ ಸಿವಿಲ್ ಕೋರ್ಟ್‌ಗಳು ಪರಿಹಾರ ನೀಡುವುದಕ್ಕೆ ಸಂಬಂಧಿಸಿ ಆದೇಶ ನೀಡುವುದಕ್ಕೆ ಅಡ್ಡಿಪಡಿಸುವುದಿಲ್ಲ ಹಾಗೂ ಈಗಿರುವ ಯಾವುದೇ ಕಾನೂನಿಗೂ ಹಾನಿ ಮಾಡುವುದಿಲ್ಲ ಎಂದು ಮಾರ್ಗಸೂಚಿಯಲ್ಲಿ ಸ್ಪಷ್ಟಪಡಿಸಲಾಗಿದೆ.

ಅಪಘಾತದಲ್ಲಿ ಯಾವುದಾದರೂ ಸ್ವತ್ತಿಗೆ ಹಾನಿಯಾಗಿದ್ದರೆ ಅಥವಾ ವ್ಯಕ್ತಿ ಮೃತಪಟ್ಟಿದ್ದರೆ, ಗಾಯಗೊಂಡಿದ್ದರೆ ಮೋಟಾರು ವಾಹನ ಕಾಯ್ದೆ ಪ್ರಕಾರ ಅಥವಾ ಬಿಬಿಎಂಪಿ ಮೂಲಕ, ಎರಡರಲ್ಲಿ ಒಂದರ ಮೂಲಕ ಮಾತ್ರ ಪರಿಹಾರ ಪಡೆಯಲು ಅರ್ಹರು.

## ಅರ್ಜಿ ತಿರಸ್ಕರಿಸಲು ಕಾರಣಗಳು

- ಒದಗಿಸಿದ ದಾಖಲೆಗಳನ್ನು ಫೋರ್ಜರಿ ಮಾಡಿದ್ದರೆ
- ಅರ್ಜಿದಾರರು ಸತ್ಯ ಸಂಗತಿ ಮುಚ್ಚಿಟ್ಟಿದ್ದರೆ
- ನಿಗದಿತ ಅವಧಿಯೊಳಗೆ ಅರ್ಜಿ ಸಲ್ಲಿಕೆಯಾಗದಿದ್ದರೆ
- ಅಪಘಾತ ನಡೆದ ರಸ್ತೆಯಲ್ಲಿ ಅಥವಾ ಅಲ್ಲಿ ರಸ್ತೆಗುಂಡಿಗಳು ಇರುವ ಬಗ್ಗೆ ಸಾರ್ವಜನಿಕರಿಗೆ ಮುನ್ನೆಚ್ಚರಿಕೆ ನೀಡಲು ಪಾಲಿಕೆ ಕ್ರಮ ಕೈಗೊಂಡಿದ್ದರೆ
- ಅರ್ಜಿದಾರರು ವಂಚನೆ ನಡೆಸುತ್ತಿರುವುದು ಕಂಡುಬಂದರೆ
- ಮೃತ ವ್ಯಕ್ತಿಗೆ ಸಂಬಂಧಪಡದವರು ಸುಳ್ಳು ಅರ್ಜಿ ಸಲ್ಲಿಸಿದ್ದರೆ
- ಸುಳ್ಳು ದಾಖಲೆ ಒದಗಿಸಿ ಪರಿಹಾರ ಪಡೆದರೆ ಅದರ ಜಪ್ತಿಗೂ ಅಧಿಕಾರಿ ಆದೇಶ ಮಾಡಬಹುದು

## ಯಾರಿಗಿದೆ ಪರಿಹಾರ ಪಡೆಯುವ ಹಕ್ಕು

ಹದಗೆಟ್ಟ ರಸ್ತೆಯ ಕಾರಣಕ್ಕೆ ಸಂಭವಿಸಿದ ಅಪಘಾತದಲ್ಲಿ ಮೃತಪಟ್ಟವರ ಕುಟುಂಬದವರು, ಅವಲಂಬಿತರು ಅಥವಾ ಬಂಧುಗಳು ಮಾರ್ಗಸೂಚಿ ಪ್ರಕಾರ ಪರಿಹಾರ ಪಡೆಯುವ ಹಕ್ಕು ಹೊಂದಿರುತ್ತಾರೆ. ಆ ವ್ಯಕ್ತಿ ವಾಹನದಲ್ಲಿ ಆ ರಸ್ತೆಯಲ್ಲಿ ಸಾಗಿರಬೇಕು ಅಥವಾ ಪಾದಚಾರಿಯಾಗಿ ಆ ರಸ್ತೆಯನ್ನು ಬಳಸಿರಬೇಕು. ಹದಗೆಟ್ಟ ರಸ್ತೆಯ ಕಾರಣಕ್ಕೆ ಸಂಭವಿಸುವ ಅಪಘಾತದಲ್ಲಿ ಗಾಯಗೊಳ್ಳುವವರೂ ಪರಿಹಾರ ಪಡೆಯುವ ಹಕ್ಕು ಹೊಂದಿರುತ್ತಾರೆ.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| | |
|---|---|
| Date | 04-12-2020 |
| Page No | 3B |




ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 04-12-2020 |
|---|---|
| Page No | 4 |

## ‘ಹಾಸ್ಟೆಲ್ ಕಟ್ಟಡಕ್ಕೆ ಸಿಗದ ಅನುಮತಿ ಒಳಾಂಗಣ ಕ್ರೀಡಾಂಗಣಕ್ಕೆ ಸಿಕ್ಕಿದ್ದು ಹೇಗೆ?’

# ಉದ್ಯಾನದ ಜಾಗದಲ್ಲಿ ಕಟ್ಟಡ

ಪ್ರಜಾವಾಣಿ ವಾರ್ತೆ

**ಬೆಂಗಳೂರು:** ಬ್ಯಾಟರಾಯನಪುರ ಕ್ಷೇತ್ರದ ಕೊಡಿಗೆಹಳ್ಳಿ ವಾರ್ಡ್‌ನ ಸಹಕಾರ ನಗರದಲ್ಲಿ ಉದ್ಯಾನಕ್ಕೆ ಮೀಸಲಿಟ್ಟಿದ್ದ ಜಾಗದಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಿಸಲಾಗುತ್ತಿದ್ದು, ಇದಕ್ಕೆ ಆಕ್ಷೇಪ ವ್ಯಕ್ತವಾಗಿದೆ.

ಬಿಬಿಎಂಪಿಗೆ ಸೇರ್ಪಡೆಯಾಗಿದ್ದ ನಗರಸಭೆ ಮತ್ತು ಪುರಸಭೆ ಪ್ರದೇಶಗಳ ಅಭಿವೃದ್ಧಿಗಾಗಿ ರಾಜ್ಯ ಸರ್ಕಾರ ಮಂಜೂರು ಮಾಡಿರುವ ವಿಶೇಷ ಅನುದಾನದಲ್ಲಿ ₹ 6.55 ಕೋಟಿ ವೆಚ್ಚದಲ್ಲಿ ಒಳಾಂಗಣ ಕ್ರಿಡಾಂಗಣ ನಿರ್ಮಿಸಲಾಗುತ್ತಿದೆ. ಇದಕ್ಕೆ 2018ರಲ್ಲೇ ಕಾರ್ಯಾದೇಶ ನೀಡಲಾಗಿದೆ. ಒಳಾಂಗಣ ಕ್ರೀಡಾಂಗಣದ ಕಾಮಗಾರಿಯೂ ಶೇ 50ರಷ್ಟು ಪೂರ್ಣಗೊಂಡಿದೆ. ಉದ್ಯಾನಕ್ಕೆ ಮೀಸಲಿರಿಸಿದ ಜಾಗವನ್ನು ಒತ್ತುವರಿ ಮಾಡಿಕೊಂಡು ಪಾಲಿಕೆ ಕಟ್ಟಡ ನಿರ್ಮಿಸಿದೆ ಎಂದು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ (ಬಿಡಿಎ) ನಕ್ಷೆಯಲ್ಲಿ ಉಲ್ಲೇಖಿಸಲಾಗಿದೆ.

‘ಇದೇ ಜಾಗದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ವಿದ್ಯಾರ್ಥಿಗಳಿಗೆ ಹಾಸ್ಟೆಲ್ ನಿರ್ಮಿಸಲು ಉದ್ದೇಶಿಸಲಾಗಿತ್ತು. ಇದು ಉದ್ಯಾನಕ್ಕೆ ಮೀಸಲಾದ ಜಾಗ ಎಂಬ ಕಾರಣಕ್ಕೆ ಕಟ್ಟಡ ನಿರ್ಮಾಣಕ್ಕೆ ಅನುಮತಿ ನಿರಾಕರಿಸಲಾಗಿತ್ತು. ಅದೇ ಜಾಗದಲ್ಲಿ ಒಳಾಂಗಣ ಕ್ರೀಡಾಂಗಣದ ಕಟ್ಟಡ ನಿರ್ಮಾಣ ಹೇಗೆ ಸಾಧ್ಯ’ ಎಂದು ಬಿಜೆಪಿ ಮುಖಂಡ ಕೆ.ಎನ್.ಚಕ್ರಪಾಣಿ ಪ್ರಶ್ನಿಸಿದರು.



ಸಹಕಾರನಗರದಲ್ಲಿ ನಿರ್ಮಾಣವಾಗುತ್ತಿರುವ ಒಳಾಂಗಣ ಕ್ರೀಡಾಂಗಣ

‘ಒಳಾಂಗಣ ಕ್ರೀಡಾಂಗಣಕ್ಕೆ ಉದ್ಯಾನದ ಜಾಗ ಬಳಸಿಕೊಳ್ಳುವ ವಿಷಯ ತಿಳಿದು ನಾವು ಆರಂಭದಲ್ಲೇ ಅಧಿಕಾರಿಗಳನ್ನು ಭೇಟಿಯಾಗಿ ಆಕ್ಷೇಪ ವ್ಯಕ್ತಪಡಿಸಿದ್ದೆವು. ನಮ್ಮ ಆಕ್ಷೇಪವನ್ನು ಕಡೆಗಣಿಸಿ ಕಟ್ಟಡ ನಿರ್ಮಿಸುತ್ತಿದ್ದಾರೆ. ಈ ಕಾಮಗಾರಿಯನ್ನು ಸ್ಥಗಿತಗೊಳಿಸಬೇಕು’ ಎಂದು ಅವರು ಒತ್ತಾಯಿಸಿದರು.

‘ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ (ಬಿಡಿಎ) ಈ ಬಡಾವಣೆಯಲ್ಲಿ ಒಟ್ಟು ಆರು ಕಡೆ ಉದ್ಯಾನಗಳಿಗೆ ಜಾಗ ಮೀಸಲಿಟ್ಟಿತ್ತು. ಅವುಗಳಲ್ಲಿ ಮೂರು ಕಡೆ ಮಾತ್ರ ಉದ್ಯಾನವನ್ನು ಅಭಿವೃದ್ಧಿಪಡಿಸಲಾಗಿದೆ. ಉಳಿದ ಜಾಗಗಳು ಹಾಗೆಯೇ ಇವೆ. ಅವುಗಳಲ್ಲಿ ಉದ್ಯಾನವನ್ನು ಅಭಿವೃದ್ಧಿಪಡಿಸಬೇಕು. ಅನ್ಯ ಉದ್ದೇಶಕ್ಕೆ ಬಳಸಬಾರದು’ ಎಂದು ಅವರು ಒತ್ತಾಯಿಸಿದರು.

‘ಈ ಪ್ರದೇಶದಲ್ಲಿ ಜನವಸತಿ ಹೆಚ್ಚುತ್ತಿದೆ. ಹಾಗಾಗಿ ಕಟ್ಟಡಗಳಿಗಿಂತ ಉದ್ಯಾನದ ಅವಶ್ಯಕತೆ ಹೆಚ್ಚು ಇದೆ. ಇನ್ನಾದರೂ ಸರ್ಕಾರ ಎಚ್ಚೆತ್ತು ಜಾಗ ಲಭ್ಯ ಇರುವ ಕಡೆ ಆದಷ್ಟು ಸಸಿಗಳನ್ನು ಬೆಳೆಸಬೇಕು’ ಎಂದು ಅವರು ಸಲಹೆ ನೀಡಿದರು.

**ಅಂಕಿ-ಅಂಶಗಳು**

**2,69,490**
ಚ.ಅಡಿ, ಸಹಕಾರ ನಗರ ಬಡಾವಣೆಯಲ್ಲಿ ಉದ್ಯಾನಕ್ಕೆ ಬಿಡಿಎ ಕಾಯ್ದಿರಿಸಿದ ಒಟ್ಟು ಜಾಗ

**6,79,200**
ಚ.ಅಡಿ, ಬಡಾವಣೆಯಲ್ಲಿ ರಸ್ತೆ ನಿರ್ಮಾಣಕ್ಕೆ ಕಾಯ್ದಿರಿಸಿದ ಜಾಗ

ಈ ಕುರಿತು ಪ್ರತಿಕ್ರಿಯಿಸಿದ ಬಿಬಿಎಂಪಿ ಯಲಹಂಕ ವಲಯದ ಕಾರ್ಯಪಾಲಕ ಎಂಜಿನಿಯರ್ (ಯೋಜನೆ) ದೇವ ನಾಯ್ಕ್, ‘ನಾನು ಇತ್ತೀಚೆಗಷ್ಟೇ ಇಲ್ಲಿಗೆ ವರ್ಗಾವಣೆಗೊಂಡಿದ್ದೇನೆ. ಹಾಗಾಗಿ ಇದರ ಹಿನ್ನೆಲೆಯ ತಿಳಿಯದು’ ಎಂದರು.

‘ಇಲ್ಲಿ ಒಳಾಂಗಣ ಕ್ರೀಡಾಂಗಣ ನಿರ್ಮಿಸುವ ಬಗ್ಗೆ 2017ರಲ್ಲೇ ನಿರ್ಣಯ ಕೈಗೊಳ್ಳಲಾಗಿದೆ. 2018ರ ಜನವರಿ ತಿಂಗಳಲ್ಲೇ ಕಾರ್ಯಾದೇಶವನ್ನೂ ನೀಡಲಾಗಿದೆ. ಒಳಾಂಗಣ ಕ್ರೀಡಾಂಗಣ ನಿರ್ಮಿಸುವುದಕ್ಕೆ ಮೂರು ವರ್ಷಗಳ ಬಳಿಕ ಧುತ್ತೆಂದು ಆಕ್ಷೇಪ ವ್ಯಕ್ತವಾಗಿದ್ದಾದರೂ ಏಕೆ ಎಂದು ತಿಳಿಯದು’ ಎಂದರು.

ಪ್ರಜಾವಾಣಿ
ಅತ್ಯಂತ ವಿಶ್ವಾಸಾರ್ಹ ಸುದ್ದಿ ಮಾಧ್ಯಮ

| Date | 04-12-2020 |
| --- | --- |
| Page No | 5 |

**ತಾಂತ್ರಿಕ ಸಮಿತಿ ಸದಸ್ಯರು, ಅಧಿಕಾರಿಗಳ ಜತೆ ಮಹತ್ವದ ಸಭೆ- ಸಚಿವ ಸುಧಾಕರ್**

# ಎರಡನೇ ಅಲೆ: ನಿರ್ಬಂಧಗಳ ಇತ್ಯರ್ಥ ಇಂದು

ಪ್ರಜಾವಾಣಿ ವಾರ್ತೆ

**ಬೆಂಗಳೂರು:** 'ರಾಜ್ಯದಲ್ಲಿ ಕೋವಿಡ್ ಎರಡನೇ ಅಲೆ ಕಾಣಿಸಿಕೊಳ್ಳಲಿದೆ ಎಂಬ ವರದಿ ಕುರಿತಂತೆ ತಜ್ಞರು ಮತ್ತು ಅಧಿಕಾರಿಗಳ ಜತೆ ಚರ್ಚಿಸಿ, ನಿಯಂತ್ರಣಕ್ಕೆ ಕೈಗೊಳ್ಳಬೇಕಿರುವ ಕ್ರಮಗಳ ಬಗ್ಗೆ ನಿರ್ಧರಿಸಲಾಗುವುದು' ಎಂದು ಆರೋಗ್ಯ ಮತ್ತು ವೈದ್ಯಕೀಯ ಶಿಕ್ಷಣ ಸಚಿವ ಡಾ.ಕೆ. ಸುಧಾಕರ್ ಹೇಳಿದರು.

ಸುದ್ದಿಗಾರರ ಜೊತೆ ಗುರುವಾರ ಮಾತನಾಡಿದ ಅವರು, 'ತಜ್ಞರ ವರದಿ ಇನ್ನೂ ಅಧಿಕಾರಿಗಳ ಮಟ್ಟದಲ್ಲಿದೆ. ಆ ವರದಿ ಮತ್ತು ಮುಂದೆ ಕೈಗೊಳ್ಳಬೇಕಿರುವ ಕ್ರಮಗಳ ಬಗ್ಗೆ ತಾಂತ್ರಿಕ ಸಮಿತಿ ತಜ್ಞರು ಮತ್ತು ಹಿರಿಯ ಅಧಿಕಾರಿಗಳ ಜತೆ ಶುಕ್ರವಾರ ಸಭೆ ನಡೆಸಲಾಗುವುದು. ಸಭೆಯ ತೀರ್ಮಾನಗಳ ಬಗ್ಗೆ ಮುಖ್ಯಮಂತ್ರಿ ಹಾಗೂ ಸಚಿವ ಸಹೋದ್ಯೋಗಿಗಳ ಜತೆ ಸಮಾಲೋಚಿಸಿ ಅಂತಿಮ ನಿರ್ಧಾರ ಪ್ರಕಟಿಸಲಾಗುವುದು' ಎಂದರು.

'ಕೋವಿಡ್‌ನ ಎರಡನೇ ಅಲೆ ಪರಿಣಾಮಕಾರಿಯಾಗಿರುತ್ತದೆ ಎಂದು ವೈಯಕ್ತಿಕವಾಗಿ ನನಗೆ ಅನ್ನಿಸುತ್ತಿಲ್ಲ. ಆದರೂ, ತಜ್ಞರು ನಡೆಸಿರುವ ಅಧ್ಯಯನ ವರದಿಯಲ್ಲಿರುವ ಅಂಶಗಳನ್ನು ಪರಿಶೀಲಿಸಿ ಎಚ್ಚರಿಕೆಯ ಹೆಜ್ಜೆ ಇಡಲಾಗುವುದು' ಎಂದರು.

'ಕೋವಿಡ್ ಲಸಿಕೆ ವಿತರಣೆ ಮತ್ತು ದಾಸ್ತಾನು ಸಂಬಂಧ ಸಿದ್ಧತೆ ಮಾಡಿಕೊಳ್ಳಲಾಗಿದೆ. ಯಾವ ವ್ಯಾಕ್ಸಿನ್, ಎಷ್ಟು ಪ್ರಮಾಣದಲ್ಲಿ ನೀಡಬೇಕು, ಯಾರಿಗೆ ನೀಡಬೇಕು ಎಂಬ ವಿಷಯಗಳು ಇತ್ಯರ್ಥಗೊಂಡ ತಕ್ಷಣ ವ್ಯಾಕ್ಸಿನ್ ವಿತರಣೆ ವ್ಯವಸ್ಥಿತವಾಗಿ ನಡೆಯಲಿದೆ' ಎಂದರು.

**ವಾರದೊಳಗೆ ವೇತನ:** 'ಕಡ್ಡಾಯ ಸೇವೆಗಾಗಿ ನೇಮಕಗೊಂಡಿರುವ ರೆಸಿಡೆಂಟ್ ಡಾಕ್ಟರ್‌ಗಳಿಗೆ ತಾಂತ್ರಿಕ ಕಾರಣಗಳಿಂದ ವೇತನ ಬಿಡುಗಡೆ ವಿಳಂಬವಾಗಿದೆ. ವಾರದೊಳಗಾಗಿ ವೇತನ ಬಿಡುಗಡೆಯಾಗಲಿದೆ. ಅಲ್ಲಿಯವರೆಗೆ ಆಯಾ ಕಾಲೇಜುಗಳ ಆಡಳಿತ ಮಂಡಳಿಗಳಿಗೆ ವೇತನ ನೀಡಲು ಸೂಚಿಸಲಾಗಿದೆ' ಎಂದರು.

**ವಿಶ್ವನಾಥ್ ಒಂಟಿಯಲ್ಲ:** 'ವಿಶ್ವನಾಥ್ ಅವರು ಒಂಟಿಯಲ್ಲ. ಮುಖ್ಯಮಂತ್ರಿ ಸಹಿತ ನಾವು 17 ಮಂದಿಯೂ ಅವರ ಜೊತೆಗಿದ್ದೇವೆ. ನಾವೆಲ್ಲರೂ ಈಗ ಬಿಜೆಪಿ ಕಾರ್ಯಕರ್ತರೇ ಆಗಿದ್ದೇವೆ. ಅವರನ್ನು ಏಕಾಂಗಿಯಾಗಿಸುವ ಪ್ರಶ್ನೆಯೇ ಇಲ್ಲ' ಎಂದೂ ಸುಧಾಕರ್ ಹೇಳಿದರು.

## ಐಸಿಯುದಲ್ಲಿ ರೋಗಿಗಳ ಸಂಖ್ಯೆ ಇಳಿಕೆ

**ಬೆಂಗಳೂರು:** ಕೋವಿಡ್ ಪೀಡಿತರಲ್ಲಿ ತೀವ್ರ ನಿಗಾ ಘಟಕಕ್ಕೆ (ಐಸಿಯು) ದಾಖಲಾಗುವವರ ಸಂಖ್ಯೆಯು ಇಳಿಮುಖ ಕಂಡಿದ್ದು, ಸದ್ಯ 299 ಮಂದಿ ಐಸಿಯುನಲ್ಲಿದ್ದಾರೆ. ಕಳೆದ ತಿಂಗಳು ಈ ವೇಳೆ 932 ಮಂದಿ ಐಸಿಯುನಲ್ಲಿ ಇದ್ದರು. ಕೋವಿಡ್ ಮರಣ ಪ್ರಕರಣಗಳ ಸಂಖ್ಯೆಯೂ ಇಳಿಕೆಯಾಗಿದ್ದು, ಗುರುವಾರ 13 ಮಂದಿ ಮೃತಪಟ್ಟಿರುವುದು ದೃಢಪಟ್ಟಿದೆ. ಈವರೆಗೆ ಸಾವಿಗೀಡಾದವರ ಒಟ್ಟು ಸಂಖ್ಯೆ 11,821ಕ್ಕೆ ತಲುಪಿದೆ. ರಾಜ್ಯದಲ್ಲಿ ಹೊಸದಾಗಿ 1,446 ಕೋವಿಡ್ ಪ್ರಕರಣಗಳು ವರದಿಯಾಗಿದ್ದು, ಸೋಂಕಿಗೀಡಾದವರ ಒಟ್ಟು ಸಂಖ್ಯೆ 8.89 ಲಕ್ಷಕ್ಕೆ ಏರಿಕೆಯಾಗಿದೆ.

ಕೋವಿಡ್ ಪೀಡಿತರಲ್ಲಿ ರಾಜ್ಯದಲ್ಲಿ 894 ಮಂದಿಗೆ ಕಾಯಿಲೆ ವಾಸಿಯಾಗಿದೆ. ಇದರಿಂದಾಗಿ ಗುಣಮುಖರ ಸಂಖ್ಯೆ 8.52 ಲಕ್ಷ ದಾಟಿದೆ. ಸೋಂಕಿತರಲ್ಲಿ ಸದ್ಯ 24,689 ಮಂದಿ ಆಸ್ಪತ್ರೆ ಸೇರಿದಂತೆ ವಿವಿಧೆಡೆ ಚಿಕಿತ್ಸೆ ಪಡೆದುಕೊಳ್ಳುತ್ತಿದ್ದಾರೆ. ಒಂದೇ ದಿನ 90 ಸಾವಿರ ಆರ್‌ಟಿ–ಪಿಸಿಆರ್ ಸೇರಿದಂತೆ 1.08 ಲಕ್ಷ ಪರೀಕ್ಷೆಗಳನ್ನು ನಡೆಸಲಾಗಿದೆ. ಈವರೆಗೆ 1.14 ಕೋಟಿ ಮಂದಿ ಕೋವಿಡ್ ಪರೀಕ್ಷೆ ಮಾಡಿಸಿಕೊಂಡಿದ್ದಾರೆ. ಬೆಂಗಳೂರಿನಲ್ಲಿ 758 ಮಂದಿ ಕೋವಿಡ್ ಪೀಡಿತರಾಗಿದ್ದು, ಸೋಂಕಿತರ ಸಂಖ್ಯೆ 3.71 ಲಕ್ಷ ದಾಟಿದೆ. ಮಂಡ್ಯದಲ್ಲಿ ಮತ್ತೆ 75 ಪ್ರಕರಣಗಳು ವರದಿಯಾಗಿದೆ. ತುಮಕೂರು (68), ಮೈಸೂರು (53), ಚಿತ್ರದುರ್ಗ (40) ಜಿಲ್ಲೆಯಲ್ಲಿ ಅಧಿಕ ಪ್ರಕರಣಗಳು ವರದಿಯಾಗಿವೆ.

## ಹೊಸ ವರ್ಷ ಆಚರಣೆಗೆ ನಿರ್ಬಂಧ?

'ಹೊಸ ವರ್ಷ ಮತ್ತು ಕ್ರಿಸ್‌ಮಸ್ ಆಚರಣೆ ಸಂದರ್ಭದಲ್ಲಿ ಬಿಗಿ ಕ್ರಮ ಜಾರಿಗೊಳಿಸುವ ಬಗ್ಗೆ ತಜ್ಞರ ಜತೆ ಚರ್ಚಿಸಲಾಗುವುದು. ಕೋವಿಡ್‌ನಿಂದ ನೂರಾರು ಜನರನ್ನು ಕಳೆದುಕೊಂಡಿದ್ದೇವೆ. ಆರ್ಥಿಕ ಸ್ಥಿತಿ ಡೋಲಾಯಮಾನವಾಗಿದೆ, ನೂರಾರು ಜನ ಉದ್ಯೋಗಗಳನ್ನು ಕಳೆದುಕೊಂಡಿದ್ದಾರೆ. ಇಂಥ ಸಂಕಷ್ಟದ ಸಮಯದಲ್ಲಿ ಸಂಭ್ರಮಾಚರಣೆಯ ಅಗತ್ಯವೇನು' ಎಂದು ಡಾ. ಸುಧಾಕರ್ ಪ್ರಶ್ನಿಸಿದರು.

'ಬೆಂಗಳೂರು ಸೇರಿದಂತೆ ರಾಜ್ಯದಾದ್ಯಂತ ಹೊಸ ವರ್ಷ ಮತ್ತು ಕ್ರಿಸ್‌ಮಸ್ ಸಂದರ್ಭದಲ್ಲಿ ಕೆಲವು ನಿರ್ಬಂಧಗಳ ಅವಶ್ಯಕತೆ ಇದೆ. ಆ ಬಗ್ಗೆ ಮುಖ್ಯಮಂತ್ರಿ ಜತೆ ಚರ್ಚಿಸಿ ತೀರ್ಮಾನಿಸಲಾಗುವುದು. ಆದರೆ, ಕರ್ಫ್ಯೂ ಜಾರಿ ಅಗತ್ಯವಿದೆಯೆಂದು ಅನ್ನಿಸುತ್ತಿಲ್ಲ. ಆದರೂ ತಜ್ಞರ ಜತೆ ಚರ್ಚಿಸಿದ ಬಳಿಕ ಈ ಕುರಿತು ನಿರ್ಧರಿಸಲಾಗುವುದು' ಎಂದರು.

**ಕನ್ನಡಪ್ರಭ**

| Date | 04-12-2020 |
|---|---|
| Page No | 2 |



# ಬಿಬಿಎಂಪಿಯಿಂದ 1.15 ಲಕ್ಷ ಸಸಿ ವಿತರಣೆ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಕೋಟಿ ವೃಕ್ಷ ಆಂದೋಲನದಡಿ ಬಿಬಿಎಂಪಿಯು ಸಾರ್ವಜನಿಕರಿಗೆ ಉಚಿತವಾಗಿ ಸಸಿಗಳನ್ನು ವಿತರಿಸುತ್ತಿದ್ದು, ಕಳೆದ ಜೂನ್‌ನಿಂದ ಈವರೆಗೆ 1.15 ಲಕ್ಷ ಸಸಿ ವಿತರಿಸಲಾಗಿದೆ ಎಂದು ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ ಪ್ರಸಾದ್ ತಿಳಿಸಿದ್ದಾರೆ.

ನಗರದಲ್ಲಿ ಮರಗಳ ಸಂಖ್ಯೆ ಹೆಚ್ಚಿಸಿ ಹಸಿರೀಕರಣ ಮಾಡಲು ಸಾರ್ವಜನಿಕ ಸ್ಥಳಗಳಲ್ಲಿ ಗಿಡ ಬೆಳೆಸಲು ಉತ್ತೇಜಿಸುವುದು ಬಿಬಿಎಂಪಿ ಪ್ರಮುಖ ಉದ್ದೇಶವಾದೆ. ಈ ಕಾರ್ಯದಲ್ಲಿ ಸಾರ್ವಜನಿಕರು, ಸಂಘ ಸಂಸ್ಥೆಗಳನ್ನು ತೊಡಗಿಸಿಕೊಳ್ಳುವ ಉದ್ದೇಶದಿಂದ ಬಿಬಿಎಂಪಿ ಉಚಿತವಾಗಿ ಸಸಿಗಳನ್ನು ವಿತರಣೆ ಮಾಡುತ್ತಿದೆ. ಜೂನ್‌ನಿಂದ ಈವರೆಗೆ 1,15,129 ವಿವಿಧ ಜಾತಿಯ ಸಸಿಗಳನ್ನು ವಿತರಣೆ ಮಾಡಲಾಗಿದೆ ಎಂದು ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ ಪ್ರಸಾದ್ ಟ್ವೀಟ್ ಮಾಡಿದ್ದಾರೆ.

ಕನ್ನಡಪ್ರಭ

| Date | 04-12-2020 |
| --- | --- |
| Page No | 2 |


# ನಗರದಲ್ಲಿ ನಿನ್ನೆ 758 ಕೊರೋನಾ ಕೇಸ್ ಪತ್ತೆ

ಬೆಂಗಳೂರು: ರಾಜಧಾನಿಯಲ್ಲಿ ಕೊರೋನಾ ಸೋಂಕಿನ ಪ್ರಕರಣಗಳು ಏರಿಳಿತವಾಗುತ್ತಿದ್ದು, ಗುರುವಾರ 758 ಜನರಲ್ಲಿ ಸೋಂಕು ಕಾಣಿಸಿಕೊಂಡಿದೆ. 208 ಮಂದಿ ಗುಣಮುಖರಾಗಿದ್ದಾರೆ. ಆರು ಜನರು ಮೃತಪಟ್ಟಿದ್ದಾರೆ. ಈ ಹೊಸ ಪ್ರಕರಣಗಳೊಂದಿಗೆ ಈವರೆಗೆ 3,71,962 ಜನರಿಗೆ ಸೋಂಕು ತಗುಲಿದ್ದು, ಈ ಪೈಕಿ 3,48,861 ಮಂದಿ ಗುಣಮುಖರಾಗಿದ್ದಾರೆ. ಮೃತರ ಸಂಖ್ಯೆ 4,162ಕ್ಕೆ ತಲುಪಿದೆ. ನಗರದಲ್ಲಿ ಇನ್ನೂ 18,938 ಸಕ್ರಿಯ ಸೋಂಕು ಪ್ರಕರಣಗಳಿದ್ದು, ಈ ಪೈಕಿ ತೀವ್ರ ಉಸಿರಾಟದ ಸಮಸ್ಯೆಯಿಂದ ಬಳಲುತ್ತಿರುವ 163 ಮಂದಿ ಸೋಂಕಿತರಿಗೆ ವಿವಿಧ ಆಸ್ಪತ್ರೆಗಳ ತೀವ್ರ ನಿಗಾ ಘಟಕಗಳಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.



ಕನ್ನಡಪ್ರಭ

| Date | 04-12-2020 |
| --- | --- |
| Page No | 3 |


# ರಸ್ತೆ ಗುಂಡಿಗೆ ಬಲಿಯಾದವರಿಗೆ ಬಿಬಿಎಂಪಿಯಿಂದ ಪರಿಹಾರ

## ಗಾಯಾಳುಗಳಿಗೂ ಪರಿಹಾರ | ಅಪಘಾತ ನಡೆದ 30 ದಿನದೊಳಗೆ ಅರ್ಜಿ ಸಲ್ಲಿಸಬೇಕು

## ಪಾಲಿಕೆಯಿಂದ ಮಾರ್ಗಸೂಚಿ ಸಿದ್ಧ | ಮೃತರ ಕುಟುಂಬಸ್ಥರಿಗೆ 3 ಲಕ್ಷ ರು. ಪರಿಹಾರ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬಿಬಿಎಂಪಿ ವ್ಯಾಪ್ತಿಯ ರಸ್ತೆ ಗುಂಡಿಗಳಿಗೆ ಬಿದ್ದು ಮೃತರಾದವರ ಕುಟುಂಬಸ್ಥರಿಗೆ ಹಾಗೂ ಗಾಯಾಳುಗಳಿಗೆ ಪರಿಹಾರ ನೀಡುವ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ.

ಈ ಸಂಬಂಧ ಸಾರ್ವಜನಿಕ ಪ್ರಕಟಣೆ ಹೊರಡಿಸಿರುವ ಬಿಬಿಎಂಪಿ, ರಸ್ತೆ ಹಾಗೂ ಪಾದಚಾರಿ ಮಾರ್ಗ ಅಸಮರ್ಪಕ ನಿರ್ವಹಣೆ, ರಸ್ತೆ ಗುಂಡಿಗಳಿಂದ ಅಪಘಾತವಾಗಿ ಪ್ರಾಣಹಾನಿಯಾದರೆ ಅಥವಾ ಗಾಯಗೊಂಡಿದ್ದರೆ ವೈದ್ಯಕೀಯ ಪರಿಹಾರಕ್ಕಾಗಿ ಅರ್ಜಿ ಸಲ್ಲಿಸಬಹುದು ಎಂದು ತಿಳಿಸಿದೆ.

ಅಪಘಾತ ನಡೆದ 30 ದಿನಗಳೊಳಗೆ ಪರಿಹಾರ ಅರ್ಜಿ ಸಲ್ಲಿಸಬೇಕು. ಸಣ್ಣ ಗಾಯಗಳಾಗಿದ್ದಲ್ಲಿ 5 ಸಾವಿರ ರು. ಗಾಯಕ್ಕೆ ಮೂರು ದಿನಗಳಿಗಿಂತ ಹೆಚ್ಚಿನ ಅವಧಿಯ ಚಿಕಿತ್ಸೆ ಅಗತ್ಯವಿದ್ದರೆ 10 ಸಾವಿರ ರು., ಗಂಭೀರ ಗಾಯಾಳುಗಳಿಗೆ 15 ಸಾವಿರ ರು., ಮೃತರಾದರೆ ಸಂತ್ರಸ್ತರ ಕುಟುಂಬಕ್ಕೆ 3 ಲಕ್ಷ ರು. ಪರಿಹಾರ ನೀಡಲಾಗುತ್ತದೆ. ಈ ನಡುವೆ ಪಾಲಿಕೆಯ ವಿಶೇಷ ಆಯುಕ್ತರಿಗೆ ಗಾಯಾಳುಗಳ ವೈದ್ಯಕೀಯ ವೆಚ್ಚಕ್ಕಾಗಿ 10 ಸಾವಿರ ರು. ವರೆಗೂ ನೀಡುವ ಅಧಿಕಾರ ನೀಡಲಾಗಿದೆ. ಹೈಕೋರ್ಟ್ ಸೂಚನೆ ಮೇರೆಗೆ ಪಾಲಿಕೆ ರಸ್ತೆ ಗುಂಡಿಗಳಿಂದ ಪ್ರಾಣಹಾನಿಯಾಗುವ ಹಾಗೂ ಗಾಯಾಳುಗಳಿಗೆ ಪರಿಹಾರ ನೀಡಲು ಈ ಮಾರ್ಗಸೂಚಿ ಸಿದ್ಧಪಡಿಸಿದೆ.

ಈ ಪರಿಹಾರ ಮಾರ್ಗಸೂಚಿ ಅನ್ವಯ ಘಟನೆ ನಡೆದ 30 ದಿನಗಳೊಳಗೆ ಪರಿಹಾರಕ್ಕೆ ಅರ್ಜಿ ಸಲ್ಲಿಸಬೇಕು. ಈ ನಿಗದಿತ ಅವಧಿ ಮೀರಿದ ಅರ್ಜಿ ಸಲ್ಲಿಸಿದರೆ ಅದನ್ನು ತಿರಸ್ಕರಿಸಲಾಗುತ್ತದೆ. ಅರ್ಜಿದಾರರಿಗೆ ಪ್ರತ್ಯಕ್ಷ ಸಾಕ್ಷಿಗಳು, ಪೊಲೀಸ್ ದೂರು ಅಥವಾ ಸಿಸಿಟಿವಿ ದೃಶ್ಯಾವಳಿ ಸೇರಿದಂತೆ ಯಾವುದೇ ರೀತಿಯ ದಾಖಲೆಗಳು ಅಥವಾ ಪುರಾವೆಗಳನ್ನು ಒದಗಿಸಲು ಅವಕಾಶ ಕಲ್ಪಿಸಲಾಗಿದೆ.

- **30 ದಿನದ ಬಳಿಕ ಅರ್ಜಿ ಸಲ್ಲಿಸಿದರೆ ಪರಿಹಾರ ಇಲ್ಲ**
- **ಗಾಯಾಳುಗಳಿಗೆ 5ರಿಂದ 10 ಸಾವಿರ ರು. ಪರಿಹಾರ**
- **ಚಿಕಿತ್ಸೆಗೆ ಹಣ ನೀಡಲು ವಿಶೇಷ ಆಯುಕ್ತರಿಗೆ ಅಧಿಕಾರ**



ಕನ್ನಡಪ್ರಭ

| Date | 04-12-2020 |
| --- | --- |
| Page No | 3 |

# ಊಟಿಯಂತಾದ ಬೆಂದಕಾಳೂರು

## ಬುರೆವಿ ಎಫೆಕ್ಟ್ | ಡಿ.6ರ ತನಕ ಜಡಿ ಮಳೆ
## ಇಡೀ ದಿನ ಮೋಡ ಕವಿದ ವಾತಾವರಣ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

'ಬುರೆವಿ' ಚಂಡಮಾರುತದ ಪರಿಣಾಮ ಡಿ.6ರ ವರೆಗೆ ಬೆಂಗಳೂರಿನಲ್ಲಿ ಮೋಡ ಕವಿದ ಹಾಗೂ ಚಳಿಯ ವಾತಾವರಣ ಮುಂದುವರಿಯಲಿದೆ. ಎಲ್ಲ ಪ್ರದೇಶಗಳಲ್ಲಿ ತುಂತುರು ಮಳೆ ಬೀಳಲಿದೆ ಎಂದು ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಉಸ್ತುವಾರಿ ಕೇಂದ್ರ (ಕೆಎಸ್‌ಎನ್‌ಡಿಎಂಸಿ) ಮುನ್ಸೂಚನೆ ನೀಡಿದೆ.

'ಬುರೆವಿ' ಡಿ.3ರಂದು ಭೂಸ್ಪರ್ಶ ಮಾಡಿದ್ದರ ಪರಿಣಾಮ ರಾಜಧಾನಿಯಲ್ಲಿ ಕೆಲವು ದಿನಗಳಿಂದ ಚಳಿ ಹಾಗೂ ಮೋಡ ಕವಿದ ವಾತಾವರಣ ನಿರ್ಮಾಣವಾಗಿದೆ. ಇದರಿಂದ ಉಷ್ಣಾಂಶ ಕಡಿಮೆಯಾಗಿದ್ದು, ಅಲ್ಲಲ್ಲಿ ಸಾಮಾನ್ಯ ಹಾಗೂ ಸೋನೆ ಮಳೆ ಬಿದ್ದಿದೆ. ತಾಪಮಾನ ಗರಿಷ್ಠ 22 ಹಾಗೂ ಕನಿಷ್ಠ 18 ಡಿಗ್ರಿ ಸೆಲ್ಸಿಯಸ್ ದಾಖಲಾಗಿದೆ. ಡಿ.6ರವರೆಗೂ ಇದೇ ವಾತಾವರಣ ಮುಂದುವರಿಯಲಿದ್ದು, ಬಿಸಿಲಿನ ದರ್ಶನ ಅಪರೂಪ ಎನ್ನಬಹುದು. ಡಿ.7ರಿಂದ ಮೂರು ದಿನ ಮಂಜು ಮುಸುಕಿದ ವಾತಾವರಣ ಸೃಷ್ಟಿಯಾಗಿ ಬಳಿಕ ವಾತಾವರಣ ಸಹಜ ಸ್ಥಿತಿಗೆ ಬರುವ ಸಾಧ್ಯತೆ ಇದೆ.

**ತುಂತುರು ಮಳೆ:** ನಗರದಲ್ಲಿ ಕೆಲವು ದಿನಗಳಿಂದ ಮೋಡ ಕವಿದ ವಾತಾವರಣ ಕಂಡು ಬಂದಿದ್ದು, ಗುರುವಾರ ಬೆಳಗ್ಗೆಯಿಂದಲೇ ಬಹುತೇಕ ಎಲ್ಲ ಪ್ರದೇಶಗಳಲ್ಲಿ ತುಂತುರು ಮಳೆ ಬಿದ್ದಿದೆ.



ತಾವರೆಕೆರೆಯಲ್ಲಿ ಅಧಿಕ 3.5 ಮಿ.ಮೀ ಮಳೆಯಾಗಿದ್ದು ಬಿಟ್ಟರೆ ಎಲ್ಲಿಯೂ ದಾಖಲೆ ಮಳೆಯಾಗಿಲ್ಲ. ರಾಜಾನುಕುಂಟೆ, ಯಲಹಂಕ, ಗಂಟಿಗಾನಹಳ್ಳಿ, ಲಕ್ಕಸಂದ್ರ, ಚೋಳನಾಯಕನಹಳ್ಳಿ, ಅಂಜನಾಪುರ, ಹೊರಮಾವು, ಜಯನಗರ, ಚಾಮರಾಜಪೇಟೆ, ಮೆಜೆಸ್ಟಿಕ್, ವಿಜಯನಗರ, ಮೈಸೂರು ರಸ್ತೆಗಳಲ್ಲಿ ಸೋನೆ ಮಳೆ ಸುರಿದಿದೆ. ಆಗಾಗ ಬಂದ ಜಿಟಿಜಿಟಿ ಮಳೆಯಿಂದ ವ್ಯಾಪಾರಿಗಳಿಗೆ, ಸಾರ್ವಜನಿಕರಿಗೆ ತೊಂದರೆ ಉಂಟಾಯಿತು. ಮಳೆ, ಚಳಿ ಮಧ್ಯೆ ಜರ್ಕಿನ್, ಕೊಡೆ ಆಸರೆಯಿಂದ ಜನ ನಗರದಲ್ಲಿ ಓಡಾಡಿದ್ದು ಸಾಮಾನ್ಯವಾಗಿತ್ತು.

ಕನ್ನಡಪ್ರಭ

| Date | 04-12-2020 |
| --- | --- |
| Page No | 3 |

# ಬಿಬಿಎಂಪಿ ಚುನಾವಣೆ ಭವಿಷ್ಯ ಇಂದು ನಿರ್ಧಾರ

## ನ.25ರಂದು ವಿಚಾರಣೆ ಪೂರ್ಣಗೊಳಿಸಿದ್ದ ಹೈಕೋರ್ಟ್ | ಇಂದು ತೀರ್ಪು ಪ್ರಕಟ

• **ಕನ್ನಡಪ್ರಭ ವಾರ್ತೆ** ಬೆಂಗಳೂರು

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ (ಬಿಬಿಎಂಪಿ) ಶೀಘ್ರ ಚುನಾವಣೆ ನಡೆಸುವಂತೆ ಕೋರಿ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳ ಕುರಿತ ತೀರ್ಪನ್ನು ಹೈಕೋರ್ಟ್ ಶುಕ್ರವಾರ ಮಧ್ಯಾಹ್ನ 2.30ಕ್ಕೆ ಪ್ರಕಟಿಸಲಿದೆ.

ಚುನಾಯಿತ ಸದಸ್ಯರ ಅವಧಿ ಮುಗಿದಿರುವ ಬಿಬಿಎಂಪಿಗೆ ಶೀಘ್ರವಾಗಿ ಚುನಾವಣೆ ನಡೆಸುವಂತೆ ಕೋರಿ ಕಾಂಗ್ರೆಸ್ ಪಕ್ಷದ ಪಾಲಿಕೆ ಮಾಜಿ ಸದಸ್ಯ ಎಂ.ಶಿವರಾಜು ಹೈಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರು.

ಅರ್ಜಿಯ ವಿಚಾರಣೆಯನ್ನು ನ.25ರಂದು ಪೂರ್ಣಗೊಳಿಸಿರುವ ಮುಖ್ಯ ನ್ಯಾಯಮೂರ್ತಿ ಎ.ಎಸ್. ಓಕ, ನ್ಯಾಯಮೂರ್ತಿ ಎಸ್. ವಿಶ್ವಜಿತ್ ಶೆಟ್ಟಿ ಅವರ ವಿಭಾಗೀಯ ನ್ಯಾಯಪೀಠ ಶುಕ್ರವಾರ ತೀರ್ಪು ಪ್ರಕಟಿಸಲಿದೆ.

**ಚುನಾವಣೆ ಮುಂದೂಡುವ ಉದ್ದೇಶವಿಲ್ಲ:** ವಿಚಾರಣೆ ವೇಳೆ ಸರ್ಕಾರದ ಪರ ಅಡ್ವೊಕೇಟ್ ಜನರಲ್ ಪ್ರಭುಲಿಂಗ ಕೆ. ನಾವದಗಿ ವಾದಿಸಿ, ಸರ್ಕಾರಕ್ಕೆ ಚುನಾವಣೆ ಮುಂದೂಡುವ ಯಾವುದೇ ಉದ್ದೇಶವಿಲ್ಲ. ಬಿಬಿಎಂಪಿ ಇದೀಗ ವಿಸ್ತಾರವಾಗಿ ಬೆಳೆದಿದೆ. ಹಾಗಾಗಿ ಬಿಬಿಎಂಪಿಯ ವಾರ್ಡ್‌ಗಳನ್ನು ಮರುವಿಂಗಡಣೆ ಮಾಡುವ ಅಗತ್ಯವಿದೆ. ಜಂಟಿ ಸದನ ಸಮಿತಿಯ ಶಿಫಾರಸ್ಸಿನಂತೆ ವಾರ್ಡ್‌ಗಳ ಮರುವಿಂಗಡಣೆಗೆ ಪ್ರತ್ಯೇಕ ಕಾಯ್ದೆ ಜಾರಿಗೊಳಿಸಲಾಗಿದೆ. ಹೀಗಾಗಿ, ಸದ್ಯಕ್ಕೆ ಚುನಾವಣೆ ನಡೆಸಲು ಸಾಧ್ಯವಾಗುತ್ತಿಲ್ಲ ಎಂದು ತಿಳಿಸಿದ್ದರು.



**1 ವರ್ಷ ತಡವಾಗುತ್ತೆ:** ಚುನಾವಣಾ ಆಯೋಗದ ಪರ ವಕೀಲರು, ಚುನಾವಣೆಗೆ ಎಲ್ಲ ರೀತಿಯ ಸಿದ್ಧತೆ ನಡೆಸಿಕೊಳ್ಳಲಾಗಿದ್ದು, ಮತದಾರರ ಪಟ್ಟಿ ಪ್ರಕಟಿಸುವುದಷ್ಟೇ ಬಾಕಿಯಿದೆ. ಇಂತಹ ಸಂದರ್ಭದಲ್ಲಿ ವಾರ್ಡ್‌ಗಳ ಸಂಖ್ಯೆ ಹೆಚ್ಚಳಮಾಡಿದರೆ, ಚುನಾವಣೆನಡೆಸಲುಸಾಧ್ಯವಾಗುವುದಿಲ್ಲ, ಆಗ ಸಾಂವಿಧಾನಿಕ ನಿಯಮ ಉಲ್ಲಂಘಿಸಿದಂತಾಗುತ್ತದೆ. ವಾರ್ಡ್ ಮರುವಿಂಗಡಣೆಗೆ ನಾಲ್ಕು ತಿಂಗಳು ಬೇಕಾಗುತ್ತದೆ. ಆ ನಂತರ ಮೀಸಲಾತಿ ಹಾಗೂ ಮತದಾರರ ಪಟ್ಟಿ ಸಿದ್ಧಪಡಿಸಬೇಕು. ಈ ಎಲ್ಲ ಕಾರ್ಯ ಪೂರ್ಣಗೊಳ್ಳಲು ಕನಿಷ್ಠ 1 ವರ್ಷ ಸಮಯ ಹಿಡಿಯಲಿದೆ. ಇದರಿಂದ, ಚುನಾವಣೆ ವಿಳಂಬವಾಗುವ ಜತೆಗೆ ಸಾರ್ವಜನಿಕರ ಕೋಟ್ಯಂತರ ಹಣ ಪೋಲಾಗುತ್ತದೆ ಎಂದು ನ್ಯಾಯಪೀಠಕ್ಕೆ ತಿಳಿಸಿದರು.

**ಉದ್ದೇಶಪೂರ್ವಕ ಯತ್ನ:** ಬಿಬಿಎಂಪಿ ಚುನಾವಣೆ ನಡೆಸಲು ಸರ್ಕಾರ ಹಿಂದೇಟು ಹಾಕುತ್ತಿದೆ. 2015ರಲ್ಲೂ ಪಾಲಿಕೆ ವಿಭಜನೆ ಮಾಡುವ ನಿರ್ಧಾರ ಕೈಗೊಂಡು ಚುನಾವಣೆ ಮುಂದೂಡಲು ಪ್ರಯತ್ನಿಸಿತ್ತು. ಈ ಬಾರಿ ವಾರ್ಡ್‌ಗಳ ಸಂಖ್ಯೆ ಹೆಚ್ಚಿಸಲು ಮುಂದಾಗಿದ್ದು, ಉದ್ದೇಶಪೂರ್ವಕವಾಗಿ ಚುನಾವಣೆ ವಿಳಂಬ ಮಾಡಲು ಯತ್ನಿಸುತ್ತಿದೆ ಎಂದಿದ್ದರು.

ವಾದ-ಪ್ರತಿವಾದ ಆಲಿಸಿದ್ದ ಹೈಕೋರ್ಟ್, ಪಾಲಿಕೆಯ ಅಧಿಕಾರವಾಧಿ ಮುಗಿದ ಬಳಿಕ ವಾರ್ಡ್ ಪುನರ್ ವಿಂಗಡಣೆಗೆ ಕಾಯ್ದೆ ಜಾರಿಗೊಳಿಸಲಾಗಿದೆ. ಹೀಗಾಗಿ, ಚುನಾವಣೆ ನಡೆಸಲಾಗುತ್ತಿಲ್ಲ ಎಂದು ಸರ್ಕಾರ ಹೇಳುತ್ತಿದೆ. ಸರ್ಕಾರದ ವಾದವನ್ನು ಒಪ್ಪಿದರೆ, ಸಕಾಲದಲ್ಲಿ ಸ್ಥಳೀಯ ಸಂಸ್ಥೆಗಳಿಗೆ ಚುನಾವಣೆ ನಡೆಸಬೇಕೆಂಬ ಸಂವಿಧಾನಿಕ ನಿಯಮ ಉಲ್ಲಂಘನೆ ಮಾಡಿದಂತಾಗಿದೆ. ಹೀಗಾಗಿ, ನ್ಯಾಯಾಲಯ ಸರ್ಕಾರ ವಾದವನ್ನು ಒಪ್ಪುವುದು ಕಷ್ಟ ಎಂದು ನುಡಿದಿತ್ತು.

ಕನ್ನಡಪ್ರಭ

| Date | 04-12-2020 |
| --- | --- |
| Page No | 4 |


# ಇದೀಗ ಕಮರ್ಷಿಯಲ್ ಸ್ಟ್ರೀಟ್‌ನಲ್ಲಿ 'ಕ್ಲೀನ್ ಏರ್ ಸ್ಟ್ರೀಟ್'ಗೆ ಚಿಂತನೆ

**ಬೆಂಗಳೂರು:** ಚರ್ಚ್ ಸ್ಟ್ರೀಟ್ ಬಳಿಕ 'ಕ್ಲೀನ್ ಏರ್ ಸ್ಟ್ರೀಟ್' ಯೋಜನೆಯನ್ನು ಕಮರ್ಷಿಯಲ್ ಸ್ಟ್ರೀಟ್‌ನಲ್ಲಿ ಜಾರಿಗೊಳಿಸಲು ಚಿಂತನೆ ನಡೆಸಲಾಗುತ್ತಿದೆ ಎಂದು ಬಿಬಿಎಂಪಿ ಆಯುಕ್ತ ಎನ್.ಮಂಜುನಾಥ ಪ್ರಸಾದ್ ತಿಳಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಗರ ಭೂ ಸಾರಿಗೆ ನಿರ್ದೇಶನಾಲಯ (ಡಲ್ಟ್), ಬಿಬಿಎಂಪಿ, ಐಐಎಸ್ಸಿ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಸಹಯೋಗದಲ್ಲಿ ನಗರದ ಚರ್ಚ್ ಸ್ಟ್ರೀಟ್‌ನಲ್ಲಿ ಪ್ರತಿ ಶನಿವಾರ ಮತ್ತು ಭಾನುವಾರ 'ಕ್ಲೀನ್ ಏರ್ ಸ್ಟ್ರೀಟ್' ಪರಿಕಲ್ಪನೆಯಡಿ ವಾಹನ ಸಂಚಾರ ನಿಷೇಧಿಸಲಾಗುತ್ತಿದೆ. ಇದೇ ರೀತಿ ವಾಣಿಜ್ಯ ಚಟುವಟಿಕೆ ಹಾಗೂ ವಾಹನ ದಟ್ಟಣೆ ಹೆಚ್ಚಿರುವ ಕಮರ್ಷಿಯಲ್ ಸ್ಟ್ರೀಟ್‌ನಲ್ಲಿ ಕ್ಲೀನ್ ಏರ್ ಸ್ಟ್ರೀಟ್ ಪರಿಕಲ್ಪನೆ ಅನುಷ್ಠಾನಕ್ಕೆ ಯೋಜನೆ ರೂಪಿಸಲಾಗುತ್ತಿದೆ ಎಂದರು. ವಾಹನ ನಿಷೇಧಿಸಿದ ಶನಿವಾರ ಮತ್ತು ಭಾನುವಾರದಂದು ವಾಯು ಮಾಲಿನ್ಯ ಪರಿಣಾಮದ ಬಗ್ಗೆ ನಾಲ್ಕು ತಿಂಗಳ ಅಂಕಿ ಅಂಶ ತೆಗೆದುಕೊಂಡು ಈ ಅಧ್ಯಯನ ನಡೆಸಲಾಗುತ್ತಿದೆ. ತದ ನಂತರ ಬೇರೆ ಬೇರೆ ರಸ್ತೆಗಳಿಗೆ ವಿಸ್ತರಣೆ ಮಾಡಲಾಗುವುದು ಎಂದು ವಿವರಿಸಿದರು.

| Date | 04-12-2020 |
|---|---|
| Page No | 7 |

ಅನುದಾನ ಒದಗಿಸದ ಸರಕಾರ | ಮುಚ್ಚುವ ಸ್ಥಿತಿ ತಲುಪಿರುವ ಕ್ಯಾಂಟೀನ್‌ಗಳು

# ಇಂದಿರಾ ಕ್ಯಾಂಟೀನ್ ಭವಿಷ್ಯ ತೂಗುಯ್ಯಾಲೆಯಲ್ಲಿ!

■ **ನಾಗಪ್ಪ ನಾಗನಾಯಕನಹಳ್ಳಿ** ಬೆಂಗಳೂರು
nagappa.narayanappa@timesgroup.com

ಬಡವರು, ಕೂಲಿ ಕಾರ್ಮಿಕರ ಹಸಿವು ನೀಗಿಸುತ್ತಿರುವ ಇಂದಿರಾ ಕ್ಯಾಂಟೀನ್‌ಗಳ ನಿರ್ವಹಣೆಗೆ ರಾಜ್ಯ ಸರಕಾರ ಅನುದಾನ ಒದಗಿಸದ ಕಾರಣ, ಬಿಬಿಎಂಪಿಯು ಗುತ್ತಿಗೆ ಸಂಸ್ಥೆಗಳಿಗೆ ಕೋಟ್ಯಂತರ ರೂ. ಬಾಕಿ ಉಳಿಸಿಕೊಂಡಿದೆ. ಹೀಗಾಗಿ, ಇಂದಿರಾ ಕ್ಯಾಂಟೀನ್‌ಗಳ ಭವಿಷ್ಯವು ತೂಗುಯ್ಯಾಲೆಯಲ್ಲಿದೆ.

ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರದ ಅವಧಿಯಲ್ಲಿ ಶುರುವಾದ ಇಂದಿರಾ ಕ್ಯಾಂಟೀನ್‌ಗಳ ನಿರ್ವಹಣೆಗೆ ಬಿಕ್ಕಟ್ಟು ಎದುರಾಗಿದೆ. ಬಿಬಿಎಂಪಿಯು ಹಲವು ಬಾರಿ ಪತ್ರ ಬರೆದು ಅನುದಾನ ಬಿಡುಗಡೆಗೆ ಮನವಿ ಸಲ್ಲಿಸಿದರೂ ಸರಕಾರ ಕಿವಿಗೊಡುತ್ತಿಲ್ಲ. ಕಳೆದೆರಡು ವರ್ಷಗಳಿಂದ ಸ್ವಂತ ಹಣದಲ್ಲೇ ಕ್ಯಾಂಟೀನ್‌ಗಳನ್ನು ನಿರ್ವಹಣೆ ಮಾಡುತ್ತಿರುವ ಪಾಲಿಕೆಯು, ಕೊರೊನಾ ಸೋಂಕು ಕಾಣಿಸಿಕೊಂಡ ಬಳಿಕ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದೆ. ಇದೀಗ ಕ್ಯಾಂಟೀನ್‌ಗಳ ನಿರ್ವಹಣೆಗೆ ಹಣ ಹೊಂದಿಸಲಾಗದೆ ಹೆಣಗಾಡುತ್ತಿದೆ.

2017ರ ಆ. 16ರಂದು ಶುರುವಾದ ಇಂದಿರಾ ಕ್ಯಾಂಟೀನ್ ಯೋಜನೆಯು ಅಲ್ಪಾವಧಿಯಲ್ಲಿ ಜನರ ಮೆಚ್ಚುಗೆಗೆ ಪಾತ್ರವಾಯಿತು. ಆಗಿನ ಸರಕಾರವು ಕ್ಯಾಂಟೀನ್‌ಗಳ ನಿರ್ವಹಣೆಯ ಸಂಪೂರ್ಣ ವೆಚ್ಚ ಭರಿಸುವ ವಾಗ್ದಾನ ನೀಡಿತ್ತು. ಆದರೆ, ಕಾಂಗ್ರೆಸ್-ಜೆಡಿಎಸ್ ಮೈತ್ರಿ ಸರಕಾರವು 2019-20ನೇ ಸಾಲಿನಲ್ಲಿ ನಯಾಪೈಸೆ ಅನುದಾನ ನೀಡಲಿಲ್ಲ. ಇನ್ನೊಂದೆಡೆ ಪಾಲಿಕೆಯೂ ಬಜೆಟ್‌ನಲ್ಲಿ ಹಣ ಒದಗಿಸಲಿಲ್ಲ. ಆದಾಗ್ಯೂ, ಪಾಲಿಕೆಯೇ ನಿರ್ವಹಣೆ ವೆಚ್ಚವನ್ನು ಭರಿಸುತ್ತಿದೆ. 2017-18ರಲ್ಲಿ 145 ಕೋಟಿ ರೂ. ಹಂಚಿಕೆ ಮಾಡಿದ್ದ ಸರಕಾರ 115 ಕೋಟಿ ರೂ.ಗಳನ್ನು ಮಾತ್ರ ಬಿಡುಗಡೆ ಮಾಡಿತ್ತು. 2018-19ರಲ್ಲೂ ಹಂಚಿಕೆ ಮಾಡಿದಷ್ಟು ಅನುದಾನ ನೀಡಲಿಲ್ಲ. ಪರಿಣಾಮ, ಕ್ಯಾಂಟೀನ್‌ಗಳ ನಿರ್ವಹಣೆಗೆ ಹಣದ ಕೊರತೆಯುಂಟಾಗಿದ್ದು, ಗುತ್ತಿಗೆ ಸಂಸ್ಥೆಗಳಿಗೆ ಕೋಟ್ಯಂತರ ರೂ. ಬಾಕಿ ಉಳಿಸಿಕೊಳ್ಳಲಾಗಿದೆ.

**ನೀರು, ಒಳಚರಂಡಿ ಸಂಪರ್ಕ ಕಡಿತ**

ಗುತ್ತಿಗೆ ಸಂಸ್ಥೆಗಳು ಜಲಮಂಡಳಿಗೆ ಕೋಟ್ಯಂತರ ರೂ. ಶುಲ್ಕ ಬಾಕಿ ಉಳಿಸಿಕೊಂಡಿವೆ. ಹಾಗಾಗಿ, ಜಲಮಂಡಳಿಯು ಅಡುಗೆ ಮನೆ ಹಾಗೂ ಕ್ಯಾಂಟೀನ್‌ಗಳಿಗೆ ನೀರು, ಒಳಚರಂಡಿ ಸಂಪರ್ಕವನ್ನು ಕಡಿತಗೊಳಿಸಿದೆ. ಆದ್ದರಿಂದ ಗುತ್ತಿಗೆ ಸಂಸ್ಥೆಗಳು ಖಾಸಗಿ ಟ್ಯಾಂಕರ್‌ಗಳಿಂದ ನೀರು ಖರೀದಿಸುತ್ತಿವೆ.

''ಇಂದಿರಾ ಕ್ಯಾಂಟೀನ್‌ಗಳಲ್ಲಿ ರಿಯಾಯಿತಿ ದರದಲ್ಲಿ ಆಹಾರ ನೀಡಲಾಗುತ್ತಿದೆ. ಆದರೂ, ಜಲಮಂಡಳಿಯು ನೀರು, ಒಳಚರಂಡಿ ಸಂಪರ್ಕಕ್ಕೆ ವಾಣಿಜ್ಯ ಶುಲ್ಕ ವಿಧಿಸುತ್ತಿದೆ. ಇದರಿಂದಾಗಿ ಅಡುಗೆ ಮನೆಗಳಿಗೆ ತಿಂಗಳಿಗೆ 1.50 ಕೋಟಿ ರೂ. ನಷ್ಟು ಶುಲ್ಕ ವಿಧಿಸಲಾಗುತ್ತಿದೆ. ಪಾಲಿಕೆಯು ಈವರೆಗೆ 16 ಕೋಟಿ ರೂ. ಬಾಕಿ ಉಳಿಸಿಕೊಂಡಿದ್ದು, ಕ್ಯಾಂಟೀನ್‌ಗಳನ್ನು ನಿರ್ವಹಣೆ ಮಾಡುವುದು ಕಷ್ಟವಾಗಿದೆ,'' ಎಂದು ಚೆಫ್‌ಟಾಕ್ ಸಂಸ್ಥೆಯ ಗೋವಿಂದ ಪೂಜಾರಿ ತಿಳಿಸಿದರು.

''ರಿವಾರ್ಡ್ಸ್ ಸಂಸ್ಥೆಯು ಜಲಮಂಡಳಿಗೆ ಕೋಟ್ಯಂತರ ರೂ. ಬಾಕಿ ಉಳಿಸಿಕೊಂಡಿದೆ. ಹೀಗಾಗಿ, ಪಾಲಿಕೆಯಿಂದ 4 ಅಡುಗೆ ಮನೆಗಳನ್ನು ನಮಗೆ ಹಸ್ತಾಂತರಿಸಿಲ್ಲ. ಅದಮ್ಯ ಚೇತನದ ಅಡುಗೆ ಮನೆಯಲ್ಲಿಯೇ ಆಹಾರ ಸಿದ್ಧಪಡಿಸಿ, ಕ್ಯಾಂಟೀನ್‌ಗಳಿಗೆ ಪೂರೈಸಲಾಗುತ್ತಿದೆ,'' ಎಂದು ಸಂಸ್ಥೆಯ ಕಿರಣ್‌ಕುಮಾರ್ ಹೇಳಿದರು.

ಕುಡಿಯುವ ನೀರು, ಒಳಚರಂಡಿ ಸಂಪರ್ಕ ಕಡಿತ

ಬಿಲ್ ಪಾವತಿಯಾಗದ ಹಿನ್ನೆಲೆಯಲ್ಲಿ ಇಡ್ಲಿ ವಿತರಣೆಗೆ ಕೊಕ್

ವಿಕ ವಿಶೇಷ




ಕಳೆದೆರಡು ವರ್ಷಗಳಿಂದ ಪಾಲಿಕೆ ಹಣದಲ್ಲೇ ಕ್ಯಾಂಟೀನ್ ನಿರ್ವಹಣೆ

ಇಂದಿರಾ ಕ್ಯಾಂಟೀನ್ ಸರಕಾರದ ಯೋಜನೆ. ಆದರೆ, ಸರಕಾರ ಅನುದಾನ ನೀಡುತ್ತಿಲ್ಲ. ಹೀಗಾಗಿ, ಪಾಲಿಕೆಯೇ ನಿರ್ವಹಣೆ ವೆಚ್ಚ ಭರಿಸುತ್ತಿದೆ. ಕೋವಿಡ್‌ನಿಂದಾಗಿ ವರಮಾನ ಕಡಿಮೆಯಾಗಿದ್ದು, ಗುತ್ತಿಗೆ ಸಂಸ್ಥೆಗಳಿಗೆ ಬಿಲ್ ಪಾವತಿ ವಿಳಂಬವಾಗಿದೆ. ಶೀಘ್ರದಲ್ಲೇ ಬಾಕಿ ಹಣ ಪಾವತಿ ಮಾಡಲಾಗುವುದು.

**-ಎನ್.ಮಂಜುನಾಥ ಪ್ರಸಾದ್**
ಬಿಬಿಎಂಪಿ ಆಯುಕ್ತ



**24.18 ಕೋಟಿ ರೂ. ಬಾಕಿ**

ಬಿಬಿಎಂಪಿ ವ್ಯಾಪ್ತಿಯಲ್ಲಿನ 173 ಸ್ಥಿರ ಮತ್ತು 23 ಸಂಚಾರಿ ಕ್ಯಾಂಟೀನ್‌ಗಳ ನಿರ್ವಹಣೆ ಹೊಣೆಯನ್ನು ಮೂರು ಸಂಸ್ಥೆಗಳಿಗೆ ವಹಿಸಲಾಗಿದೆ. ಶ್ರೀಮತಿ ಗಿರಿಜಾ ಶಾಸ್ತ್ರಿ ಸ್ಮಾರಕ ಟ್ರಸ್ಟ್ (ಅದಮ್ಯ ಚೇತನ), ಚೆಫ್ ಟಾಕ್ ಮತ್ತು ರಿವಾರ್ಡ್ಸ್ ಸಂಸ್ಥೆಗಳು ಕ್ಯಾಂಟೀನ್‌ಗಳಿಗೆ ಊಟ, ತಿಂಡಿ ಪೂರೈಸುವ ಗುತ್ತಿಗೆ ಪಡೆದಿವೆ. ಶುರುವಿನಿಂದಲೂ ರಿವಾರ್ಡ್ಸ್ ಮತ್ತು ಚೆಫ್ ಟಾಕ್ ಸಂಸ್ಥೆಗಳು ಕ್ಯಾಂಟೀನ್‌ಗಳನ್ನು ನಿರ್ವಹಣೆ ಮಾಡುತ್ತಿದ್ದವು. ಆ. 1ರಿಂದ ಅದಮ್ಯ ಚೇತನ ಸಂಸ್ಥೆಯು 44 ಇಂದಿರಾ ಕ್ಯಾಂಟೀನ್‌ಗಳಲ್ಲಿ ಆಹಾರ ವಿತರಿಸುವ ಗುತ್ತಿಗೆ ಪಡೆದುಕೊಂಡಿದೆ. 102 ಕ್ಯಾಂಟೀನ್‌ಗಳನ್ನು ನಿರ್ವಹಣೆ ಮಾಡುತ್ತಿರುವ ಚೆಫ್ ಟಾಕ್ ಸಂಸ್ಥೆಗೆ ಏಪ್ರಿಲ್‌ನಿಂದ ಬಿಲ್ ಪಾವತಿಯಾಗಿಲ್ಲ. ಈ ಸಂಸ್ಥೆಗೆ ಸೆಪ್ಟೆಂಬರ್ ವರೆಗೆ 12.56 ಕೋಟಿ ರೂ., ರಿವಾರ್ಡ್ಸ್‌ಗೆ ಜೂನ್ ತಿಂಗಳಿನಿಂದ 6.72 ಕೋಟಿ ರೂ. ಬಾಕಿ ನೀಡಬೇಕಿದೆ. ಅದಮ್ಯ ಚೇತನಕ್ಕೆ 2.93 ಕೋಟಿ ರೂ. ಕೊಟ್ಟಿಲ್ಲ.

**ಗ್ರಾಹಕರ ಕೊರತೆ**

ಬಿಬಿಎಂಪಿಯು ಸಕಾಲಕ್ಕೆ ಬಿಲ್ ಪಾವತಿ ಮಾಡದ ಹಿನ್ನೆಲೆಯಲ್ಲಿ ಬಹುತೇಕ ಕ್ಯಾಂಟೀನ್‌ಗಳಲ್ಲಿ ಬಿಸಿ ಬಿಸಿ ಇಡ್ಲಿ ನೀಡುವುದನ್ನು ಸ್ಥಗಿತಗೊಳಿಸಲಾಗಿದೆ. ಇದರಿಂದ ಕ್ಯಾಂಟೀನ್‌ಗಳಲ್ಲಿ ಉಪಹಾರ ಸೇವಿಸುವವರ ಸಂಖ್ಯೆ ಕಡಿಮೆಯಾಗಿದೆ. ಕೆಲವೊಂದು ಕ್ಯಾಂಟೀನ್‌ಗಳಲ್ಲಿ ಬೆಳಗ್ಗೆ 200, ಮಧ್ಯಾಹ್ನ 100 ಮತ್ತು ರಾತ್ರಿ 50 ಮಂದಿಯಷ್ಟೇ ಆಹಾರ ಸೇವಿಸುತ್ತಿದ್ದಾರೆ. ಕೊರೊನಾ ಭೀತಿಯಿಂದಾಗಿ ಹಲವು ಕ್ಯಾಂಟೀನ್‌ಗಳತ್ತ ಜನ ಸುಳಿಯುತ್ತಿಲ್ಲ. ಹೀಗಾಗಿ, ಹಲವು ಕ್ಯಾಂಟೀನ್‌ಗಳು ಗ್ರಾಹಕರಿಲ್ಲದೆ ಭಣಗುಡುತ್ತಿವೆ. ಬಿಲ್ ಪಾವತಿಯಾಗದ ಹಿನ್ನೆಲೆಯಲ್ಲಿ ಗುತ್ತಿಗೆ ಸಂಸ್ಥೆಗಳು ದಿನಸಿ, ತರಕಾರಿ ಪೂರೈಸುತ್ತಿದ್ದವರಿಗೆ ಲಕ್ಷಾಂತರ ರೂ. ಬಾಕಿ ಉಳಿಸಿಕೊಂಡಿವೆ. ಹೀಗಾಗಿಯೇ, ಇಡ್ಲಿಯ ಹಿಟ್ಟು ಪೂರೈಕೆ ನಿಂತು ಹೋಗಿದ್ದು, ಇಡ್ಲಿ ವಿತರಣೆಯನ್ನು ನಿಲ್ಲಿಸಲಾಗಿದೆ.

ವಿಜಯ ಕರ್ನಾಟಕ

| Date | 04-12-2020 |
| --- | --- |
| Page No | 7 |

# ನಗರದಲ್ಲಿ 758 ಕೋವಿಡ್ ಸೋಂಕು ಪ್ರಕರಣ ಪತ್ತೆ

| | |
| --- | --- |
| ಸೋಂಕಿತರು | 371962 |
| ಗುಣಮುಖ | 348861 |
| ಸಕ್ರಿಯ | 18938 |
| ಸಾವು | 4162 |

**ಬೆಂಗಳೂರು:** ನಗರದಲ್ಲಿ ಗುರುವಾರ ಹೊಸದಾಗಿ 758 ಮಂದಿಗೆ ಕೊರೊನಾ ಸೋಂಕು ತಗಲಿರುವುದು ದೃಢಪಟ್ಟಿದೆ. ಕೋವಿಡ್ ಸೋಂಕಿನಿಂದ ನರಳುತ್ತಿದ್ದವರಲ್ಲಿ 6 ಮಂದಿ ಮೃತಪಟ್ಟಿದ್ದಾರೆ. ಬೆಂಗಳೂರು ನಗರ ಜಿಲ್ಲೆಯಲ್ಲಿ ಇಲ್ಲಿಯವರೆಗೆ 3,71,962 ಸೋಂಕಿತ ಪ್ರಕರಣಗಳು ಪತ್ತೆಯಾಗಿವೆ. ಈ ಪೈಕಿ 3,48,861 ಮಂದಿ ಗುಣಮುಖರಾಗಿದ್ದಾರೆ. ಉಳಿದ 18,938 ರೋಗಿಗಳು ನಿಗದಿತ ಆಸ್ಪತ್ರೆ, ಕೋವಿಡ್ ಆರೈಕೆ ಕೇಂದ್ರಗಳಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ. ಸೋಂಕಿಗೆ ಒಳಗಾದವರಲ್ಲಿ ಇದುವರೆಗೆ 4162 ಮಂದಿ ಸಾವಿಗೀಡಾಗಿದ್ದಾರೆ.

ಇನ್ನೂ 2-3 ದಿನ ಮುಂದುವರಿಯಲಿದೆ ಚಳಿ

# ಚಳಿಗೆ ಮುದುಡಿದ ಬೆಂಗಳೂರು

**ವಿಕ ಸುದ್ದಿಲೋಕ** ಬೆಂಗಳೂರು

ನಗರದಲ್ಲಿ ಗುರುವಾರ ಇಡೀ ದಿನ ಮೋಡ ಮುಸುಕಿದ ವಾತಾವರಣದಿಂದಾಗಿ ಜನರಿಗೆ ಚಳಿಯ ಅನುಭವ ಮತ್ತೆ ಕಾಡಲಾರಂಭಿಸಿತು.

ಬಂಗಾಳ ಕೊಲ್ಲಿಯಲ್ಲಿ ಮತ್ತೆ ವಾಯುಭಾರ ಕುಸಿತದಿಂದಾಗಿ ನಗರದ ವಾತಾವರಣವು ಬದಲಾಗಿದೆ. ಬೆಳಗ್ಗೆಯಿಂದಲೇ ಬಿಟ್ಟುಬಿಡದೆ ಸುರಿದ ಜಿಟಿಜಿಟಿ ಮಳೆ ಜನರನ್ನು ಮನೆಯಿಂದ ಹೊರಬರಲು ಬಿಡಲಿಲ್ಲ. ಕನಕ ಜಯಂತಿಗೆ ಸರಕಾರಿ ರಜೆ ಇದ್ದ ಕಾರಣ ಬಹುತೇಕ ಸಾರ್ವಜನಿಕರು ಮನೆಯಲ್ಲೇ ಬಂದಿಯಾಗಿ ರಜೆಯ ಸವಿಯನ್ನು ಅನುಭವಿಸಿದರು.

ಇಡೀ ದಿನ ನಗರದಲ್ಲಿ ಕೇವಲ 1 ಮಿ.ಮೀ.ನಷ್ಟು ಮಳೆ ದಾಖಲಾಗಿದೆ. ಆದರೆ, ತೇವಾಂಶ ಹಾಗೂ ಮೋಡ ಮುಸುಕಿದ್ದ ಕಾರಣ ಮಧ್ಯಾಹ್ನವೇ ಚಳಿಯಿಂದಾಗಿ ಜನರು ಸ್ವೆಟರ್ ತೊಟ್ಟು ಸಂಚರಿಸುತ್ತಿದ್ದ ದೃಶ್ಯ ಸಾಮಾನ್ಯವಾಗಿತ್ತು. ಸಂಜೆ ಬಳಿಕ ತುಸು ಹೆಚ್ಚಾಗಿಯೇ ಮಳೆ ಬರುವುದೆಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿತ್ತಾದರೂ, ಅದು ಹುಸಿಯಾಯಿತು. ಬದಲಾಗಿ ಚಳಿಯ ವಾತಾವರಣ ಒಂದೇ ಸಮನಾಗಿ ಕಂಡಿತು. ಡಿಸೆಂಬರ್ ತಿಂಗಳಿನಲ್ಲಿ ನಗರದ ಕನಿಷ್ಠ ಉಷ್ಣಾಂಶ 16 ಡಿಗ್ರಿಗಿಂತ ಕೆಳಗಿಳಿಯುತ್ತದೆ. ಮಳೆಯಿಂದಾಗಿ ಇದೇ ಪ್ರಮಾಣದ ಉಷ್ಣಾಂಶ ದಾಖಲಾಗಿದ್ದು, ಇನ್ನೂ 2-3 ದಿನ ಚಳಿ ಮುಂದುವರಿಯಲಿದೆ.



### ಇಂದೂ ಹಗುರ ಮಳೆ

ಶುಕ್ರವಾರ ಬೆಳಗ್ಗೆ ನಗರದ ಹಲವೆಡೆ ಮಂಜು ಮುಸುಕಿದ ವಾತಾವರಣ ಕಾಣಲಿದೆ. ಇದರ ಬೆನ್ನಲ್ಲೇ ಹಗುರದಿಂದ ಕೂಡಿದ ಮಳೆಯಾಗಲಿದೆ. ಸಂಜೆ ಬಳಿಕವೂ ಮೋಡ ಮುಸುಕಿರುತ್ತದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

### ನಗರ ಸುತ್ತಲಿನ ಜಿಲ್ಲೆಗಳಲ್ಲಿ ಮಳೆ

ಬಂಗಾಳ ಕೊಲ್ಲಿಯಲ್ಲಿ ಉಂಟಾಗಿರುವ ವಾಯುಭಾರ ಕುಸಿತದ ಪರಿಣಾಮ ಗುರುವಾರ ಬೆಂಗಳೂರು ಹಾಗೂ ಸುತ್ತಮುತ್ತಲಿನ ಜಿಲ್ಲೆಗಳಲ್ಲಿ ಹಗುರ ಪ್ರಮಾಣದ ಮಳೆಯಾಗಿದೆ. ಶುಕ್ರವಾರವೂ ದಕ್ಷಿಣ ಒಳನಾಡಿನ ಹಲವು ಜಿಲ್ಲೆಗಳಲ್ಲಿ ಸಾಧಾರಣ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಅಲ್ಲದೆ, ಶನಿವಾರವೂ ದಕ್ಷಿಣ ಒಳನಾಡಿನ ಹಲವು ಜಿಲ್ಲೆಗಳಲ್ಲಿ ಸಾಧಾರಣ ಪ್ರಮಾಣದ ಮಳೆಯಾಗುವ ಸಾಧ್ಯತೆ ಇದೆ. ಕರಾವಳಿ, ಮಲೆನಾಡು ಹಾಗೂ ಉತ್ತರ ಒಳನಾಡಿನ ಜಿಲ್ಲೆಗಳಲ್ಲಿ ಒಣ ಹವೆ ಮುಂದುವರಿಯಲಿದೆ. ಬೀದರ್‌ನಲ್ಲಿ ಅತಿ ಕನಿಷ್ಠ ಉಷ್ಣಾಂಶ 9.4 ಡಿಗ್ರಿ ಸೆ. ದಾಖಲಾಗಿದೆ. ಕೋಲಾರ, ಚಿಕ್ಕಬಳ್ಳಾಪುರ, ಬೆಂಗಳೂರು ಗ್ರಾಮಾಂತರ, ತುಮಕೂರು(ಭಾಗಶಃ), ರಾಮನಗರ, ಚಾಮರಾಜನಗರ, ಮೈಸೂರು ಹಾಗೂ ಮಂಡ್ಯ ಜಿಲ್ಲೆಗಳ ಹಲವೆಡೆ ಹಗುರ ಮಳೆಯಾಗಿದೆ.

| Date | 04-12-2020 |
|---|---|
| Page No | 7 |

# ಬಿಬಿಎಂಪಿ ಚುನಾವಣೆ: ಇಂದು ಹೈಕೋರ್ಟ್ ತೀರ್ಮಾನ

■ **ವಿಕ ಸುದ್ದಿಲೋಕ** ಬೆಂಗಳೂರು

ಬಿಬಿಎಂಪಿಗೆ ಚುನಾವಣೆ ನಡೆಸುವಂತೆ ಕೋರಿ ಸಲ್ಲಿಕೆಯಾಗಿರುವ ಅರ್ಜಿ ಸಂಬಂಧ ಶುಕ್ರವಾರ ಹೈಕೋರ್ಟ್ ತೀರ್ಪು ಪ್ರಕಟಿಸಲಿದೆ.

ಈಗಾಗಲೇ ಸರಕಾರ ಬಿಬಿಎಂಪಿಯ 198 ವಾರ್ಡ್‌ಗಳನ್ನು 243ಕ್ಕೆ ಹೆಚ್ಚಿಸಲು ವಿಧಾನ ಮಂಡಲದಲ್ಲಿ ವಿಧೇಯಕ ಮಂಡಿಸಿ ಒಪ್ಪಿಗೆ ಪಡೆದಿದೆ. ಇದರ ಕಾರ್ಯವನ್ನು ಶಾಸಕ ಎಸ್. ರಘು ನೇತೃತ್ವದ ಸಮಿತಿಯು ಅಧ್ಯಯನ ನಡೆಸಿ ಈಗಾಗಲೇ ಮಧ್ಯಂತರ ವರದಿ ನೀಡಿದ್ದು, ಸದ್ಯದಲ್ಲೇ ಅಂತಿಮ ವರದಿಯನ್ನು ಸಲ್ಲಿಸುವ ಹಾದಿಯಲ್ಲಿದೆ. ಈ ಕಾರಣದಿಂದಾಗಿ ಸರಕಾರ





ಪಾಲಿಕೆಗೆ ಚುನಾವಣೆಯನ್ನು ನಿಗದಿತ ಅವಧಿಯೊಳಗೆ ನಡೆಸದೆ ಮುಂದೂಡಿದೆ. ಇದನ್ನು ಪ್ರಶ್ನಿಸಿ ಕಾಂಗ್ರೆಸ್‌ನ ಮಾಜಿ ಕಾರ್ಪೊರೇಟರ್ ಎಂ.ಶಿವರಾಜ್ ಕೋರ್ಟ್ ಮೆಟ್ಟಿಲು ಹತ್ತಿದ್ದು, ಚುನಾವಣೆ ನಡೆಸುವಂತೆ ಮನವಿ ಮಾಡಿದ್ದಾರೆ. ಶುಕ್ರವಾರ ತೀರ್ಪು ಹೊರಬೀಳಲಿದೆ.

ಕೊರೊನಾದಿಂದ ಗ್ರಾಪಂ ಚುನಾವಣೆಯನ್ನು ಮುಂದೂಡುವಂತೆ ಸರಕಾರ ಹೈಕೋರ್ಟ್‌ನಲ್ಲಿ ವಾದ ಮಂಡಿಸಿತ್ತು. ಚುನಾವಣಾ ಆಯೋಗ ಚುನಾವಣೆ ನಡೆಸಲು ಸಿದ್ಧವಿರುವುದಾಗಿ ನಿಲುವು ವ್ಯಕ್ತಪಡಿಸಿತ್ತು. ವಾದ, ಪ್ರತಿವಾದ ಆಲಿಸಿದ ಬಳಿಕ ಹೈಕೋರ್ಟ್, ಅವಧಿ ಪೂರ್ಣಗೊಂಡಿರುವ ಗ್ರಾಪಂಗಳಿಗೆ ಚುನಾವಣೆ ನಡೆಸುವಂತೆ ಸರಕಾರಕ್ಕೆ ನಿರ್ದೇಶನ ನೀಡಿತ್ತು. ಇದೇ ತೆರನಾದ ತೀರ್ಪು ಬಿಬಿಎಂಪಿ ಪ್ರಕರಣದಲ್ಲಿ ಮರುಕಳಿಸುವುದೇ ಎಂಬ ಆಳುಕು ಸರಕಾರಕ್ಕಿದೆ. ಆದರೆ, ನ್ಯಾಯಾಲಯದ ತೀರ್ಪಿನ ಮೇಲೆ ಬಿಬಿಎಂಪಿ ಚುನಾವಣೆ ನಿರ್ಧಾರಿತವಾಗಲಿದೆ.

VK
ವಿಜಯ ಕರ್ನಾಟಕ

| Date | 04-12-2020 |
| --- | --- |
| Page No | 7 |


# ರಸ್ತೆ ಗುಂಡಿ ಅಪಘಾತಕ್ಕೆ ಪಾಲಿಕೆ ಪರಿಹಾರ

■ **ವಿಕ ಸುದ್ದಿಲೋಕ** ಬೆಂಗಳೂರು

ರಸ್ತೆ ಗುಂಡಿಗಳಿಂದ ಸಂಭವಿಸಿದ ಅಪಘಾತದಲ್ಲಿ ಗಾಯಗೊಂಡವರಿಗೆ ಹಾಗೂ ಮೃತಪಟ್ಟವರಿಗೆ ಬಿಬಿಎಂಪಿಯು ಪರಿಹಾರ ನೀಡಲಿದೆ. ಗಾಯಗೊಂಡವರಿಗೆ 5 ಸಾವಿರ ರೂ.ನಿಂದ 15 ಸಾವಿರ ರೂ., ಮೃತಪಟ್ಟವರ ಕುಟುಂಬಕ್ಕೆ 3 ಲಕ್ಷ ರೂ. ಪರಿಹಾರ ಸಿಗಲಿದೆ.

ಹೈಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ಪಾಲಿಕೆಯು ರಸ್ತೆ, ಪಾದಚಾರಿ ಮಾರ್ಗಗಳ ಅಸಮರ್ಪಕ ನಿರ್ವಹಣೆ ಹಾಗೂ ರಸ್ತೆ ಗುಂಡಿಗಳಿಂದ ಅಪಘಾತಕ್ಕೀಡಾದವರಿಗೆ ಪರಿಹಾರ ನೀಡುವ ಕಾರ್ಯಕ್ಕೆ ಚಾಲನೆ ನೀಡಿದೆ. ಈ ಸಂಬಂಧ ಸಾರ್ವಜನಿಕ ಪ್ರಕಟಣೆಯನ್ನೂ ಹೊರಡಿಸಿದೆ. ರಸ್ತೆ ಗುಂಡಿಗಳಿಂದ ಅಪಘಾತಕ್ಕೊಳಗಾಗಿ ಗಾಯಗೊಂಡವರು ವಲಯ ಹೆಚ್ಚುವರಿ ಅಥವಾ ಜಂಟಿ ಆಯುಕ್ತರಿಗೆ ಅಗತ್ಯ ದಾಖಲೆಗಳೊಂದಿಗೆ ಮನವಿ ಸಲ್ಲಿಸಬಹುದಾಗಿದೆ.



**ಹೈಕೋರ್ಟ್ ಆದೇಶದ ಹಿನ್ನೆಲೆಯಲ್ಲಿ ಪರಿಹಾರ ನೀಡಲು ಚಾಲನೆ**

ಗಾಯಾಳುಗಳು ಹಾಗೂ ಮೃತಪಟ್ಟವರ ಕುಟುಂಬಸ್ಥರು ಅಪಘಾತ ನಡೆದ 30 ದಿನಗಳಲ್ಲಿ ಅರ್ಜಿ ಸಲ್ಲಿಸಲು ಅವಕಾಶ ನೀಡಲಾಗಿದೆ. ಸಣ್ಣಪ್ರಮಾಣದ ಗಾಯಗಳಿಗೆ 5 ಸಾವಿರ ರೂ., ಮೂರು ದಿನಗಳು ಅಥವಾ ಅದಕ್ಕಿಂತ ಹೆಚ್ಚು ಅವಧಿಯ ಚಿಕಿತ್ಸೆಯ ಅಗತ್ಯವಿದ್ದರೆ 10 ಸಾವಿರ ರೂ. ಮತ್ತು ಗಂಭೀರವಾಗಿ ಗಾಯಗೊಂಡವರಿಗೆ 15 ಸಾವಿರ ರೂ. ಪರಿಹಾರ ಸಿಗಲಿದೆ. ಅಪಘಾತದಲ್ಲಿ ಮೃತಪಟ್ಟವರ ಅವಲಂಬಿತರಿಗೆ 3 ಲಕ್ಷ ರೂ. ಪರಿಹಾರ ನೀಡಲಾಗುತ್ತದೆ. ಪೊಲೀಸರ ದೂರು ಹಾಗೂ ಸಿಸಿಟಿವಿ ದೃಶ್ಯಾವಳಿಗಳನ್ನು ಸಾಕ್ಷ್ಯವಾಗಿ ಪರಿಗಣಿಸಿ ಪರಿಹಾರ ನೀಡಲಾಗುತ್ತದೆ. ಈವರೆಗೆ ಪರಿಹಾರ ಕೋರಿ ಒಬ್ಬರು ಮಾತ್ರ ಅರ್ಜಿ ಸಲ್ಲಿಸಿದ್ದಾರೆ.

| Date | 04-12-2020 |
| --- | --- |
| Page No | 7 |

ನಗರ ಹೊರವಲಯದ ನಾಲ್ಕು ಗ್ರಾಪಂಗಳು ಮೇಲ್ದರ್ಜೆಗೆ | ಮೂಲಸೌಕರ್ಯ ಒದಗಿಸಲು ಅನುಕೂಲ

# ಹುಣಸಮಾರನಹಳ್ಳಿ, ಚಿಕ್ಕಬಾಣಾವರ ಪುರಸಭೆ ರಚನೆಗೆ ಅಧಿಸೂಚನೆ

**ರಾಮಚಂದ್ರಮೂರ್ತಿ ಚಲ್ಲಹಳ್ಳಿ** ಯಲಹಂಕ

ಬೆಂಗಳೂರು ನಗರದ ಹೊರವಲಯದಲ್ಲಿ ಇನ್ನೆರಡು ಪುರಸಭೆ ರಚನೆ ಸಂಬಂಧ ರಾಜ್ಯ ಸರಕಾರ ಗೆಜೆಟ್ ಅಧಿಸೂಚನೆ ಹೊರಡಿಸಿದೆ. ಹುಣಸಮಾರನಹಳ್ಳಿ ಮತ್ತು ಚಿಕ್ಕಬಾಣಾವರ ಎಂಬ ಎರಡು ಹೊಸ ಪುರಸಭೆ ಅಸ್ತಿತ್ವಕ್ಕೆ ಬರಲಿದ್ದು, ನಾಲ್ಕು ಗ್ರಾಮಪಂಚಾಯಿತಿಗಳು ಮೇಲ್ದರ್ಜೆಗೇರಲಿವೆ.

**ಚಿಕ್ಕ ಬಾಣಾವರ ಪುರಸಭೆ:** ಬೆಂಗಳೂರು ಉತ್ತರ ತಾಲೂಕಿನ ಚಿಕ್ಕಬಾಣಾವರ ಗ್ರಾಮ ಪಂಚಾಯಿತಿ, ಸೋಮಶೆಟ್ಟಿ ಹಳ್ಳಿ ಗ್ರಾಮ ಪಂಚಾಯಿತಿಗಳನ್ನು ವಿಲೀನಗೊಳಿಸಿ ಚಿಕ್ಕಬಾಣಾವರ ಪುರಸಭೆ ರಚಿಸಲಾಗುತ್ತಿದೆ.

ಚಿಕ್ಕಬಾಣಾವರ, ಸೋಮಶೆಟ್ಟಿಹಳ್ಳಿ, ಲಕ್ಷ್ಮೀಪುರ, ಕೆರೆಗುಡ್ಡದಹಳ್ಳಿ, ಗಾಣಿಗರಹಳ್ಳಿ ನೂತನ ಪುರಸಭೆ ವ್ಯಾಪ್ತಿಯಲ್ಲಿ ಇರಲಿವೆ. ನೂತನ ಪುರಸಭೆ 9.07 ಸಾವಿರ ಚದರ ಕಿ.ಮೀ. (2243.10 ಎಕರೆ) ವಿಸ್ತೀರ್ಣ ಹೊಂದಿರಲಿದೆ. ಪ್ರತಿ ಚದರ ಕಿ.ಮೀ. ಗೆ 2826 ಜನಸಂಖ್ಯೆ ಹೊಂದಿದೆ. ತೆರಿಗೆ ಹಾಗೂ ತೆರಿಗೆಯೇತರವಾಗಿ 3.17 ಕೋಟಿ ರೂ. ರಾಜಸ್ವ ಸಂಗ್ರಹವಾಗುತ್ತಿದೆ.



ಹುಣಸಮಾರನಹಳ್ಳಿ ಗ್ರಾಮ ಪಂಚಾಯಿತಿ ಕಟ್ಟಡ

ಕೃಷಿಯೇತರ ಚಟುವಟಿಕೆಗಳಿಗೆ ಸಂಬಂಧಿಸಿದ ಉದ್ಯೋಗದ ಪ್ರಮಾಣ ಶೇ.80ರಷ್ಟಿದೆ.

**ಹುಣಸಮಾರನಹಳ್ಳಿ ಪುರಸಭೆ:** ದೇವನಹಳ್ಳಿ ವಿಮಾನ ನಿಲ್ದಾಣ ರಸ್ತೆಗೆ ಹೊಂದಿಕೊಂಡಿರುವ ಹುಣಸಮಾರನಹಳ್ಳಿ ಗ್ರಾಮ ಪಂಚಾಯಿತಿ ಹಾಗೂ ಸೊಣ್ಣಪ್ಪನಹಳ್ಳಿ ಗ್ರಾಮ ಪಂಚಾಯಿತಿಗಳನ್ನು ವಿಲೀನಗೊಳಿಸಿ ಹುಣಸಮಾರನಹಳ್ಳಿ ಪುರಸಭೆ ರಚಿಸಲಾಗುತ್ತಿದೆ. ಹುಣಸಮಾರನಹಳ್ಳಿ, ಭಾರತಿನಗರ, ಕೋಡಗಲಹಟ್ಟಿ, ಸೊಣ್ಣಪ್ಪನಹಳ್ಳಿ, ಕಾಡಿಗಾನಹಳ್ಳಿ ಬಿಲ್ಲಮಾರನಹಳ್ಳಿ ನೂತನ ಪುರಸಭೆ ವ್ಯಾಪ್ತಿಗೆ ಒಳಪಡಲಿವೆ.

ಈ ಪುರಸಭೆ ವ್ಯಾಪ್ತಿಯಲ್ಲಿ 37,748 ಜನಸಂಖ್ಯೆ ಇದೆ. 14.85 ಚ.ಕಿ.ಮೀ. ವಿಸ್ತೀರ್ಣ ಹೊಂದಿದೆ. ಪ್ರತಿ ಕಿಲೋಮೀಟರ್‌ಗೆ 2276 ಜನಸಂಖ್ಯೆ ಹೊಂದಿದೆ. ಕೃಷಿಯೇತರ ಚಟುವಟಿಕೆಗಳಿಗೆ ಸಂಬಂಧಿಸಿದ ಉದ್ಯೋಗದ ಪ್ರಮಾಣ ಶೇ.94 ರಷ್ಟಿದೆ.

**ಆಕ್ಷೇಪಣೆಗೆ ಅವಕಾಶ:** ಸರಕಾರದ ಈ ನಿರ್ಧಾರಕ್ಕೆ ಆಕ್ಷೇಪಣೆ ಅಥವಾ ಸಲಹೆಗಳಿದ್ದಲ್ಲಿ ಲಿಖಿತವಾಗಿ ಡಿ.30ರೊಳಗೆ ಸಲ್ಲಿಸಲು ಕಾಲಾವಕಾಶ ನೀಡಲಾಗಿದೆ. ಆಕ್ಷೇಪಣೆ/ಸಲಹೆಯನ್ನು ನಿರ್ದೇಶಕರು, ಪೌರಾಡಳಿತ ನಿರ್ದೇಶನಾಲಯ, 9ನೇ ಮಹಡಿ, ವಿವಿ ಗೋಪುರ, ಬೆಂಗಳೂರು ಈ ವಿಳಾಸಕ್ಕೆ ಗಡುವಿನೊಳಗೆ ಸಲ್ಲಿಸಬೇಕು ಎಂದು ಅಧಿಸೂಚನೆಯಲ್ಲಿ ಸ್ಪಷ್ಟಪಡಿಸಲಾಗಿದೆ.

**ಹೆಚ್ಚಿನ ಅನುದಾನ**

ಹೊಸದಾಗಿ ರಚನೆಯಾಗುತ್ತಿರುವ ಪುರಸಭೆ ವ್ಯಾಪ್ತಿಯ ಪ್ರದೇಶಗಳು ಹಳ್ಳಿಯಾಗಿ ಉಳಿದಿಲ್ಲ, ಬಹುತೇಕ ನಗರೀಕರಣಗೊಂಡಿವೆ. ಗ್ರಾಮ ಪಂಚಾಯಿತಿಗೆ ಹೆಚ್ಚಿನ ಅನುದಾನ ಸಿಗದೆ ಮೂಲಸೌಲಭ್ಯಗಳನ್ನು ಕಲ್ಪಿಸಲು ಸಮಸ್ಯೆಯಾಗುತ್ತಿತ್ತು. ಪುರಸಭೆಯಾಗಿ ಮೇಲ್ದರ್ಜೆಗೇರಿದ ಬಳಿಕ ಹೆಚ್ಚಿನ ಅನುದಾನ ದೊರೆತು ನಾಗರಿಕರಿಗೆ ಮೂಲಸೌಲಭ್ಯಗಳು ಸಿಗಲಿವೆ. ಆಸ್ತಿ ಮೌಲ್ಯವೂ ಹೆಚ್ಚಳವಾಗಲಿದೆ.



**ಹುಣಸಮಾರನಹಳ್ಳಿ ಗ್ರಾಮ ಪಂಚಾಯಿತಿಯನ್ನು ಪುರಸಭೆಯಾಗಿ ಮೇಲ್ದರ್ಜೆಗೇರಿಸಬೇಕು ಎಂದು ಎರಡು ವರ್ಷಗಳ ಹಿಂದೆ ಮುಖ್ಯಮಂತ್ರಿ ಅವರಿಗೆ ಪತ್ರ ಬರೆದಿದ್ದೆ. ಕಡೆಗೂ ಈ ಭಾಗದ ಜನರ ಕನಸು ನನಸಾಗಿದೆ. ಈ ಭಾಗದ ಇತರ ಗ್ರಾಮಗಳನ್ನೂ ಪುರಸಭೆ ವ್ಯಾಪ್ತಿಗೆ ಸೇರಿಸಲು ಸಿಎಂ ಅವರಿಗೆ ಪತ್ರ ಬರೆದಿದ್ದೇನೆ.**

**- ಡಿ.ವಿ ಸದಾನಂದಗೌಡ** ಕೇಂದ್ರ ಸಚಿವರು

**ಬೆಟ್ಟಹಲಸೂರು ಗ್ರಾಮ ಪಂಚಾಯಿತಿಯನ್ನು ನೂತನ ಪುರಸಭೆಗೆ ಸೇರಿಸಿಕೊಳ್ಳಬೇಕೆಂದು ಗ್ರಾಮ ಪಂಚಾಯಿತಿಯಲ್ಲಿ ನಿರ್ಣಯ ಕೈಗೊಂಡು ಸರಕಾರಕ್ಕೆ ಕಳುಹಿಸಲಾಗಿತ್ತು.**

**- ರಜನಿಪ್ರಕಾಶ್** ಅಧ್ಯಕ್ಷ, ಗ್ರಾಪಂ, ಬೆಟ್ಟಹಲಸೂರು ಗ್ರಾಪಂ

**ಜಾಲಹೋಬಳಿ ಪ್ರದೇಶವು ಸಂಪೂರ್ಣ ನಗರೀಕರಣವಾಗಿದೆ. ಎಲ್ಲ ಗ್ರಾಮಗಳನ್ನು ಸೇರಿಸಿ ಮೇಲ್ದರ್ಜೆಗೇರಿಸಬೇಕೆಂದು ಸರಕಾರವನ್ನು ಒತ್ತಾಯಿಸಿದ್ದೆವು.**

**- ಕೃಷ್ಣಬೈರೇಗೌಡ** ಶಾಸಕರು, ಬ್ಯಾಟರಾಯನಪುರ ಕ್ಷೇತ್ರ

**ಚಿಕ್ಕ ಬಾಣಾವರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಶೇ 90ರಷ್ಟು ಪ್ರದೇಶ ನಗರ ಪ್ರದೇಶವಾಗಿ ಹತ್ತುವರ್ಷಗಳ ಹಿಂದೆಯೇ ಬದಲಾಗಿದೆ. ಹೆಚ್ಚು ತೆರಿಗೆ ಸಂಗ್ರಹವಾಗಿ ಹೆಚ್ಚು ಅಭಿವೃದ್ಧಿ ಸಾಧ್ಯವಾಗಲಿದೆ.**

**- ಮರಿಸ್ವಾಮಿ** ಅಧ್ಯಕ್ಷರು, ನಗರ ಜಿಲ್ಲಾ ಪಂಚಾಯಿತಿ, ಬೆಂಗಳೂರು ನಗರ ಜಿಲ್ಲೆ

You May Like

ವಿಜಯ ಕರ್ನಾಟಕ

| Date | 04-12-2020 |
| --- | --- |
| Page No | 8 |

ಅವೈಜ್ಞಾನಿಕ ಫುಟ್‌ಪಾತ್ ನಿರ್ಮಾಣ | 6.5 ಕಿ.ಮೀ ಉದ್ದದ ರಸ್ತೆ ಮಾರ್ಗದ ಹಲವೆಡೆ ಅವ್ಯವಸ್ಥೆ

# ಕನಕಪುರ ರಸ್ತೆಯಲ್ಲಿ ತೇಪೆಗಳ ದರ್ಬಾರ್!

■ ನಾಗಪ್ಪ ನಾಗನಾಯಕನಹಳ್ಳಿ ಬೆಂಗಳೂರು
nagappa.narayanappa@timesgroup.com

'ನಮ್ಮ ಮೆಟ್ರೊ' ಎರಡನೇ ಹಂತದಲ್ಲಿ ಯಲಚೇನಹಳ್ಳಿಯಿಂದ ನೈಸ್ ರಸ್ತೆವರೆಗಿನ ವಿಸ್ತರಿತ ಕಾಮಗಾರಿ ಪೂರ್ಣಗೊಂಡು ಉದ್ಘಾಟನೆಗೆ ಸಜ್ಜಾಗಿದೆ. ಆದರೆ, ಹೆಸರಿಗಷ್ಟೇ ರಾಷ್ಟ್ರೀಯ ಹೆದ್ದಾರಿ ಎಂಬ ಹಣೆಪಟ್ಟಿ ಅಂಟಿಸಿಕೊಂಡಿರುವ ಕನಕಪುರ ರಸ್ತೆ ಸ್ಥಿತಿ ಮಾತ್ರ ಬದಲಾಗಿಲ್ಲ, ಬರೀ ತೇಪೆಗಳಿಂದ ಕೂಡಿರುವ ರಸ್ತೆಯಿಂದ ಈ ಭಾಗದ ಜನರು ನಿತ್ಯ ನರಕಯಾತನೆ ಅನುಭವಿಸುವಂತಾಗಿದೆ.

ಬಿಎಂಆರ್‌ಸಿಎಲ್ 6.5 ಕಿ.ಮೀ ಉದ್ದದ ರಸ್ತೆ, ಚರಂಡಿ ಮತ್ತು ಪಾದಚಾರಿ ಮಾರ್ಗದ ಅಭಿವೃದ್ಧಿಗೆ 13.51 ಕೋಟಿ ರೂ. ವೆಚ್ಚ ಮಾಡುತ್ತಿದೆ. ಕಾಮಗಾರಿಯು ತೆವಳುತ್ತಾ ಸಾಗಿದ್ದು, ರಸ್ತೆ, ಚರಂಡಿ ಹಾಗೂ ಫುಟ್‌ಪಾತ್ ಅಭಿವೃದ್ಧಿ ಕಾಮಗಾರಿಯು ಕಳಪೆ ಗುಣಮಟ್ಟದಿಂದ ಕೂಡಿದೆ ಎಂಬ ಆರೋಪ ಕೇಳಿಬಂದಿದೆ. ಪಾದಚಾರಿ ಮಾರ್ಗದಲ್ಲಿನ ಕಾಬೂಲ್ ಸ್ಟೋನ್‌ಗಳು ಹಾಕಿದ ಕೆಲವೇ ದಿನಗಳಲ್ಲಿ ಕಿತ್ತು ಬಂದಿದ್ದು, ಇದು ಕಳಪೆ ಕೆಲಸಕ್ಕೆ ಸಾಕ್ಷಿಯಾಗಿದೆ. ರಸ್ತೆಯು ಮೊದಲಿಗಿಂತ ಒಂದೂವರೆ ಪಟ್ಟು ದೊಡ್ಡದಾಗುತ್ತಿದೆ. ಆದರೆ, ಕಾಮಗಾರಿ ಸಮರ್ಪಕವಾಗಿ ನಡೆಯುತ್ತಿಲ್ಲ.

ಮೆಟ್ರೊ, ಜಲಮಂಡಳಿಯ ಒಳಚರಂಡಿ ಮತ್ತು ಕುಡಿಯುವ ನೀರಿನ ಸಂಪರ್ಕ ಮತ್ತು ಗೇಲ್ ಸಂಸ್ಥೆಯಿಂದ ಅಡುಗೆ ಅನಿಲ ಪೂರೈಕೆಯ ಕೊಳವೆ ಅಳವಡಿಕೆ ಸೇರಿದಂತೆ ಇನ್ನಿತರೆ ಉದ್ದೇಶಕ್ಕೆ ಹಲವು ಸಲ ರಸ್ತೆ ಅಗೆದು ಹಾಳು ಮಾಡಲಾಗಿದೆ. ಕಳೆದ ಐದು ವರ್ಷಗಳಲ್ಲಿ ಗುಂಡಿ ಬಿದ್ದು ಹದಗೆಟ್ಟು ಹೋಗಿದ್ದ ರಸ್ತೆಗೆ ಹಲವು ಸಲ ತೇಪೆ ಹಾಕಿದರೂ ಮೊದಲಿನ ಸ್ಥಿತಿಗೆ ಬಂದಿಲ್ಲ. ಸದ್ಯ ಕೋಣನಕುಂಟೆ ಕ್ರಾಸ್‌ನಿಂದ ದೊಡ್ಡಕಲ್ಲಸಂದ್ರವರೆಗೆ ಡಾಂಬರೀಕರಣ ಕಾಮಗಾರಿ ಕೈಗೊಂಡಿದ್ದು, ತೇಪೆ ಹಾಕಲಾಗುತ್ತಿದೆ. ಇದರಿಂದ ಗುಂಡಿಗಳು ನಿರ್ಮಾಣವಾಗಿ ರಸ್ತೆಯು ಮತ್ತಷ್ಟು ಹಾಳಾಗುತ್ತಿದೆ.






ದೊಡ್ಡಕಲ್ಲಸಂದ್ರದಿಂದ ನೈಸ್ ರಸ್ತೆವರೆಗೆ ತೇಪೆಗಳಿಲ್ಲದ ರಸ್ತೆಯು ಕಾಣ ಸಿಗುವುದೇ ಇಲ್ಲ, ರಘುವನಹಳ್ಳಿಯ 'ಎ 2 ಬಿ' ಹೋಟೆಲ್ ಮುಂಭಾಗ ಹಲವು ಸಲ ಡಾಂಬರು ಹಾಕಿದರೂ, ಗುಂಡಿ ಮುಕ್ತವಾಗಿಲ್ಲ, 'ಚೇಂಜ್ ಮೇಕರ್ಸ್ ಆಫ್ ಕನಕಪುರ ರಸ್ತೆ' ಸಂಘಟನೆಯ ಸದಸ್ಯರು ಅನೇಕ ಬಾರಿ ಗುಣಮಟ್ಟದ ರಸ್ತೆ ನಿರ್ಮಾಣಕ್ಕೆ ಮೆಟ್ರೊ ನಿಗಮಕ್ಕೆ ಮನವಿ ಸಲ್ಲಿಸಿದ್ದಾರೆ. ಆದಾಗ್ಯೂ, ಸಂಬಂಧಪಟ್ಟ ಅಧಿಕಾರಿಗಳು ಕಿವಿಗೊಡುತ್ತಿಲ್ಲ,

**ರಸ್ತೆ, ಚರಂಡಿ, ಫುಟ್‌ಪಾತ್ ಅಭಿವೃದ್ಧಿಗೆ 13.51 ಕೋಟಿ ರೂ. ವೆಚ್ಚ**

**ತೆವಳುತ್ತಾ ಸಾಗಿರುವ ಅಭಿವೃದ್ಧಿ ಕಾಮಗಾರಿ**

## ಗಿಡ ನೆಡಲು ಜಾಗವೇ ಇಲ್ಲ

ಮೆಟ್ರೊ ಕಾಮಗಾರಿಗಾಗಿ 6.5 ಕಿ.ಮೀ ಮಾರ್ಗದಲ್ಲಿ ಹಲವು ಮರಗಳನ್ನು ಕಡಿದುರುಳಿಸಲಾಯಿತು. ಆ ಜಾಗದಲ್ಲಿ ಹೊಸದಾಗಿ ಗಿಡಗಳನ್ನು ನೆಡುವಂತೆ 'ಚೇಂಜ್ ಮೇಕರ್ಸ್ ಆಫ್ ಕನಕಪುರ ರಸ್ತೆ' ಸಂಘಟನೆ ಸದಸ್ಯರು ಒತ್ತಾಯಿಸಿದ್ದರು. ಇದಕ್ಕೆ ಸ್ಪಂದಿಸಿದ್ದ ಬಿಎಂಆರ್‌ಸಿಎಲ್ ಅಧಿಕಾರಿಗಳು, ಸಸಿಗಳನ್ನು ನೆಡಲು ಜಾಗ ಬಿಡುವುದಾಗಿ ಹೇಳಿದ್ದರು. ಆದರೆ, ಒಂದಿಂಚೂ ಜಾಗ ಬಿಡದಂತೆ ಡಾಂಬರು ಹಾಕಲಾಗುತ್ತಿದೆ. ಅಳಿದುಳಿದ ಮರಗಳಿಗೂ ಪಾತಿ ಮಾಡಿ, ಮಳೆ ನೀರು ನಿಲ್ಲುವಂತೆ ಮಾಡುತ್ತಿಲ್ಲ,

ಕನಕಪುರ ರಸ್ತೆಯ ಮಾರ್ಗದಲ್ಲಿ ಕುಡಿಯುವ ನೀರು, ಒಳಚರಂಡಿಗಾಗಿ ರಸ್ತೆ ಅಗೆದು ಹಾಕಲಾಗಿದೆ. ಈ ಮೊದಲು ಅಗೆದಿದ್ದ ಕಡೆ ಬಿಬಿಎಂಪಿ ತೇಪೆ ಹಾಕಿತ್ತು. ಆನಂತರ ಒಳಚರಂಡಿಗೆ ಅಗೆದ ರಸ್ತೆಯ ದುರಸ್ತಿ ಕಾರ್ಯವು ತಮಗೆ ಸಂಬಂಧಿಸಿದ್ದಲ್ಲವೆಂದು ಜಲಮಂಡಳಿ, ಬಿಎಂಆರ್‌ಸಿಎಲ್ ನುಣುಚಿಕೊಳ್ಳುತ್ತಿವೆ.

- **ಶ್ರೀವತ್ಸ**, ಬಾಲಾಜಿ ಬಡಾವಣೆ ನಿವಾಸಿ

## ಪಾದಚಾರಿ ಮಾರ್ಗವೇ ಇಲ್ಲ

ಸಾರಕ್ಕಿಯಿಂದ ನೈಸ್ ರಸ್ತೆವರೆಗಿನ ಪಾದಚಾರಿ ಮಾರ್ಗವನ್ನು ಅವೈಜ್ಞಾನಿಕವಾಗಿ ನಿರ್ಮಿಸಲಾಗಿದೆ. ರಸ್ತೆಯ ಎರಡೂ ಬದಿಗಳಲ್ಲಿ ನಿರ್ಮಿಸುತ್ತಿರುವ ಫುಟ್‌ಪಾತ್ ಮಾರ್ಗವು ಏಕರೂಪದಿಂದ ಕೂಡಿಲ್ಲ, ತಲಘಟ್ಟಪುರದಿಂದಾಚೆಗೆ ಪಾದಚಾರಿ ಮಾರ್ಗವನ್ನೇ ನಿರ್ಮಿಸಿಲ್ಲ, ಚರಂಡಿಗಳಲ್ಲಿನ ಹೂಳು ತೆಗೆಯದೆಯೇ ಕಾಬೂಲ್ ಸ್ಟೋನ್‌ಗಳನ್ನು ಅಳವಡಿಸಿ, ಫುಟ್‌ಪಾತ್ ನಿರ್ಮಾಣ ಕಾಮಗಾರಿ ಕೈಗೊಳ್ಳಲಾಗಿದೆ. ಹೂಳು ತುಂಬಿಕೊಂಡಾಗ ಕಾಬೂಲ್ ಸ್ಟೋನ್‌ಗಳನ್ನು ಕಿತ್ತೊಗೆದು ತೆರವು ಮಾಡಬೇಕಾಗುತ್ತದೆ. ಅಲ್ಲಲ್ಲಿ ಹೂಳು ತೆಗೆಯುವುದಕ್ಕಾಗಿ ಮ್ಯಾನ್‌ಹೋಲ್‌ಗಳನ್ನು ನಿರ್ಮಿಸಲಾಗಿದ್ದರೂ, ಪೂರ್ತಿ ಮಾರ್ಗದಲ್ಲಿ ತೆಗೆಯುವುದು ಕಷ್ಟ.



ವಿಜಯವಾಣಿ
ಕನ್ನಡಿಗರ ಧ್ವನಿ

| Date | 04-12-2020 |
| --- | --- |
| Page No | 3 |


# ಬಿಬಿಎಂಪಿ ಚುನಾವಣೆ ಕುತೂಹಲಕ್ಕಿಂದು ತೆರೆ

## ತೀರ್ಪು ಪ್ರಕಟಿಸಲಿರುವ ಹೈಕೋರ್ಟ್ | ಎಲೆಕ್ಷನ್‌ಗೆ ಅಗತ್ಯ ಸಿದ್ಧತೆ ನಡೆಸಲಾಗಿದೆ ಎಂದಿರುವ ಆಯೋಗ


■ ವಿಜಯವಾಣಿ ಸುದ್ದಿಜಾಲ ಬೆಂಗಳೂರು


ಬಿಬಿಎಂಪಿಗೆ ಶೀಘ್ರ ಚುನಾವಣೆ ನಡೆಸಲು ಸರ್ಕಾರಕ್ಕೆ ನಿರ್ದೇಶಿಸುವಂತೆ ಕೋರಿ ಸಲ್ಲಿಕೆಯಾಗಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿಗಳ ಕುರಿತು ಶುಕ್ರವಾರ (ಡಿ.4) ತೀರ್ಪು ಪ್ರಕಟಿಸಲಿರುವ ಹೈಕೋರ್ಟ್, ಚುನಾವಣೆ ನಡೆಯಲಿದೆಯೇ ಅಥವಾ ಮುಂದೂಡಲ್ಪಡುವುದೇ ಎಂಬ ಕುತೂಹಲಕ್ಕೆ ತೆರೆ ಎಳೆಯಲಿದೆ.

**» ಮಾಜಿ ಸದಸ್ಯರಾದ ಶಿವರಾಜು, ವಾಜೀದ್ ಸಲ್ಲಿಸಿರುವ ಅರ್ಜಿ**

ರಾಜ್ಯ ಚುನಾವಣಾ ಆಯೋಗ, ಮಾಜಿ ಕಾರ್ಪೊರೇ ಟರ್‌ಗಳಾದ ಎಂ. ಶಿವರಾಜು ಹಾಗೂ ಅಬ್ದುಲ್ ವಾಜೀದ್ ಸಲ್ಲಿಸಿರುವ ಪಿಐಎಲ್‌ಗಳ ಕುರಿತು ನ.25ರಂದು ವಿಚಾರಣೆ ಪೂರ್ಣಗೊಳಿಸಿ ಕಾಯ್ದಿರಿಸಿರುವ ತೀರ್ಪನ್ನು ಸಿಜೆ ಎ.ಎಸ್. ಓಕ್ ನೇತೃತ್ವದ ವಿಭಾಗೀಯ ಪೀಠ ಪ್ರಕಟಿಸಲಿದೆ.

ವಿಚಾರಣೆ ವೇಳೆ ವಾದ ಮಂಡಿಸಿದ್ದ ರಾಜ್ಯ ಚುನಾವಣಾ ಆಯೋಗ, ಈಗಾಗಲೇ ಪಾಲಿಕೆ ಚುನಾವಣೆಗೆ ಅಗತ್ಯ ಸಿದ್ಧತೆಗಳನ್ನು ನಡೆಸಿಕೊಳ್ಳಲಾಗಿದ್ದು, ಮತದಾರರ ಪಟ್ಟಿ ತಯಾರಿಕೆಗೆ 3 ಕೋಟಿ ರೂ. ವೆಚ್ಚ ಮಾಡಲಾಗಿದೆ ಎಂದು ತಿಳಿಸಿತ್ತು. ಮಾಜಿ ಕಾರ್ಪೊರೇಟರ್‌ಗಳ ಪರ ವಕೀಲರು, ಪಾಲಿಕೆ ಅಧಿಕಾರಾವಧಿ ಮುಕ್ತಾಯಗೊಂಡಿದ್ದು, ಸಂವಿಧಾನದ ಪರಿಚ್ಛೇದ 243(ಯು) ಅನ್ವಯ ಚುನಾವಣೆಗಳನ್ನು ನಡೆಸಲೇಬೇಕು. ಈಗ ಚುನಾವಣೆ ನಡೆಸದಿದ್ದರೆ 2021ರ ಜನಗಣತಿ ಬರಲಿದೆ. ಆಗ ಮತ್ತೆ ಚುನಾವಣೆ ಮುಂದೂಡುವ ಸಾಧ್ಯತೆ ಇರುತ್ತದೆ ಎಂದು ಕೋರ್ಟ್‌ಗೆ ವಿವರಿಸಿದ್ದರು.

ಚುನಾವಣೆ ಮುಂದೂಡುವ ಯಾವ ಉದ್ದೇಶವೂ ಸರ್ಕಾರಕ್ಕಿಲ್ಲ. ಬೆಂಗಳೂರು ವಿಸ್ತಾರವಾಗಿ ಬೆಳೆದಿದ್ದು, ವಾರ್ಡ್‌ಗಳ ಸಂಖ್ಯೆ ಹೆಚ್ಚಳ ಮಾಡುವ ಅಗತ್ಯವಿದೆ. ಅದಕ್ಕಾಗಿ ಜಂಟಿ ಸದನ ಸಮಿತಿಯ ಶಿಫಾರಸ್ಸಿನಂತೆ ಪ್ರತ್ಯೇಕ ಕಾಯ್ದೆ ಜಾರಿಗೊಳಿಸಲಾರುವ ಕಾರಣ ಸದ್ಯ ಚುನಾವಣೆ ನಡೆಸಲು ಸಾಧ್ಯವಾಗುತ್ತಿಲ್ಲ ಎಂದು ಸರ್ಕಾರ ವಾದ ಮಂಡಿಸಿತ್ತು.

ಸರ್ಕಾರದ ವಾದ ಒಪ್ಪದ ಪೀಠ, ವಾರ್ಡ್‌ಗಳ ಸಂಖ್ಯೆ ಹೆಚ್ಚಳ ಮಾಡಲು ಕಾಯ್ದೆ ಜಾರಿಗೊಳಿಸಲಾಗಿದೆ ಎಂಬ ಕಾರಣಕ್ಕೆ ಪಾಲಿಕೆ ಚುನಾವಣೆ ಮುಂದೂಡಬೇಕೆಂಬ ಸರ್ಕಾರದ ವಾದ ಒಪ್ಪಿದರೆ ಸಾಂವಿಧಾನಿಕ ನಿಯಮಗಳ ಉಲ್ಲಂಘನೆಯಾಗಲಿದೆ ಎಂದು ಮೌಖಿಕ ಅಭಿಪ್ರಾಯ ವ್ಯಕ್ತಪಡಿಸಿತ್ತು.


ವಿಜಯವಾಣಿ
ದಿಗ್ವಿಜಯ 24X7 NEWS
ಇವರ ಸಹಯೋಗದೊಂದಿಗೆ
kannada matrimony
ಕನ್ನಡಿಗರ ನಂ.1 ವಧು ವರರ ಅನ್ವೇಷಣಾ ಸೇವೆಗಾಗಿ
ಉಚಿತ ನೋಂದಣಿಗಾಗಿ ಕರೆ ಮಾಡಿ: 70928 77888
ಲಕ್ಷಾನು ಲಕ್ಷ ಕನ್ನಡ ವಧು-ವರರು

ವಿಜಯವಾಣಿ
ಕನ್ನಡಿಗರ ಧ್ವನಿ

| Date | 04-12-2020 |
| --- | --- |
| Page No | 3 |

# 52 ಸಾವಿರ ಮನೆಗಳಲ್ಲಿದೆ ಅನಧಿಕೃತ ನೀರಿನ ಸಂಪರ್ಕ

**ಬೆಂಗಳೂರು:** ನಗರದಲ್ಲಿ 52 ಸಾವಿರಕ್ಕೂ ಅಧಿಕ ಮನೆಗಳು ಅನಧಿಕೃತವಾಗಿ ನೀರಿನ ಸಂಪರ್ಕ ಹೊಂದಿವೆ ಎಂದು ಜಲಮಂಡಳಿ ಸಮೀಕ್ಷೆಯಿಂದ ತಿಳಿದುಬಂದಿದೆ. ಈ ಅನಧಿಕೃತ ನೀರು ಬಳಕೆದಾರರಿಗೆ ಅಧಿಕೃತ ಸಂಪರ್ಕ ಮಾಡಿಕೊಳ್ಳುವಂತೆ ಅವಕಾಶ ನೀಡಿದ್ದು, ಅದನ್ನು ಪಾಲಿಸದಿದ್ದಲ್ಲಿ ದುಬಾರಿ ದಂಡ ಅಥವಾ ಶಿಕ್ಷೆಗೆ ಒಳಗಾಗಬೇಕಾಗುತ್ತದೆ.

ಸಿಲಿಕಾನ್ ಸಿಟಿಯಲ್ಲಿ ವಸತಿ, ಉದ್ಯಮ, ಕೈಗಾರಿಕೆ ಸೇರಿ 52,300ಕ್ಕೂ ಅಧಿಕ ಕಟ್ಟಡಗಳಿಗೆ ಅನಧಿಕೃತವಾಗಿ ನೀರಿನ ಸಂಪರ್ಕ ಪಡೆಯಲಾಗಿದೆ. ಇಂತಹ ಪ್ರಕರಣಗಳು ನಗರದ ಹೊರವಲಯದಲ್ಲಿಯೇ ಹೆಚ್ಚಾಗಿವೆ ಎಂದು ಜಲಮಂಡಳಿ ಅಧಿಕಾರಿ ಮಾಹಿತಿ ನೀಡಿದ್ದಾರೆ.

**» ಅಧಿಕೃತ ಸಂಪರ್ಕಕ್ಕೆ 31ರವರೆಗೆ ಅವಕಾಶ**

ಅನಧಿಕೃತ ಸಂಪರ್ಕದಿಂದ ನೀರು ಮತ್ತು ಚರಂಡಿ ಬಳಕೆ ಮಾಡುತ್ತಿರುವ ಸಾರ್ವಜನಿಕರಿಗೆ ದಂಡ ಶುಲ್ಕವಿಲ್ಲದೆ ಅಧಿಕೃತ ಸಂಪರ್ಕ ಪಡೆಯಲು ಡಿ.31ರವರೆಗೆ ಅವಕಾಶ ನೀಡಲಾಗಿದೆ. ನಿಯಮ ಪಾಲಿಸದಿದ್ದಲ್ಲಿ ಅಂತಹ ಕಟ್ಟಡಗಳಿಗೆ ಜಲಮಂಡಳಿ ಶಾಶ್ವತವಾಗಿ ನೀರಿನ ಸಂಪರ್ಕ ಕಡಿತ ಮಾಡಲಿದೆ. ಹಲವು ತಿಂಗಳಿಂದ ನೀರು ಬಿಲ್ ಬಾಕಿ ಉಳಿಸಿಕೊಂಡಲ್ಲಿ ಅವರ ವಿರುದ್ಧ ಬಿಎಂಟಿಎಫ್ ಪೊಲೀಸರಿಗೆ ದೂರು ನೀಡಲಾಗುತ್ತದೆ.

## ಎರಡು ಬಾರಿ ನೋಟಿಸ್

**ಜಲಮಂಡಳಿ ವತಿಯಿಂದ 15ಕ್ಕೂ ಹೆಚ್ಚು ತಂಡಗಳನ್ನು ರಚಿಸಿಕೊಂಡು ಬಾಕಿ ಪಾವತಿ ಮತ್ತು ಅಧಿಕೃತ ಸಂಪರ್ಕ ಪಡೆಯುವಂತೆ ಜಾಗೃತಿ ಮೂಡಿಸಲಾಗುತ್ತಿದೆ. ಅವಧಿ ಮೀರಿ ಅನಧಿಕೃತ ನೀರು ಬಳಕೆ ಮಾಡುವವರಿಗೆ ಎರಡು ಬಾರಿ ನೋಟಿಸ್ ನೀಡಿ ನಂತರ ಪೊಲೀಸರಿಗೆ ದೂರು ನೀಡಲಾಗುವುದು ಎಂದು ಜಲಮಂಡಳಿಯ ಮುಖ್ಯ ಇಂಜಿನಿಯರ್ ಸೋಮಶೇಖರ್ 'ವಿಜಯವಾಣಿ'ಗೆ ತಿಳಿಸಿದ್ದಾರೆ.**

ವಿಜಯವಾಣಿ
ಕನ್ನಡಿಗರ ಧ್ವನಿ

| Date | 04-12-2020 |
| --- | --- |
| Page No | 10 |

# ನಗರದಲ್ಲಿ ಗುರುವಾರ 758 ಕರೊನಾ ಹೊಸ ಸೋಂಕಿತರು

**ಬೆಂಗಳೂರು:** ರಾಜಧಾನಿಯಲ್ಲಿ ಗುರುವಾರ 758 ಹೊಸ ಸೋಂಕಿತರು ಪತ್ತೆಯಾಗುವ ಮೂಲಕ ಒಟ್ಟು ಪ್ರಕರಣಗಳ ಸಂಖ್ಯೆ 3,71,962ಕ್ಕೆ ಏರಿಕೆಯಾಗಿದೆ. ಮತ್ತೊಂದೆಡೆ, ಗುಣಮುಖರ ಸಂಖ್ಯೆ ಇಳಿಮುಖವಾಗಿದ್ದು, 208 ಮಂದಿ ಸೋಂಕುಮುಕ್ತರಾಗಿದ್ದಾರೆ. ಒಟ್ಟು 3,48,861 ಮಂದಿ ಬಿಡುಗಡೆಯಾಗಿದ್ದಾರೆ. ಕೋವಿಡ್ ಆಸ್ಪತ್ರೆ, ಆರೈಕೆ ಕೇಂದ್ರಗಳು ಮತ್ತು ಮನೆ ನಿಗಾದಲ್ಲಿ 18,938 ಮಂದಿಯಿದ್ದಾರೆ. ಅದರಲ್ಲಿ 163 ಮಂದಿ ಐಸಿಯುನಲ್ಲಿದ್ದಾರೆ. ಜತೆಗೆ, ಗುರುವಾರ ಕೋವಿಡ್‌ಗೆ 6 ಮಂದಿ ಬಲಿಯಾಗಿದ್ದು, ಒಟ್ಟು ಮೃತರ ಸಂಖ್ಯೆ 4,162 ಕ್ಕೆ ತಲುಪಿದೆ.

| Date | 04-12-2020 |
| --- | --- |
| Page No | |

ಉದಯವಾಣಿ
ಜನಮನದ ಜೀವನಾಡಿ

| Date | 04-12-2020 |
| --- | --- |
| Page No | 2 |

# ಪಾಲಿಕೆ ಚುನಾವಣೆ: ಇಂದು ತೀರ್ಪು

**ಬೆಂಗಳೂರು:** ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಚುನಾವಣೆ ಭವಿಷ್ಯ ಶುಕ್ರವಾರ (ಡಿ.4) ನಿರ್ಧಾರವಾಗಲಿದೆ. ಬಿಬಿಎಂಪಿಗೆ ಶೀಘ್ರ ಚುನಾವಣೆ ನಡೆಸುವಂತೆ ಕೋರಿ ಸಲ್ಲಿಸಲಾಗಿದ್ದ ಅರ್ಜಿಗಳ ಕುರಿತ ಮಹತ್ವದ ತೀರ್ಪನ್ನು ಹೈಕೋರ್ಟ್ ಪ್ರಕಟಿಸಲಿದೆ.

ಅರ್ಜಿಗೆ ಸಂಬಂಧಿಸಿದಂತೆ ವಾದ-ಪ್ರತಿವಾದ ಆಲಿಸಿದ ಬಳಿಕ ತೀರ್ಪು ಕಾಯ್ದಿರಿಸಿದ್ದ ಮುಖ್ಯ ನ್ಯಾ. ಎ.ಎಸ್. ಓಕ್ ನೇತೃತ್ವದ ವಿಭಾಗೀಯ ಪೀಠ ಮಧ್ಯಾಹ್ನ 2.30ಕ್ಕೆ ತೀರ್ಪು ಪ್ರಕಟಿಸಲಿದೆ.



ವಾರ್ಡ್‌ಗಳ ಸಂಖ್ಯೆ ಹೆಚ್ಚಿಸಿ ಕಾಯ್ದೆ ತಂದಿರುವುದರಿಂದ ಸದ್ಯ ಚುನಾವಣೆ ಸಾಧ್ಯವಿಲ್ಲ ಎಂದು ಸರ್ಕಾರ ಹೇಳಿದ್ದರೆ, ಹಿಂದಿನ 198 ವಾರ್ಡ್‌ಗಳ ಪ್ರಕಾರವೇ ಚುನಾವಣೆ ನಡೆಸುವಂತೆ ಸರ್ಕಾರ ಮತ್ತು ಆಯೋಗಕ್ಕೆ ನಿರ್ದೇಶನ ನೀಡಬೇಕು ಎಂದು ಅರ್ಜಿದಾರರು ಮನವಿ ಮಾಡಿದ್ದರು. ಚುನಾವಣೆಗೆ ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿದೆ ಎಂದು ಚುನಾವಣಾ ಆಯೋಗ ಹೈಕೋರ್ಟ್‌ಗೆ ಹೇಳಿತ್ತು.

2020 ನ.10ಕ್ಕೆ ಪಾಲಿಕೆ ಅವಧಿ ಮುಗಿದ ಹಿನ್ನೆಲೆಯಲ್ಲಿ ಶೀಘ್ರವಾಗಿ ಚುನಾವಣೆ ನಡೆಸುವಂತೆ ಸರ್ಕಾರಕ್ಕೆ ನಿರ್ದೇಶನ ನೀಡಲು ಕೋರಿ ಮಾಜಿ ಪಾಲಿಕೆ ಸದಸ್ಯ ಶಿವರಾಜು ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು. ಚುನಾವಣಾ ಆಯೋಗ ಸಹ ಹೈಕೋರ್ಟ್ ಮೊರೆ ಹೋಗಿತ್ತು. ಈ ಮಧ್ಯೆ ಪಾಲಿಕೆಗೆ ಆಡಳಿತಾಧಿಕಾರಿಯನ್ನು ನೇಮಕ ಮಾಡಲಾಯಿತು. ಇದನ್ನೂ ಸಹ ಹೈಕೋರ್ಟ್‌ನಲ್ಲಿ ಪ್ರಶ್ನಿಸಲಾಯಿತು. ಈ ಮಧ್ಯೆ ಪಾಲಿಕೆ ವಾರ್ಡ್‌ಗಳ ಸಂಖ್ಯೆಯನ್ನು ಹೆಚ್ಚಿಸಿ ಸರ್ಕಾರ ಕಾಯ್ದೆ ಜಾರಿಗೆ ತಂದಿತು. ಇದಕ್ಕೆ ಆಯೋಗ ಮತ್ತು ಅರ್ಜಿದಾರರು ಆಕ್ಷೇಪಿಸಿದರು. ಇದು ಚುನಾವಣೆಯನ್ನು ದೀರ್ಘಾವಧಿಗೆ ಮುಂದೂಡುವ ಪ್ರಯತ್ನ ಎಂದು ಹೈಕೋರ್ಟ್ ಹೇಳಿತ್ತು. ಈಗಿನ 198 ವಾರ್ಡ್‌ಗಳಿಗೆ ಅನುಗುಣವಾಗಿ ಮತದಾರರ ಪಟ್ಟಿ ಹಾಗೂ ಮೀಸಲಾತಿ ಪಟ್ಟಿ ಸಿದ್ಧಪಡಿಸಲಾಗಿದೆ ಎಂದು ಆಯೋಗ ವಾದಿಸಿತ್ತು.

ಉದಯವಾಣಿ
ಜನಮನದ ಜೀವನಾಡಿ

| Date | 04-12-2020 |
|---|---|
| Page No | 2 |



ಉದಯವಾಣಿ
ಜನಮನದ ಜೀವನಾಡಿ

| Date | 04-12-2020 |
|---|---|
| Page No | 5 |

# ಮಾಸ್ಕ್: ಐದೂವರೆ ಕೋಟಿ ದಂಡ ಸಂಗ್ರಹ

## ದಂಡ ಮೊತ್ತ ಮಾರ್ಷಲ್‌ಗಳ 6 ತಿಂಗಳ ವೇತನಕ್ಕೆ ಸಮ ■ 2.47 ಲಕ್ಷ ಪ್ರಕರಣಗಳು ದಾಖಲು

• ಜಯಪ್ರಕಾಶ್ ಬಿರಾದಾರ್

**ಬೆಂಗಳೂರು:** ರಾಜಧಾನಿಯಲ್ಲಿ ಕಡ್ಡಾಯ ಮಾಸ್ಕ್ ಮತ್ತು ಸಾಮಾಜಿಕ ಅಂತರ ಉಲ್ಲಂಘಿಸಿದವರಿಂದ ಈವರೆಗೂ ಬರೋಬ್ಬರಿ ಐದೂವರೆ ಕೋಟಿ ರೂ.ದಂಡ ಸಂಗ್ರಹವಾಗಿದೆ. ಇದು ದಂಡ ವಸೂಲಿ ಮಾಡುತ್ತಿರುವವರನ್ನು ಸೇರಿದಂತೆ ಬಿಬಿಎಂಪಿ ಎಲ್ಲಾ ಮಾರ್ಷಲ್‌ಗಳ ಆರು ತಿಂಗಳ ವೇತನಕ್ಕೆ ಸಮವಾಗಿದೆ.

ಲಾಕ್‌ಡೌನ್ ತೆರವಾದ ಬಳಿಕ ಕೊರೊನಾ ಸೋಂಕು ಹರಡದಂತೆ ನಿಯಂತ್ರಿಸುವ ನಿಟ್ಟಿನಲ್ಲಿ ಸಾರ್ವಜನಿಕ ಸ್ಥಳಗಳಲ್ಲಿ ಕಡ್ಡಾಯ ಮಾಸ್ಕ್ ಧರಿಸಬೇಕು ಮತ್ತು ಸಾಮಾಜಿಕ ಅಂತರ ಕಾಪಾಡಿಕೊಳ್ಳಬೇಕು ಎಂಬ ನಿಯಮವನ್ನು ರಾಜ್ಯ ಸರ್ಕಾರ ಜಾರಿಗೆ ತಂದಿತ್ತು. ಈ ನಿಯಮ ಉಲ್ಲಂಘಿಸಿದವರ ವಿರುದ್ಧ ಪ್ರಕರಣ ದಾಖಲಿಸಿ 250 ರೂ. ದಂಡ ವಿಧಿಸುವಂತೆ ಜೂನ್‌ನಿಂದ ಸೂಚನೆ ನೀಡಿತ್ತು. ನಗರದಲ್ಲಿ ಜೂ. 9 ರಂದು ಮಾಸ್ಕ್ ಧರಿಸದ ವ್ಯಕ್ತಿಗೆ ಮೊದಲ ಬಾರಿ ದಂಡ ವಿಧಿಸಲಾಯಿತು. ಆ ನಂತರ ಜೂ. 18 ರಿಂದ ಸಾಮಾಜಿಕ ಅಂತರ ಕಾಪಾಡಿಕೊಳ್ಳದೆ ಗುಂಪು ಸೇರುವವರ ವಿರುದ್ಧ ದಂಡ ಹಾಕಲಾಯಿತು. ಇಲ್ಲಿಯವರೆಗೂ ಒಟ್ಟಾರೆ 2.47 ಲಕ್ಷ ಪ್ರಕರಣಗಳು ದಾಖಲಾಗಿದ್ದು, 5.67 ಕೋಟಿ ರೂ. ದಂಡ ವಿಧಿಸಲಾಗಿದೆ. ಈ ಪೈಕಿ ಮಾಸ್ಕ್ ಧರಿಸದವರ ವಿರುದ್ಧ 2.2 ಲಕ್ಷ ಪ್ರಕರಣಗಳು ದಾಖಲಾಗಿದ್ದು, 5.14 ಕೋಟಿ ರೂ.ದಂಡ, ಸಾಮಾಜಿಕ ಅಂತರ ಕಾಪಾಡಿಕೊಳ್ಳದವರ ವಿರುದ್ಧ 24,011 ಪ್ರಕರಣಗಳನ್ನು ದಾಖಲಾಗಿದ್ದು 53 ಲಕ್ಷ ರೂ. ದಂಡ ವಸೂಲಿ ಮಾಡಲಾಗಿದೆ.

**ಮಾರ್ಷಲ್‌ಗಳ ಆರು ತಿಂಗಳ ವೇತನಕ್ಕೆ ಸಮ:** ಬಿಬಿಎಂಪಿ ವ್ಯಾಪ್ತಿಯಲ್ಲಿ ನಿಯಮ ಉಲ್ಲಂಘಿಸುವವರನ್ನು ಪತ್ತೆ ಹಚ್ಚಿ ಅವರ ವಿರುದ್ಧ ಪ್ರಕರಣ ದಾಖಲಿಸಿ ಕಾರ್ಯವನ್ನು ಮಾರ್ಷಲ್‌ಗಳು ಮಾಡುತ್ತಿದ್ದಾರೆ. ಒಟ್ಟು 235 ಮಾರ್ಷಲ್‌ಗಳು, 18 ಮೇಲ್ವಿಚಾರಕರರು ಕಾರ್ಯಾಚರಣೆಯಲ್ಲಿದ್ದಾರೆ. ಇವರ ವೇತನ ಸೇರಿದಂತೆ ಮಾಸಿಕ ವೆಚ್ಚ ಅಂದಾಜು 55 ಲಕ್ಷ ರೂ. ಇದೆ. ಈವವರೆಗೂ ನಿಯಮೋಲ್ಲಂಘನೆ ಮಾಡಿದವರಿಂದ ಸಂಗ್ರಹಿಸಿದ ದಂಡ ಮೊತ್ತವು ಮಾರ್ಷಲ್‌ಗಳ ಆರು ತಿಂಗಳ ವೇತನಕ್ಕೆ ಸಮವಾಗಲಿದೆ.

**ಕೇಂದ್ರ ಭಾಗದಲ್ಲಿಯೇ ಹೆಚ್ಚು :** ನಿಯಮೋಲ್ಲಂಘನೆ ಪ್ರಕರಣಗಳು ಜನದಟ್ಟಣೆ ಇರುವ ನಗರದ ಕೇಂದ್ರ ಭಾಗದಲ್ಲಿಯೇ ಹೆಚ್ಚು ವರದಿಯಾಗುತ್ತಿವೆ. ನಗರದ ಹೊರ ಭಾಗಗಳಾದ ಯಲಹಂಕ, ದಾಸರಹಳ್ಳಿ, ಮಹಾದೇವಪುರ, ಬೊಮ್ಮನಹಳ್ಳಿ ವಲಯದಲ್ಲಿ ನಿತ್ಯ ನೂರರ ಆಸುಪಾಸಿನಲ್ಲಿ, ಕೇಂದ್ರ ಭಾಗಗದ ವಲಯಗಳಾದ ಪೂರ್ವ, ಪಶ್ಚಿಮ, ದಕ್ಷಿಣ ವಲಯದಲ್ಲಿ 400 ಆಸುಪಾಸಿನಲ್ಲಿ ಪ್ರಕರಣಗಳು ದಾಖಲಾಖಲಾಗುತ್ತಿವೆ.



### ನಿಯಮೋಲ್ಲಂಘನೆ ದಂಡ ಸಂಗ್ರಹ

ರೂ.ಗಳಲ್ಲಿ (ಜೂ.9 - ಡಿ.3)

| | ನಿಯಮೋಲ್ಲಂಘನೆ | ದಂಡ ಸಂಗ್ರಹ |
|---|---|---|
| ಮಾಸ್ಕ್ | 2,23,827 | 5,14,35,569 |
| ಸಾಮಾಜಿಕ ಅಂತರ | 24,011 | 53,63,166 |
| ಒಟ್ಟು | 2,47,839 | 5,67,98,735 |

### ಪ್ರಕರಣ ದಾಖಲು ಕಷ್ಟ

ಒಟ್ಟಾರೆ ನಿಯಮೋಲ್ಲಂಘನೆ ಪ್ರಕರಣಗಳಲ್ಲಿ ಮಾಸ್ಕ್‌ನದ್ದು ಶೇ.90 ರಷ್ಟಿದ್ದು, ಸಾಮಾಜಿಕ ಅಂತರ ಪ್ರಕರಣಗಳು ಶೇ.10 ರಷ್ಟಿವೆ. ಮಾರ್ಷಲ್ ಕೊರತೆಯೆ ಇದಕ್ಕೆ ಕಾರಣ ಎಂಬ ಅಭಿಪ್ರಾಯ ಕೇಳಿ ಬಂದಿದೆ. ಸದ್ಯ 198 ವಾರ್ಡ್‌ಗೆ 235 ಮಾರ್ಷಲ್‌ಗಳು ಮಾತ್ರ ಇದ್ದಾರೆ. ಒಬ್ಬ ಮಾರ್ಷಲ್ ಇಡೀ ವಾರ್ಡ್‌ನ ಸುತ್ತಾಟಕ್ಕೆ ಸಾಧ್ಯವಾಗುತ್ತಿಲ್ಲ, 'ಸಾಮಾಜಿಕ ಅಂತರ ಉಲ್ಲಂಘಟನೆ ಪ್ರಕರಣಗಳಲ್ಲಿ ನಾಲ್ಕೈದು ಮಂದಿ ಇರುತ್ತಾರೆ. ಅವರೆಲ್ಲರಿಗೂ ಒಬ್ಬರು ನಿಯಮ ಹೇಳಿ ದಂಡ ವಸೂಲಿ ಮಾಡಲು ಕಷ್ಟವಾಗುತ್ತಿದೆ' ಎಂದು ನಗರ ಕೇಂದ್ರ ಭಾಗದ ಮಾರ್ಷಲ್ ಒಬ್ಬರು ತಿಳಿಸಿದರು.

### ಏನು ಮಾಡ್ತಾರೆ?

ಮಾರ್ಷಲ್‌ಗಳು ನಿತ್ಯ ಸಂಗ್ರಹಿಸುವ ದಂಡದ ಮೊತ್ತವನ್ನು ಮರು ದಿನ ಬ್ಯಾಂಕ್‌ಗೆ ತೆರಳಿ ಬಿಬಿಎಂಪಿ ಖಾತೆಗೆ ಜಮೆ ಮಾಡುತ್ತಾರೆ.

### ಪೊಲೀಸ್ ಸಹಕಾರ ಸಿಗುತ್ತಿಲ್ಲ!

ಮಾರ್ಷಲ್‌ಗಳು ಪ್ರಕರಣ ದಾಖಲಿಸಿ ದಂಡ ವಸೂಲಿ ಸಂದರ್ಭದಲ್ಲಿ ಪೊಲೀಸ್ ಸಿಬ್ಬಂದಿ ಸಹಕಾರ ಪಡೆದುಕೊಳ್ಳಿ ಎಂದು ಬಿಬಿಎಂಪಿ ತಿಳಿಸಿದೆ. ಆದರೆ, ಕಳೆದ ಒಂದು ತಿಂಗಳಿಂದ ಪೊಲೀಸ್ ಇಲಾಖೆಯು ತನ್ನ ಮಾಸ್ಕ್ ಮತ್ತು ಸಾಮಾಜಿಕ ಅಂತರ ಉಲ್ಲಂಘನೆ ದಂಡ ವಸೂಲಿಗೆ ಸೂಚಿಸಿದೆ. ಈ ಹಿನ್ನೆಲೆ ಮಾರ್ಷಲ್‌ಗಳಿಗೆ ಸ್ಥಳೀಯ ಪೊಲೀಸ್ ಸಿಬ್ಬಂದಿ ನೆರವು ನೀಡುತ್ತಿಲ್ಲ ಎಂದು ಮಾರ್ಷಲ್‌ಗಳು ಬೇಸರವ್ಯಕ್ತ ಪಡಿಸಿದ್ದಾರೆ.

ಉದಯವಾಣಿ
ಜನಮನದ ಜೀವನಾಡಿ

| Date | 04-12-2020 |
| --- | --- |
| Page No | 5 |

# ಮುಂದುವರಿದ ಚಳಿ ವಾತಾವರಣ

## ರಾಜಧಾನಿಯಲ್ಲಿ ಚಂಡಮಾರುತ ಪ್ರಭಾವ | ಚಳಿ ಜತೆ ಮಳೆ: ಆರೋಗ್ಯ ಕಾಳಜಿ ಅಗತ್ಯ





### ಮುಂಜಾಗ್ರತಾ ಕ್ರಮಗಳು

- ಮಳೆ - ಚಳಿಗೆ ಮೈಯೊಡ್ಡದೆ ಸಾಧ್ಯವಾದಷ್ಟು ಮನೆಯಲ್ಲಿಯೇ ಇರಬೇಕು.
- ಹೆಚ್ಚು ಬಿಸಿ ನೀರು, ಬಿಸಿ ಆಹಾರ ಬಳಕೆ ಮಾಡಬೇಕು.
- ಪ್ರವಾಸ, ದೂರದೂರುಗಳಿಗೆ ಪ್ರಯಾಣ ಮಾಡಬಾರದು.
- ಮುಂಜಾನೆ ವಾಯುವಿಹಾರಕ್ಕೆ ಉದ್ಯಾನ, ರಸ್ತೆಗಳಿಗೆ ತೆರಳದೆ ಮನೆಯಲ್ಲಿಯೇ ಲಘು ವ್ಯಾಯಾಮ ಮಾಡಬೇಕು.
- ಜ್ವರ, ಶೀತ, ಕೆಮ್ಮು ಬಂದರೆ ನಿರ್ಲಕ್ಷ್ಯ ಮಾಡದೆ ವೈದ್ಯರ ಬಳಿ ಚಿಕಿತ್ಸೆ ಪಡೆಯಬೇಕು.

**ಬೆಂಗಳೂರು:** ನಿವಾರ್ ಚಂಡಮಾರುತ ಪ್ರಭಾವ ರಾಜಧಾನಿಯಲ್ಲಿ ಮುಂದುವರಿದಿದ್ದು ಗುರುವಾರ ಕೆಲವೆಡೆ ಜಿಟಿಜಿಟಿ ಮಳೆ ಸೇರಿದಂತೆ ದಿನ ಪೂರ್ತಿ ಮೋಡ ಮುಚ್ಚಿದ ವಾತಾವರಣ ಕಂಡುಬಂದಿತು.

ಸಾಮಾನ್ಯ ದಿನಗಳಲ್ಲಿ 26 ಡಿಗ್ರಿ ಸೆಲ್ಸಿಯಸ್‌ನಷ್ಟು ಇರುತ್ತಿದ್ದ ಗರಿಷ್ಠ ಉಷ್ಣಾಂಶ ಗುರುವಾರ 22 ಡಿಗ್ರಿ ಸೆಲ್ಸಿಯಸ್‌ಗೆ ಇಳಿಕೆಯಾಗಿತ್ತು. ಕನಿಷ್ಠ ಉಷ್ಣಾಂಶ 18 ಡಿಗ್ರಿ ಸೆಲ್ಸಿಯಸ್‌ನಷ್ಟಿತ್ತು. ಚಳಿಯ ಹಿನ್ನೆಲೆ ಬೆಳಗ್ಗೆ ಉದ್ಯಾನ ಮತ್ತು ರಸ್ತೆಗಳಲ್ಲಿ ವಾಯು ವಿಹಾರಿಗಳ ಸಂಖ್ಯೆಯೂ ಕಡಿಮೆ ಇತ್ತು. ಆಗಾಗ ತುಂತುರು ಮಳೆಯಿಂದಾಗಿ ವಾಹನ ಸವಾರರಿಗೆ ಕಿರಿಕಿರಿ ಉಂಟಾಯಿತು. ಇನ್ನು ಶುಕ್ರವಾರ, ಶನಿವಾರ ಮತ್ತು ಭಾನುವಾರ ತುಂತುರು ಮಳೆಯಾಗಲಿದ್ದು, ಬೆಳಗ್ಗೆ ಹೆಚ್ಚಿನ ಸಮಯ ಇಬ್ಬನಿ ಬೀಳಲಿದೆ ಎಂದು ಹವಾಮಾನ ಇಲಾಖೆ ಹೇಳಿದೆ.

'ಚಂಡಮಾರುತದ ಪ್ರಭಾವದಿಂದ ನಗರದಲ್ಲಿ ಈ ರೀತಿಯ ವಾತಾವರಣ ಇದೆ. ಎರಡು-ಮೂರು ದಿನ ಇದು ಮುಂದುವರಿಯಲಿದೆ. ರಾಜ್ಯದ ದಕ್ಷಿಣ ಒಳನಾಡಿನಲ್ಲಿ ಮಳೆಯಾಗುವ ಸಾಧ್ಯತೆ ಇದೆ' ಎಂದು ಹವಾಮಾನ ಇಲಾಖೆಯ ನಿರ್ದೇಶಕ ಸಿ.ಎಸ್. ಪಾಟೀಲ ತಿಳಿಸಿದ್ದಾರೆ.

**ಆರೋಗ್ಯ ಕಾಳಜಿ ಮುಖ್ಯ:** ಎಚ್ಚರ ತಪ್ಪಿದರೆ ಅನಾರೋಗ್ಯ ನಗರದಲ್ಲಿ ಚಳಿ ಮತ್ತು ಮಳೆ ಒಟ್ಟಿಗೆ ಸೇರಿ ಮಿಶ್ರ ವಾತಾವರಣ ಇರುವುದರಿಂದ ಆರೋಗ್ಯ ಸಮಸ್ಯೆಗಳು ಹೆಚ್ಚಳವಾಗುವ ಸಾಧ್ಯತೆಗಳಿವೆ. ಜನ ಸ್ವಲ್ಪ ಎಚ್ಚರ ತಪ್ಪಿದರೂ ಅನಾರೋಗ್ಯಕ್ಕೀಡಾಗುತ್ತಾರೆ ಎಂದು ತಜ್ಞವೈದ್ಯರು ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ತಿಂಗಳಿಂದ ಕೇವಲ ಚಳಿ ಇತ್ತು. ಚಂಡಮಾರುತ ಪರಿಣಾಮ ಕಳೆದ ಒಂದು ವಾರದಿಂದ ಮಳೆ ಕೂಡಾ ಜತೆಯಾಗುವ ಮೂಲಕ ಚಳಿ ಮಳೆಗಾಲ ಒಟ್ಟಾದಂತಿದೆ. ಹೀಗಾಗಿ, ಎರಡು ಕಾಲದ ರೋಗಗಳೂ ಕೂಡಾ ಉಲ್ಬಣವಾಗುವ ಸಾಧ್ಯತೆಗಳಿರುತ್ತವೆ. ಸಾಮಾನ್ಯ ದಿನಗಳಿಗಿಂತ ಉಷ್ಣಾಂಶ ಕಡಿಮೆ ಇರುವುದರಿಂದ ನಿಮೋನಿಯಾ (ಶ್ವಾಸಕೋಶ ಸೋಂಕು) ಶೀತ ಜ್ವರ, ಮಳೆಯಿಂದಾಗಿ ವೈರಲ್ ಜ್ವರ, ಕೆಮ್ಮು ಹೆಚ್ಚಳವಾಗುವ ಸಾಧ್ಯತೆಗಳಿರುತ್ತವೆ. ಹತ್ತು ವರ್ಷದೊಳಗಿನ ಮಕ್ಕಳು, 60 ವರ್ಷ ಮೇಲ್ಪಟ್ಟ ವಯೋವೃದ್ಧರು ಮತ್ತು ದೀರ್ಘ ಕಾಲದ ರೋಗಗಳಿಂದ ಬಳಲುತ್ತಿರುವವರು ಸಾಮಾನ್ಯ ದಿನಗಳಿಗಿಂತ ಹೆಚ್ಚಿನ ಕಾಳಜಿ ವಹಿಸಬೇಕು ಎಂದು ಕೆ.ಸಿ.ಜನರಲ್ ಆಸ್ಪತ್ರೆ ಹಿರಿಯ ವೈದ್ಯ ಡಾ.ಮೋಹನ್ ತಿಳಿಸಿದ್ದಾರೆ.

**ಕೊರೊನಾ ಪರೀಕ್ಷೆ ಭಯ ಬೇಡ:** ಕೊರೊನಾ ಪರೀಕ್ಷೆ ಮಾಡುತ್ತಾರೆ ಎಂಬ ಭಯದಿಂದ ಜ್ವರ, ಕೆಮ್ಮು, ಶೀತದಿಂದ ಬಳಲುತ್ತಿರುವವರು ಆಸ್ಪತ್ರೆಗಳಿಗೆ ಬಾರದೇ ಮನೆ ಮದ್ದಿಗೆ ಮುಂದಾಗುತ್ತಿದ್ದಾರೆ. ವೈರಲ್ ಜ್ವರ, ನಿಮೋನಿಯಾ ಮತ್ತು ಕೊರೊನಾ ವೈರಸ್ ಸೋಂಕಿನ ಲಕ್ಷಣಗಳು ಒಂದೇ ಆಗಿವೆ. ವೈದ್ಯರು ಸಮಾಲೋಚನೆ ನಡೆಸಿ, ಪ್ರಾಥಮಿಕ ಸಂಪರ್ಕ ಮಾಹಿತಿ ಪಡೆದು ವೈರಲ್ ಜ್ವರ ಅಥವಾ ಕೊರೊನಾ ಸೋಂಕು ಪರೀಕ್ಷೆ ಅಗತ್ಯವಿದೆಯೋ ಎಂಬುದನ್ನು ನಿರ್ಧರಿಸುತ್ತಾರೆ. ಕೊರೊನಾ ತಗುಲಿರುವ ಸಾಧ್ಯತೆ ಇದ್ದರೆ ರ್ಯಾಪಿಡ್ ಪರೀಕ್ಷೆ ಮಾಡಲಾಗುತ್ತದೆ. ಒಂದು ವೇಳೆ ಕೊರೊನಾ ತಗುಲಿದ್ದರು ತಿಳಿಸುತ್ತದೆ. ಬೇಗ ಸೋಂಕಿನಿಂದ ವಾಸಿಯಾಗಬಹುದು, ಇತರಿಗೆ ಸೋಂಕು ಹರಡುವುದನ್ನು ತಪ್ಪಿಸಬಹುದು. ಹೀಗಾಗಿ, ಜನರು ಭಯ ಪಡದೆ ಆಸ್ಪತ್ರೆಗೆ ಬಂದು ಚಿಕಿತ್ಸೆಪಡೆಯಬೇಕೆಂದು ವೈದ್ಯರು ತಿಳಿಸಿದ್ದಾರೆ.

ಸಂಯುಕ್ತ ಕರ್ನಾಟಕ

| Date | 04-12-2020 |
|---|---|
| Page No | 2 |


# ಹಸಿ ಕಸ ಗೊಬ್ಬರವಾಗಿ ಪರಿವರ್ತನೆಗೆ ಆದ್ಯತೆ

**ಸಂ.ಕ ಸಮಾಚಾರ ಬೆಂಗಳೂರು**

ನಗರದಲ್ಲಿ ಉತ್ಪತ್ತಿಯಾಗುವ ಹಸಿ ತ್ಯಾಜ್ಯವನ್ನು ಸಾವಯವ ಗೊಬ್ಬರವಾಗಿ ಪರಿವರ್ತಿಸಿ ಕಡಿಮೆ ಬೆಲೆಗೆ ರೈತರಿಗೆ ಒದಗಿಸಲು ಕರ್ನಾಟಕ ಕಾಂಪೋಸ್ಟ್ ಅಭಿವೃದ್ಧಿ ನಿಗಮ ನಿರ್ಧರಿಸಿದೆ.

ಬಿಬಿಎಂಪಿ ಕಚೇರಿಯಲ್ಲಿ ಕರ್ನಾಟಕ ಕಾಂಪೋಸ್ಟ್ ಅಭಿವೃದ್ಧಿ ನಿಗಮದ ಅಧ್ಯಕ್ಷರಾಗಿ ಅಧಿಕಾರ ವಹಿಸಿಕೊಂಡ ಮಹಾದೇವಯ್ಯ, ಸುದ್ದಿಗಾರರಿಗೆ ವಿವರಿಸಿ, ನಗರದಲ್ಲಿ ಉತ್ಪತ್ತಿಯಾಗುವ ಕಸವನ್ನು ವಿಲೇವಾರಿ ಮಾಡುವುದು ಸಮಸ್ಯೆಯಾಗುತ್ತಿದೆ. ಆದರೆ, ಇದೇ ಕಸದಿಂದ ಗೊಬ್ಬರವನ್ನಾಗಿ ಸಂಸ್ಕರಿಸಿ ಅದನ್ನು ರೈತರಿಗೆ ಪೂರೈಸುವ ಮೂಲಕ ಕಸದಿಂದಲೂ ಆದಾಯ ಬರುವಂತೆ ಮಾಡಬೇಕಾಗಿದೆ. ಬಿಬಿಎಂಪಿ ವ್ಯಾಪ್ತಿಯಲ್ಲಿ ಕಸವನ್ನು ಗೊಬ್ಬರವನ್ನಾಗಿ ಸಂಸ್ಕರಿಸುವ ಎಂಟಕ್ಕೂ ಹೆಚ್ಚು ಘಟಕಗಳಿದ್ದು ಅವುಗಳ ಮೂಲಕ ಬೆಂಗಳೂರಿನ ಕಸ ಸಮಸ್ಯೆ ನಿವಾರಿಸಲಾಗುತ್ತದೆ ಎಂದರು.

ಒಂದು ಚೀಲ ಗೊಬ್ಬರ ತಯಾರಿಸಲು ಕನಿಷ್ಠ ಮೂರುವರೆ ಸಾವಿರ ರೂಪಾಯಿ ವೆಚ್ಚವಾಗುತ್ತದೆ. ಅದನ್ನು ನಾವು ರೈತರಿಗೆ ಕೇವಲ ಒಂದೂವರೆ ಸಾವಿರ ರೂಪಾಯಿಗೆ ವಿತರಿಸುತ್ತೇವೆ. ಈ ವ್ಯತ್ಯಾಸದ ಹಣವನ್ನು ಸರ್ಕಾರ ಸಬ್ಸಿಡಿ ರೂಪದಲ್ಲಿ ನೀಡುತ್ತಿದ್ದು, ಈ ಮೊತ್ತವನ್ನು ಇನ್ನೂ ಹೆಚ್ಚಿಸುವಂತೆ ಸರಕಾರಕ್ಕೆ ಮನವಿ ಮಾಡಲಾಗುವುದು ಎಂದು ವಿವರಿಸಿದರು.

ಸಂಯುಕ್ತ ಕರ್ನಾಟಕ

| Date | 04-12-2020 |
| --- | --- |
| Page No | 3 |


# ಇಂದು ಪಾಲಿಕೆ ಚುನಾವಣೆ ತೀರ್ಪು

**ಸಂ.ಕ.ಸಮಾಚಾರ ಬೆಂಗಳೂರು**

ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ ಚುನಾವಣೆ ನಡೆಸುವಂತೆ ಕೋರಿ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ಪೂರ್ಣಗೊಳಿಸಿ, ಕಾಯ್ದಿರಿಸಿರುವ ತೀರ್ಪನ್ನು ಹೈಕೋರ್ಟ್ ಶುಕ್ರವಾರ ಮಧ್ಯಾಹ್ನ ಪ್ರಕಟಿಸಲಿದೆ.

ಅವಧಿ ಮುಗಿದಿರುವ ಬಿಬಿಎಂಪಿಗೆ ಶೀಘ್ರವಾಗಿ ಚುನಾವಣೆ ನಡೆಸುವಂತೆ ಕೋರಿ ಕಾಂಗ್ರೆಸ್ ಪಾಲಿಕೆ ಮಾಜಿ ಸದಸ್ಯ ಎಂ. ಶಿವರಾಜು ಹೈಕೋರ್ಟ್‌ಗೆ ಸಾರ್ವಜನಿಕ ಹಿತಾಸಕ್ತಿ ಅರ್ಜಿ ಸಲ್ಲಿಸಿದ್ದರು. ಈ ಅರ್ಜಿ ವಿಚಾರಣೆ ನಡೆಸಿದ್ದ ಮುಖ್ಯ ನ್ಯಾಯಮೂರ್ತಿ ಎ.ಎಸ್.ಓಕಾ ನೇತೃತ್ವದ ವಿಭಾಗೀಯ ಪೀಠ, ನ.25ರಂದು ಪ್ರಕ್ರಿಯೆ ಪೂರ್ಣಗೊಳಿಸಿ, ತೀರ್ಪು ಕಾಯ್ದಿರಿಸಿರುವುದಾಗಿ ತಿಳಿಸಿತ್ತು.

ವಿಚಾರಣೆ ಸಂದರ್ಭದಲ್ಲಿ ಅರ್ಜಿ ಮಹತ್ವದಾಗಿರುವುದರಿಂದ ಆದಷ್ಟು ಬೇಗ ಇತ್ಯರ್ಥಪಡಿಸುವುದಾಗಿ ಮೌಖಿಕ ಅಭಿಪ್ರಾಯ ವ್ಯಕ್ತಪಡಿಸಿದ್ದ ಕೋರ್ಟ್, ಬಿಬಿಎಂಪಿ ವಾರ್ಡ್ ಹೆಚ್ಚಳ ಮಾಡಲು ಚುನಾವಣೆ ಮುಂದೂಡಲಾಗಿದೆ ಎಂಬ



ಸರ್ಕಾರದ ವಾದ ಸೂಕ್ತವಲ್ಲ ಎಂದಿತ್ತು. ಅಲ್ಲದೇ, ವಾರ್ಡ್ ಹೆಚ್ಚಿಸಲು ಜಾರಿಗೊಳಿಸಿರುವ ತಿದ್ದುಪಡಿ ಕಾಯ್ದೆಯನ್ನು ಬದಿಗಿಟ್ಟು ಈಗಿರುವ ವಾರ್ಡ್‌ಗಳಿಗೇ ಚುನಾವಣೆ ನಡೆಸಲು ಕ್ರಮ ಕೈಗೊಳ್ಳಬಹುದಲ್ಲವೇ ಎಂದು ಪೀಠ, ಸರ್ಕಾರವನ್ನು ಪ್ರಶ್ನಿಸಿತ್ತು. ಇದಕ್ಕೆ ಸಂಬಂಧಿಸಿದಂತೆ ಸರ್ಕಾರದ ಪರ ವಕೀಲರು ಕೂಡಾ ವಾದ ಮಂಡಿಸಿದ್ದರು. ಈ ಎಲ್ಲವನ್ನೂ ಆಲಿಸಿರುವ ಹೈಕೋರ್ಟ್ ಪೀಠ ತನ್ನ ತೀರ್ಪನ್ನು ಶುಕ್ರವಾರ ಮಧ್ಯಾಹ್ನ ಪ್ರಕಟಿಸಲಿದೆ.

ಸಂಯುಕ್ತ ಕರ್ನಾಟಕ

| Date | 04-12-2020 |
|---|---|
| Page No | 3 |

# ಕೊರೊನಾ ಎರಡನೇ ಅಲೆ ಇಂದು ಸಮಿತಿ ಸಭೆ

**ಬೆಂಗಳೂರು:** ರಾಜ್ಯದಲ್ಲಿ ಕೊರೊನಾ ಎರಡನೇ ಅಲೆ ಕಾಣಿಸಿಕೊಳ್ಳಲಿದೆ ಎಂಬ ವರದಿ ಕುರಿತಂತೆ ತಜ್ಞರು ಮತ್ತು ಅಧಿಕಾರಿಗಳ ಜತೆ ಡಿ.4ರಂದು ಸಭೆ ನಡೆಸಿ ನಿಯಂತ್ರಣಕ್ಕೆ ಕೈಗೊಳ್ಳಬೇಕಿರುವ ಕ್ರಮಗಳ ಬಗ್ಗೆ ನಿರ್ಧಾರ ಕೈಗೊಳ್ಳಲಾಗುವುದು ಎಂದು ಆರೋಗ್ಯ ಸಚಿವ ಡಾ.ಕೆ.ಸುಧಾಕರ್ ಹೇಳಿದ್ದಾರೆ.

ತಜ್ಞರು ನೀಡಿರುವ ವರದಿ ಇನ್ನೂ ಕೈಸೇರಿಲ್ಲ, ಅದು ಅಧಿಕಾರಿಗಳ ಮಟ್ಟದಲ್ಲಿದೆ. ಆ ವರದಿ ಮತ್ತು ಮುಂದೆ ಕೈಗೊಳ್ಳಬೇಕಿರುವ ಕ್ರಮಗಳ ಬಗ್ಗೆ ತಾಂತ್ರಿಕ ಸಮಿತಿ ತಜ್ಞರು ಮತ್ತು ಹಿರಿಯ ಅಧಿಕಾರಿಗಳ ಜತೆ ಶುಕ್ರವಾರ ಸಭೆ ನಡೆಸಲಾಗುವುದು. ಸಭೆ ತೀರ್ಮಾನಗಳ ಬಗ್ಗೆ ಮುಖ್ಯಮಂತ್ರಿ ಹಾಗೂ ಸಚಿವ ಸಹೋದ್ಯೋಗಿಗಳ ಜತೆ ಸಮಾಲೋಚಿಸಿ ಅಂತಿಮ ನಿರ್ಧಾರವನ್ನು ಪ್ರಕಟಿಸಲಾಗುವುದು ಎಂದು ತಿಳಿಸಿದರು. ಸುದ್ದಿಗಾರರ ಜೊತೆ ಮಾತನಾಡಿದ ಅವರು, ಕೊರೊನಾದ ಎರಡನೇ ಅಲೆ ಪರಿಣಾಮಕಾರಿಯಾಗಿರುತ್ತದೆ ಎಂದು ವೈಯಕ್ತಿಕವಾಗಿ ತಮಗೆ ಅನ್ನಿಸುತ್ತಿಲ್ಲ. ಆದರೂ ತಜ್ಞರು ನಡೆಸಿರುವ ಅಧ್ಯಯನ ವರದಿಯಲ್ಲಿ ಏನಿದೆ ಎಂಬುದನ್ನು ಪರಿಶೀಲಿಸಬೇಕಿದೆ. ಯಾವ ಮಟ್ಟದ ಪರಿಣಾಮ? ಯಾವ್ಯಾವ ಪ್ರದೇಶಗಳಲ್ಲಿ ಹೇಗಿರುತ್ತದೆ? ಯಾವ ಕ್ರಮಗಳನ್ನು ತೆಗೆದುಕೊಳ್ಳಬೇಕು? ಈ ಎಲ್ಲಾ ವಿಷಯಗಳನ್ನು ಕೂಲಂಕಷವಾಗಿ ಪರಿಶೀಲಿಸಿ ಎಚ್ಚರಿಕೆಯ ಹೆಜ್ಜೆ ಇರಿಸಲಾಗುವುದು ಎಂದರು.

ಹೊಸ ದಿಗಂತ

| Date | 04-12-2020 |
| --- | --- |
| Page No | 12 |

# 208 ಸೋಂಕಿತರು ಗುಣಮುಖ

**ಬೆಂಗಳೂರು:** ನಗರದಲ್ಲಿ 758 ಹೊಸದಾಗಿ ಕೋವಿಡ್ ಪ್ರಕರಣಗಳು ಪತ್ತೆಯಾಗಿದ್ದು 208 ಮಂದಿ ಆಸ್ಪತ್ರೆಯಿಂದ ಬಿಡುಗಡೆಯಾಗಿದ್ದಾರೆ.



ಈವರೆಗೆ ನಗರದಲ್ಲಿ 3,71,962 ಮಂದಿಗೆ ಕೊರೋನಾ ಸೋಂಕು ಪತ್ತೆಯಾಗಿದ್ದು 3,48,861 ಮಂದಿ ಗುಣಮುಖರಾಗಿದ್ದಾರೆ. ಸದ್ಯ 18,938 ಸಕ್ರಿಯ ಪ್ರಕರಣಗಳಿದ್ದು, ಗುರುವಾರ 6 ಮಂದಿ ಸಾವನಪ್ಪಿದ್ದಾರೆ. ಒಟ್ಟು 4162 ಮಂದಿಯನ್ನು ಕೊರೋನಾ ಬಲಿ ತೆಗೆದುಕೊಂಡಿದೆ. 163 ಮಂದಿ ತೀವ್ರ ನಿಗಾ ಘಟಕದಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾರೆ.

ಜನದನಿಯ ಸಾರಥಿ
ವಾರ್ತಾ ಭಾರತಿ

| Date | 04-12-2020 |
| --- | --- |
| Page No | 3 |

# ಬಿಬಿಎಂಪಿ ಚುನಾವಣೆ: ಹೈಕೋರ್ಟ್‌ನಲ್ಲಿ ಇಂದು ತೀರ್ಪು ಪ್ರಕಟ ಸಾಧ್ಯತೆ



ಬೆಂಗಳೂರು, ಡಿ.3: ಬಿಬಿಎಂಪಿ ಪಾಲಿಕೆಗೆ ಶೀಘ್ರ ಚುನಾವಣೆ ನಡೆಸಲು ನಿರ್ದೇಶಿಸುವಂತೆ ಕೋರಿ ಸಲ್ಲಿಸಿದ್ದ ಅರ್ಜಿಗಳ ವಿಚಾರಣೆ ಪೂರ್ಣಗೊಳಿಸಿ ಆದೇಶ ಕಾಯ್ದಿರಿಸಿರುವ ಹೈಕೋರ್ಟ್, ಶುಕ್ರವಾರ ತೀರ್ಪು ಪ್ರಕಟಿಸುವ ಸಾಧ್ಯತೆ ಇದೆ. ಹೀಗಾಗಿ, ಎಲ್ಲರ ಚಿತ್ತ ಕೋರ್ಟ್‌ನತ್ತ ನೆಟ್ಟಿದೆ.

ಪ್ರಸ್ತುತ ಇರುವ 198 ವಾರ್ಡ್‌ಗಳಿಗೆ ಚುನಾವಣೆ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಇದಕ್ಕಾಗಿ ಮತದಾರರ ಪಟ್ಟಿಯನ್ನು ಚುನಾವಣಾ ಆಯೋಗ ಸಿದ್ಧಪಡಿಸಿಕೊಂಡಿದೆ. ಸರಕಾರ ಕೂಡ ವಾರ್ಡ್ ಪುನರ್‌ವಿಂಗಡಣೆ ಮಾಡಿ ಮೀಸಲಾತಿ ಪಟ್ಟಿಯನ್ನು ಘೋಷಿಸಿದೆ.

ಹೀಗಾಗಿ ಚುನಾವಣೆ ನಡೆಸಲು ಅವಕಾಶ ನೀಡಬೇಕೆಂದು ಚುನಾವಣಾ ಆಯೋಗ ನ್ಯಾಯಾಲಯದ ಮುಂದೆ ಪ್ರಬಲ ವಾದ ಮಂಡಿಸಿದೆ. ಅಲ್ಲದೆ, ಸಕಾಲದಲ್ಲಿ ಚುನಾವಣೆ ನಡೆಸಲು ಸಿದ್ಧವಿರುವುದಾಗಿ ಆಯೋಗ ಸ್ಪಷ್ಟಪಡಿಸಿದೆ.

198 ವಾರ್ಡ್‌ಗಳಿಂದ ಬಿಬಿಎಂಪಿಯಲ್ಲಿ 243 ವಾರ್ಡ್‌ಗಳನ್ನು ಹೆಚ್ಚಿಸಲು ಮಸೂದೆ ಮಂಡಿಸಲಾಗಿದೆ. ಇದಕ್ಕೆ ಕಾಲಾವಕಾಶ ಬೇಕು. ಅಲ್ಲದೆ ಬೆಂಗಳೂರಿಗೆ ಪ್ರತ್ಯೇಕ ಕಾಯ್ದೆ ರಚನೆ ಮಾಡಬೇಕಾಗಿದೆ ಎಂದು ಸರಕಾರ ನ್ಯಾಯಾಲಯದ ಮುಂದೆ ಕಾಲಾವಕಾಶ ಕೇಳಿದೆ.

ಸರಕಾರ ಉದ್ದೇಶಪೂರ್ವಕವಾಗಿ ಚುನಾವಣೆ ಮುಂದೂಡುವ ಪ್ರಯತ್ನ ಮಾಡುತ್ತಿದೆ. ನಿಗದಿತ ಅವಧಿಯೊಳಗೆ ಚುನಾವಣೆ ನಡೆಸಬೇಕೆಂದು ಅರ್ಜಿದಾರರು ಆಕ್ಷೇಪ ವ್ಯಕ್ತಪಡಿಸಿದ್ದಾರೆ. ವಕೀಲರ ವಾದ ಆಲಿಸಿರುವ ನ್ಯಾಯಾಲಯ ಶುಕ್ರವಾರ ಮಧ್ಯಾಹ್ನ ತೀರ್ಪು ಪ್ರಕಟಿಸುವ ಸಾಧ್ಯತೆ ಇದೆ. ತೀರ್ಪು ಯಾರಿಗೆ ವರದಾನವಾಗಲಿದೆ, ಯಾರಿಗೆ ಸಂಕಷ್ಟ ತರಲಿದೆ ಎಂಬುದನ್ನು ಕಾದು ನೋಡಬೇಕಿದೆ.

ಈ ನಡುವೆ ಒಂದು ವೇಳೆ ಚುನಾವಣೆ ನಡೆಸುವಂತೆ ತೀರ್ಪು ನೀಡಿದರೆ ಆಯೋಗ ಸಿದ್ಧವಾಗಿರುವಂತೆ 198 ವಾರ್ಡ್‌ಗಳಿಗೆ ಚುನಾವಣೆ ನಡೆಯಲಿದೆಯೇ ಅಥವಾ ಸರಕಾರ ಹೈಕೋರ್ಟ್ ತೀರ್ಪಿನ ವಿರುದ್ಧ ಸುಪ್ರೀಂಗೆ ಮೇಲ್ಮನವಿ ಸಲ್ಲಿಸಲಿದೆಯೇ ಪಿಐಎಲ್ ಸಲ್ಲಿಸಿರುವ ಕಾಂಗ್ರೆಸ್ ಸದಸ್ಯರಾದ ಶಿವರಾಜ್ ಹಾಗೂ ಅಬ್ದುಲ್ ವಾಜಿದ್ ಅವರ ಮುಂದಿನ ನಡೆ ಏನು ಎಂಬುದು ಶುಕ್ರವಾರ ತೀರ್ಪಿನ ನಂತರ ಗೊತ್ತಾಗಲಿದೆ.

ಜಯ ಕಿರಣ
JAYAKIRANA MORNING DAILY ವಸ್ತುನಿಷ್ಠ ಸುದ್ದಿ-ಮಾಹಿತಿಗಳ ಪ್ರತಿಬಿಂಬ

| Date | 03-12-2020 |
| --- | --- |
| Page No | 1 |

## ಚುನಾವಣಾ ಆಯೋಗ: ಬಿಬಿಎಂಪಿ ಚುನಾವಣೆಗೆ ಸಕಲ ಸಿದ್ಧತೆ

# ಹೈಕೋರ್ಟ್ ಆದೇಶಕ್ಕಾಗಿ ಆರಂಭವಾಯ್ತಾ ಕ್ಷಣಗಣನೆ?






ಬೆಂಗಳೂರು: ಬಿಬಿಎಂಪಿ ವಾರ್ಡ್‌ಗಳ ಸಂಖ್ಯೆಯನ್ನು 243ಕ್ಕೆ ಏರಿಸಲೇಬೇಕೆಂದು ಸರ್ಕಾರ ನಿರ್ಧರಿಸಿದೆ. ಆದರೆ ಚುನಾವಣಾ ಆಯೋಗ ಈ ಎಲ್ಲ ಗೊಂದಲಗಳನ್ನು ಬದಿಗಿಟ್ಟು, ಪ್ರಸ್ತುತ ಜನಗಣತಿಯ ಪ್ರಕಾರ ವಾರ್ಡ್‌ಗಳನ್ನು ಮರುವಿಂಗಡಣೆ ಮಾಡಿ ಸರ್ಕಾರದ ಅಧಿಸೂಚನೆಗೆ ಅನುಗುಣವಾಗಿ ಚುನಾವಣಾ ಪ್ರಕ್ರಿಯೆಯ ಪೂರ್ವ ತಯಾರಿ ಮಾಡಿಕೊಂಡಿದೆ. ಅದರಲ್ಲೂ 2018ರ ವಿಧಾನಸಭಾ, 2019 ಲೋಕಸಭಾ ಚುನಾವಣೆಯ ಅನಂತರ ನಡೆಯಲಿರುವ ಬಿಬಿಎಂಪಿ ಚುನಾವಣೆಗೆ ಪಟ್ಟಿ ಪರಿಷ್ಕರಣೆ ಕೊನೆಯ ಪುಟಕ್ಕೆ

## ಕ್ಷಣಗಣನೆ?

ಪೂರ್ಣಗೊಂಡಿದೆಯಂತೆ. ಒಟ್ಟಾರೆ ಲೆಕ್ಕಾಚಾರದಲ್ಲಿ 8 ಲಕ್ಷಕ್ಕೂ ಹೆಚ್ಚಿನ ಹೊಸ ಮತದಾರರು ಸೇರ್ಪಡೆಯಾಗಲಿದ್ದು, ಪ್ರಸ್ತುತ 42,32,632 ಪುರುಷರು, 38,97,694 ಮಹಿಳೆಯರು, 1,392 ತೃತೀಯ ಲಿಂಗಿಗಳು ಅಧಿಕೃತಗೊಂಡು 81,31,723 ಅಧಿಕೃತ ಮತದಾರರು ಮುಂದಿನ ಪಾಲಿಕೆಯ ಹಣೆಬರಹ ನಿರ್ಧರಿಸಲಿದ್ದಾರೆ. ಸದ್ಯ ಹೈಕೋರ್ಟ್ ಅಂಗಳದಲ್ಲಿ ವಾದ ಪ್ರತಿವಾದಗಳ ವಿಚಾರಣೆ ನಡೆಸಿರುವ ಮುಖ್ಯ ನ್ಯಾಯಾಧೀಶರಾದ ಓಕಾ ತೀರ್ಪನ್ನು ಕಾಯ್ದಿರಿಸಿದ್ದಾರೆ.

ಒಂದು ಲೆಕ್ಕಾಚಾರದ ಪ್ರಕಾರ ಸರ್ಕಾರ ಆಡಳಿತ ನಡೆಸಲಿಕ್ಕೆ, ಚುನಾವಣಾ ಆಯೋಗ ಚುನಾವಣೆ ಪ್ರಕ್ರಿಯೆ ಕಾರ್ಯಗತಗೊಳಿಸಲು ಇದ್ದರೂ ಸರ್ಕಾರ ಮೂಗು ತೂರಿಸಿ ಚುನಾವಣಾ ಪ್ರಕ್ರಿಯೆಯಲ್ಲಿ ಹಸ್ತಕ್ಷೇಪ ಮಾಡಕೂಡದು ಎಂಬ ಸ್ಪಷ್ಟ ಕಾನೂನಿದೆ. ಅದಕ್ಕೆ ಪುಷ್ಠಿ ಕೊಟ್ಟಂತೆ ಹೈಕೋರ್ಟ್ ಗ್ರಾಮ ಪಂಚಾಯ್ತಿ ಚುನಾವಣೆಗೆ ಆದೇಶ ನೀಡಿ ಸರ್ಕಾರವನ್ನು ಎಚ್ಚರಿಸಿದೆ. ಇದೀಗ ಮುಂದುವರೆದು ತೀರ್ಪಿನ ಪ್ರಕಾರ ಈಗಿರುವಂತೆ 198 ವಾರ್ಡ್‌ಗಳಿಗೆ ಅನ್ವಯವಾಗುವ ಹಾಗೆ ಅಥವಾ 243ಕ್ಕೆ ಹೆಚ್ಚಳ ಮಾಡಿ ನಡೆಸಬೇಕೆಂಬುದನ್ನು ಸ್ಪಷ್ಟವಾಗಿ ಆದೇಶ ನೀಡಲಿದೆ.

ಅಕಸ್ಮಾತ್ 198 ವಾರ್ಡ್‌ಗಳಿಗೆ ಅನುಗುಣವಾಗಿ ಚುನಾವಣೆ ನಡೆಸಬೇಕೆಂದು ಹೈಕೋರ್ಟ್ ಆದೇಶವಿಟ್ಟರೆ ಸರ್ಕಾರಕ್ಕೆ ಅದು ಮುಖಭಂಗ. ಸದ್ಯ ಚುನಾವಣೆ ನಡೆಸಲು ಮನಸ್ಸಿಲ್ಲದ ಸರ್ಕಾರ ಈ ಆದೇಶದ ವಿರುದ್ಧ ಸುಪ್ರೀಂ ಕೋರ್ಟ್ ಮೆಟ್ಟಿಲು ಏರಬಹುದ. ಆದರೂ ಕೆಲ ಆದೇಶಗಳನ್ನು ಪುಷ್ಟೀಕರಿಸಿ ಚುನಾವಣೆ ನಡೆಸಲೇಬೇಕೆಂದು ಒತ್ತಡ ಹೇರುತ್ತಿರುವ ಕಾಂಗ್ರೆಸ್ ನಿಯೋಗ ಸುಪ್ರೀಂ ಕೋರ್ಟ್‌ನಲ್ಲಿ ತಮ್ಮ ವಾದವನ್ನೇ ಪಟ್ಟು ಹಿಡಿದರೆ ಸುಪ್ರೀಂ ಕೋರ್ಟ್ ಕೂಡ ಹೈಕೋರ್ಟ್ ಆದೇಶವನ್ನು ಎತ್ತಿಹಿಡಿಯಬಹುದು.

ಒಟ್ಟಿನಲ್ಲಿ ಸರ್ಕಾರ ಚುನಾವಣೆ ನಡೆಸಲೇಬೇಕಾದ ಪರಿಸ್ಥಿತಿ ಉಂಟಾಗಬಹುದು. ಅದಕ್ಕೆ ಪೂರಕವಾಗಿ ಚುನಾವಣಾ ಆಯೋಗವಂತೂ ಸಕಲ

ಸಂಜೆವಾಣಿ
1982

| Date | 03-12-2020 |
| --- | --- |
| Page No | 3 |

# ರಸ್ತೆಗುಂಡಿ ಅವಾಂತರ ಮೃತರಿಗೆ ಬಿಬಿಎಂಪಿ ಪರಿಹಾರ

ಬೆಂಗಳೂರು,ಡಿ.3-ರಾಜ್ಯರಾಜಧಾನಿ ಬೆಂಗಳೂರಿನ ರಸ್ತೆ ಗುಂಡಿಗಳಿಗೆ ಬಿದ್ದು ಸಾವನ್ನಪ್ಪಿದ ಕುಟುಂಬಸ್ಥರಿಗೆ ಹಾಗೂ ಗಾಯಾಳುಗಳಿಗೆ ಬಿಬಿಎಂಪಿ ಪರಿಹಾರ ನೀಡುವ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ.

ಈಗಾಗಲೇ ಕರ್ನಾಟಕ ಮುನಿಸಿಪಲ್ ಕಾರ್ಪೋರೇಷನ್ ಕಾಯ್ದೆ 1976ರ ಅನ್ವಯ ಸಾರ್ವಜನಿಕ ಪ್ರಕಟಣೆ ಹೊರಡಿಸಲಾಗಿದ್ದು,

ಬಿಬಿಎಂಪಿಗೆ ಸೇರಿದ ರಸ್ತೆ ಮತ್ತು ಪಾದಾಚಾರಿ, ಅಸಮರ್ಪಕ ನಿರ್ವಹಣೆ, ರಸ್ತೆಗುಂಡಿಗಳಿಂದಾಗಿ ಅಪಘಾತ ಉಂಟಾಗಿ ಜೀವಕ್ಕೆ ಹಾನಿ, ಗಾಯಾಳುಗಳಾಗಿದ್ದಲ್ಲಿ ವೈದ್ಯಕೀಯ



ಪರಿಹಾರಕ್ಕಾಗಿ ಅರ್ಜಿ ಸಲ್ಲಿಸಬಹುದು ಎಂದು ಪಾಲಿಕೆ ತಿಳಿಸಿದೆ.

ಎಷ್ಟು ಹಣ: ಅಪಘಾತ ನಡೆದ 30 ದಿನಗಳಲ್ಲಿ ಅರ್ಜಿ ಸಲ್ಲಿಸಬಹುದಾಗಿದ್ದು,

ಸಣ್ಣ ಗಾಯಗಳಿದ್ದಲ್ಲಿ 5 ಸಾವಿರ ರೂ. ಗಾಯಕ್ಕೆ ಮೂರು ದಿನಗಳಿಗಿಂತ ಹೆಚ್ಚಿನ ಅವಧಿಯ ಚಿಕಿತ್ಸೆಯ ಅಗತ್ಯವಿದ್ದರೆ, 10 ಸಾವಿರ. ಗಂಭೀರ ಗಾಯಾಳುಗಳಿವೆ 15 ಸಾವಿರ ರೂ. ಅದೇ ರೀತಿಯಲ್ಲಿ ಸಾವನ್ನಪ್ಪಿದ ಸಂತ್ರಸ್ತರ ಕುಟುಂಬಕ್ಕೆ 3 ಲಕ್ಷ ರೂ. ಪರಿಹಾರಧನ ಘೋಷಿಸಲಾಗಿದೆ. ಅದೇ ರೀತಿ ಮಧ್ಯಂತರ ಪರಿಹಾರದ ಜೊತೆಗೆ, ವಿಶೇಷ ಆಯುಕ್ತರಿಗೆ 10 ಸಾವಿರ ರೂ.ವರೆಗೆ ವೈದ್ಯಕೀಯ ವೆಚ್ಚವನ್ನು ಸಂತ್ರಸ್ತರಿಗೆ ನೀಡುವ ಅಧಿಕಾರವನ್ನು ನೀಡಲಾಗಿದೆ.

ಆದರೆ, ಇದನ್ನು ಬಿಬಿಎಂಪಿ ಹೇಗೆ ಪರಿಗಣನೆಗೆ ತೆಗೆದುಕೊಳ್ಳಲಿದೆ ಎನ್ನುವ ಬಗ್ಗೆ ಅಧಿಕಾರಿಗಳ ಬಗ್ಗೆ ಮಾಹಿತಿ ಇಲ್ಲ ಎನ್ನುವ ಮಾತುಗಳು ಕೇಳಿ ಬಂದಿವೆ.

ರಸ್ತೆಗಳು ಕಳಪೆಯಾಗಿರುವುದರಿಂದ ಅಪಘಾತಕ್ಕೀಡಾದವರಿಗೆ ಪರಿಹಾರ ಪಾವತಿಸಲು ಮಾರ್ಗಸೂಚಿಗಳನ್ನು ಕರ್ನಾಟಕ ಹೈಕೋರ್ಟ್‌ನ ನಿರ್ದೇಶನದ ಮೇರೆಗೆ ಸಿದ್ಧಪಡಿಸಲಾಗಿದೆ ಎಂದು ಬಿಬಿಎಂಪಿ ಅಧಿಕಾರಿಗಳು ತಿಳಿಸಿದ್ದಾರೆ.

**ಹೈಕೋರ್ಟ್ ಆದೇಶ:**

ಉತ್ತಮ ಸ್ಥಿತಿಯ ರಸ್ತೆ ಹೊಂದುವುದು ಹಾಗೂ ಅದರಲ್ಲಿ ಸುಗಮವಾಗಿ ಸಂಚರಿಸುವುದು ಜನರ ಮೂಲಭೂತ ಹಕ್ಕು.

(ನಾಲ್ಕನೇ ಪುಟ ನೋಡಿ)

# ರಸ್ತೆಗುಂಡಿ ಅವಾಂತರ ಮೃತರಿಗೆ ಬಿಬಿಎಂಪಿ ಪರಿಹಾರ

ಹೀಗಾಗಿ ನಗರದಲ್ಲಿ ರಸ್ತೆಗುಂಡಿಗಳಿಂದ ಅಪಘಾತ ಸಂಭವಿಸಿ ತೊಂದರೆಗೆ ಒಳಗಾದ ನಾಗರಿಕರಿಗೆ ಬಿಬಿಎಂಪಿ ಪರಿಹಾರ ನೀಡಬೇಕು ಎಂಬ ಮಹತ್ವದ ತೀರ್ಪನ್ನು ಹೈಕೋರ್ಟ್ ಹಿಂದಿನ ವರ್ಷ ನೀಡಿತ್ತು.

ಇನ್ನೂ ಪರಿಹಾರ ಮಾರ್ಗಸೂಚಿ ಪ್ರಕಾರ, ಘಟನೆ ನಡೆದ ಹಲವು ದಿನಗಳ ಬಳಿಕ ಅರ್ಜಿ ಸಲ್ಲಿಸಿದರೆ, ಅದನ್ನು ತಿರಸ್ಕರಿಸಬಹುದು. ಅರ್ಜಿದಾರರು, ಯಾವುದೇ ರೀತಿಯ ದಾಖಲೆಗಳು ಅಥವಾ ಪುರಾವೆಗಳನ್ನು ಒದಗಿಸಲು ಮುಕ್ತರಾಗಿದ್ದಾರೆ.

ಅದು ಕಣ್ಣಿನ ಸಾಕ್ಷಿಗಳು, ಪೊಲೀಸ್ ದೂರು ಅಥವಾ ಸಿಸಿಟಿವಿ ದೃಶ್ಯಾವಳಿಗಳಾಗಿರಬಹುದು. ಇಲ್ಲಿಯವರೆಗೆ, ಪರಿಹಾರಕ್ಕಾಗಿ ನಾವು ಕೇವಲ ಒಂದು ಅರ್ಜಿ ಮಾತ್ರ ಸ್ವೀಕರಿಸಿದ್ದು ಅದು ಪ್ರಕ್ರಿಯೆಯಲ್ಲಿದೆ ಎಂದು ಅಧಿಕಾರಿಯೊಬ್ಬರು ಸಂಜೆವಾಣಿಗೆ ಹೇಳಿದರು.

ಸಂಜೆವಾಣಿ 1982

| Date | 03-12-2020 |
|---|---|
| Page No | 8 |



# ಬಿಬಿಎಂಪಿ ಚುನಾವಣೆ

# ನಾಳೆ ಹೈತೀರ್ಪು ಪ್ರಕಟ

ಬೆಂಗಳೂರು, ಡಿ.3–ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಗೆ (ಬಿಬಿಎಂಪಿ) ತ್ವರಿತವಾಗಿ ಚುನಾವಣೆ ನಡೆಸುವಂತೆ ಕೋರಿ ಸಲ್ಲಿಸಲಾಗಿರುವ ಅರ್ಜಿಯ ತೀರ್ಪು ಅನ್ನು ಹೈಕೋರ್ಟ್ ಪೀಠವೂ? ನಾಳೆಗೆ ಕಾಯ್ದಿರಿಸಿದೆ.

ಶುಕ್ರವಾರ ಮಧ್ಯಾಹ್ನ 2:30ರ ನಂತರ ಹೈಕೋರ್ಟ್ ಮಹತ್ವದ ತೀರ್ಪನ್ನು ಪ್ರಕಟ ಮಾಡಲಿದ್ದು, ತ್ವರಿತವಾಗಿ ಚುನಾವಣೆ ನಡೆಯಲಿದೆಯೂ ಅಥವಾ ವಿಳಂಬ ಆಗಲಿದೆಯೂ ಕಾದು ನೋಡಬೇಕಾಗಿದೆ.

ಹಿನ್ನೆಲೆ: ಬೆಂಗಳೂರು ಮಹಾ ನಗರ ಪಾಲಿಕೆಗೆ ಚುನಾವಣೆ ಮಾಡಬೇಕು. ಸದಸ್ಯರ ಅವಧಿ ಮುಗಿದಿದೆ. ಸಂವಿಧಾನ ಬದ್ಧವಾಗಿ ಅವಧಿ ಮುಗಿದ ಕೂಡಲೇ ಚುನಾವಣೆ ನಡೆಸಬೇಕು. ವಾರ್ಡ್ ಪುನರ್ ವಿಂಗಡಣೆ ನೆಪದಲ್ಲಿ ಚುನಾವಣೆ ಮುಂದೂಡುವ ದುರುದ್ದೇಶ ಹೊಂದಿದೆ ಎಂದು ಪಾಲಿಕೆ ಮಾಜಿ ಸದಸ್ಯ ಶಿವರಾಜ್ ಹಾಗೂ ಅಬ್ದುಲ್ ವಾಜೀದ್ ಇತರರು ಅರ್ಜಿ ಸಲ್ಲಿಸಿದ್ದರು.

ಇದಕ್ಕೆ ಸಂಬಂಧಿಸಿದಂತೆ ಚುನಾವಣೆ ಆಯೋಗ ಕೂಡ ಪ್ರಮಾಣ ಪತ್ರ ಸಲ್ಲಿಸಿದ್ದು, ಆಯೋಗ ಸಹ ಚುನಾವಣೆ ನಡೆಸಲು ಸಿದ್ಧವಿದೆ. ಈಗಾಗಲೇ ಪರಿಷ್ಕೃತ ಮತದಾರರ ಪಟ್ಟಿ ತಯಾರಿ ಮಾಡಲಾಗಿದೆ. ಇದಕ್ಕಾಗಿ ಮೂರು ಕೋಟಿ ರೂಪಾಯಿ ಕೂಡ ಆಯೋಗ ವೆಚ್ಚ ಮಾಡಿದೆ. ಚುನಾವಣೆ ಮುಂದೂಡಿದರೆ ಸಾರ್ವಜನಿಕ ಹಣ ವ್ಯರ್ಥವಾಗಲಿದೆ. ಆಡಳಿತಾತ್ಮಕ ದೃಷ್ಟಿಯಿಂದ ತ್ವರಿತವಾಗಿ ಚುನಾವಣೆ ನಡೆಸುವುದು ಸೂಕ್ತ ಎಂದು ರಾಜ್ಯ ಚುನಾವಣಾ ಆಯೋಗ ಕೂಡ ತನ್ನ ವಾದ ಮಂಡಿಸಿತ್ತು.

ಇದಕ್ಕೆ ಪ್ರತಿಯಾಗಿ ವಾದ ಮಂಡಿಸಿದ ಅಡ್ವೋಕೇಟ್ ಜನರಲ್ ಪ್ರಭುಲಿಂಗ ನಾವಡಗಿ ಅವರು, ಬೆಂಗಳೂರು ಮೊದಲಿಗಿಂತಲೂ ಬೃಹದಾಕಾರವಾಗಿ ಬೆಳೆದು ನಿಂತಿದೆ. ಹೀಗಾಗಿ ಮೊದಲಿಗಿಂತಲೂ ಬಿಬಿಎಂಪಿ ವಾರ್ಡ್ ಗಳ ಸಂಖ್ಯೆ ಹೆಚ್ಚಿಸಲಾಗಿದೆ. ಹೀಗಾಗಿ ಕ್ಷೇತ್ರ ಪುನರ್ ವಿಂಗಡಣೆ ಮಾಡಿ ಶೀಘ್ರವಾಗಿ ಚುನಾವಣೆ ನಡೆಸಲಾಗುವುದು ಎಂದು ವಾದ ಮಂಡಿಸಿದರು. ಎರಡೂ ಕಡೆ ವಾದಗಳು ಪೂರ್ಣಗೊಂಡಿದ್ದು, ಮುಖ್ಯ ನ್ಯಾಯಮೂರ್ತಿ ಒಳಗೊಂಡ ವಿಭಾಗೀಯ ಪೀಠ ತೀರ್ಪನ್ನು ಕಾಯ್ದಿರಿಸಿದೆ.

ಬೆಂಗಳೂರಿನ ಬೃಹತ್ ಮಹಾ ನಗರ ಪಾಲಿಕೆ ಸದ್ಯ 198 ವಾರ್ಡ್ ಒಳಗೊಂಡಿದ್ದು, ಕ್ಷೇತ್ರ ಪುನರ್ ವಿಂಗಡಣೆ ಮಾಡಿ 250 ವಾರ್ಡ್ ಗಳನ್ನಾಗಿ ಪರಿವರ್ತಿಸಲು ಸರ್ಕಾರ ಮುಂದಾಗಿದೆ. ಬಿಜೆಪಿ ಶಾಸಕ ರಘು ಅವರ ಅಧ್ಯಕ್ಷತೆಯಲ್ಲಿ ರಚಿಸಿದ್ದ ಕಮಿಟಿ ಬೆಂಗಳೂರಿನ ಜನ ಸಂಖ್ಯೆಗೆ ಅನುಗುಣವಾಗಿ ವಾರ್ಡ್ ಗಳನ್ನು ಹೆಚ್ಚಿಸುವ ಬಗ್ಗೆ ವಿಧಾನಸಭೆ ಸಭಾಧ್ಯಕ್ಷರಿಗೆ ವರದಿ ನೀಡಿದ್ದರು.

ಇದಾದ ಬಳಿಕ ವರದಿಯಲ್ಲಿ ಬೆಂಗಳೂರಿನಲ್ಲಿ ಜನ ಸಂಖ್ಯೆ ಹೆಚ್ಚಾಗಿದ್ದು, ಅದಕ್ಕೆ ಅನುಗುಣವಾಗಿ 250 ವಾರ್ಡ್ ಸೃಜಿಸಲು ಸಮಿತಿ ಅಭಿಪ್ರಾಯ ಪಟ್ಟಿತ್ತು. ಇದೇ ವಿಚಾರವಾಗಿ ಚುನಾವಣೆ ಮುಂದೂಡಲಾಗಿತ್ತು.

ಈ ಸಂಜೆ

| Date | 03-12-2020 |
|---|---|
| Page No | 1 |



# ಬಿಬಿಎಂಪಿ ಚುನಾವಣೆ ಭವಿಷ್ಯ ನಾಳೆ ನಿರ್ಧಾರ..

**ಬೆಂಗಳೂರು, ಡಿ.3-** ಬಿಬಿಎಂಪಿ ಚುನಾವಣೆ ಭವಿಷ್ಯ ನಾಳೆ ನಿರ್ಧಾರವಾಗಲಿದ್ದು, ಎಲ್ಲರ ಚಿತ್ತ ಹೈಕೋರ್ಟ್‌ನತ್ತ ನೆಟ್ಟಿದೆ.

ಚುನಾವಣೆ ನಡೆಸುವಂತೆ ಸಲ್ಲಿಸಿರುವ ಸಾರ್ವಜನಿಕ ಹಿತಾಸಕ್ತಿ ಅರ್ಜಿ ವಿಚಾರಣೆ ಪೂರ್ಣಗೊಳಿಸಿ ಅಂತಿಮ ತೀರ್ಪನ್ನು ನಾಳೆಗೆ ಹೈಕೋರ್ಟ್ ಕಾಯ್ದಿರಿಸಿರುವ ಹಿನ್ನೆಲೆಯಲ್ಲಿ ನಾಳೆಯ ತೀರ್ಪಿನತ್ತ ಎಲ್ಲರ ಕುತೂಹಲ ಕೆರಳಿದೆ.

ಪ್ರಸ್ತುತ ಇರುವ 198 ವಾರ್ಡ್‌ಗಳಿಗೆ ಚುನಾವಣೆ ನಡೆಸಲು ಸಿದ್ಧತೆ ಮಾಡಿಕೊಳ್ಳಲಾಗಿದೆ. ಇದಕ್ಕಾಗಿ ಮತದಾರರ ಪಟ್ಟಿಯನ್ನು ಚುನಾವಣಾ ಆಯೋಗ ಸಿದ್ಧಪಡಿಸಿಕೊಂಡಿದೆ. ಸರ್ಕಾರ ಕೂಡ ವಾರ್ಡ್ ಪುನರ್‌ವಿಂಗಡಣೆ ಮಾಡಿ ಮೀಸಲಾತಿ ಪಟ್ಟಿಯನ್ನು ಘೋಷಿಸಿದೆ.

ಹೀಗಾಗಿ ಚುನಾವಣೆ ನಡೆಸಲು ಅವಕಾಶ ನೀಡಬೇಕೆಂದು ಚುನಾವಣಾ ಆಯೋಗ ನ್ಯಾಯಾಲಯದ ಮುಂದೆ ಪ್ರಬಲ ವಾದ ಮಂಡಿಸಿದೆ. ಅಲ್ಲದೆ, ಸಕಾಲದಲ್ಲಿ ಚುನಾವಣೆ ನಡೆಸಲು ಸಿದ್ಧವಿರುವುದಾಗಿ ಆಯೋಗ ಸ್ಪಷ್ಟಪಡಿಸಿದೆ.

...ಪುಟ 4

## ನಾಳೆ ನಿರ್ಧಾರ..

198 ವಾರ್ಡ್‌ಗಳಿರುವ ಬಿಬಿಎಂಪಿಯಲ್ಲಿ 243 ವಾರ್ಡ್‌ಗಳನ್ನು ಹೆಚ್ಚಿಸಲು ಮಸೂದೆ ಮಂಡಿಸಲಾಗಿದೆ. ಇದಕ್ಕೆ ಕಾಲಾವಕಾಶ ಬೇಕು. ಅಲ್ಲದೆ ಬೆಂಗಳೂರಿಗೆ ಪ್ರತ್ಯೇಕ ಕಾಯ್ದೆ ರಚನೆ ಮಾಡಬೇಕಾಗಿದೆ ಎಂದು ಸರ್ಕಾರ ನ್ಯಾಯಾಲಯದ ಮುಂದೆ ಕಾಲಾವಕಾಶ ಕೇಳಿದೆ.

ಸರ್ಕಾರ ಉದ್ದೇಶಪೂರ್ವಕವಾಗಿ ಚುನಾವಣೆ ಮುಂದೂಡುವ ಪ್ರಯತ್ನ ಮಾಡುತ್ತಿದೆ. ನಿಗದಿತ ಅವಧಿಯೊಳಗೆ ಚುನಾವಣೆ ನಡೆಸಬೇಕೆಂದು ಅರ್ಜಿದಾರರು ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಎಲ್ಲ ವಾದ-ವಿವಾದ ಆಲಿಸಿರುವ ನ್ಯಾಯಾಲಯ ನಾಳೆ ಮಧ್ಯಾಹ್ನ ತೀರ್ಪು ಪ್ರಕಟಿಸಲಿದೆ. ತೀರ್ಪು ಯಾರಿಗೆ ವರದಾನವಾಗಲಿದೆ, ಯಾರಿಗೆ ಸಂಕಷ್ಟ ತರಲಿದೆ ಎಂಬುದನ್ನು ಕಾದು ನೋಡಬೇಕಿದೆ.

ಈ ನಡುವೆ ಒಂದು ವೇಳೆ ಚುನಾವಣೆ ನಡೆಸುವಂತೆ ತೀರ್ಪು ನೀಡಿದರೆ ಆಯೋಗ ಸಿದ್ಧವಾಗಿರುವಂತೆ 198 ವಾರ್ಡ್‌ಗಳಿಗೆ ಚುನಾವಣೆ ನಡೆಯಲಿದೆಯೇ ಅಥವಾ ಸರ್ಕಾರ ಹೈಕೋರ್ಟ್ ತೀರ್ಪಿನ ವಿರುದ್ಧ ಸುಪ್ರೀಂಗೆ ಮೇಲ್ಮನವಿ ಸಲ್ಲಿಸಲಿದೆಯೇ? ಪಿಐಎಲ್ ಸಲ್ಲಿಸಿರುವ ಕಾಂಗ್ರೆಸ್ ಸದಸ್ಯರಾದ ಶಿವರಾಜ್ ಹಾಗೂ ಅಬ್ದುಲ್ ವಾಜೀದ್ ಅವರ ಮುಂದಿನ ನಡೆ ಏನು ಎಂಬುದು ನಾಳಿನ ತೀರ್ಪಿನ ನಂತರ ಗೊತ್ತಾಗಲಿದೆ.